"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

# ಕರ್ನಾಟಕ ವಿಧಾನ ಪರಿಷತ್ತು

20ನೇ ಡಿಸೆಂಬರ್ 2018
ಗುರುವಾರ

## ವಿಷಯಾನುಕ್ರಮಣಿಕೆ

**1. ನಿಲುವಳಿ ಸೂಚನೆ ಪ್ರಸ್ತಾವ ಮಂಡಿಸಲು ಅನುಮತಿ ಕೋರಿ ಚರ್ಚೆ**

ಉತ್ತರ ಕರ್ನಾಟಕದ ನೀರಾವರಿ ಯೋಜನೆಗಳ ಬಗ್ಗೆ

ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು)
ಶ್ರೀ ಐವನ್ ಡಿ'ಸೋಜಾ
ಡಾ॥ ವೈ.ಎ.ನಾರಾಯಣ ಸ್ವಾಮಿ
ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ
(ವಿರೋಧ ಪಕ್ಷದ ಮುಖ್ಯ ಸಚೇತಕರು)
ಡಾ॥ ತೇಜಸ್ವಿನಿ ಗೌಡ
ಶ್ರೀ ರಘುನಾಥ ರಾವ್ ಮಲ್ಕಾಪೂರೆ
ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು)
ಶ್ರೀ ಮರಿತಿಬ್ಬೇಗೌಡ
ಶ್ರೀ ಎಸ್.ವ್ಹಿ.ಸಂಕನೂರ
ಶ್ರೀ ಕೆ.ಅಬ್ದುಲ್ ಜಬ್ಬಾರ್
ಶ್ರೀ ಪುಟ್ಟರಂಗಶೆಟ್ಟಿ(ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)
ಶ್ರೀ ಕೆ.ಸಿ.ಕೊಂಡಯ್ಯ
ಶ್ರೀ ಹೆಚ್.ಡಿ.ಕುಮಾರಸ್ವಾಮಿ(ಮುಖ್ಯಮಂತ್ರಿಗಳು)
ಡಾ॥ ಜಯಮಾಲ(ಸಭಾನಾಯಕರು)
ಶ್ರೀ ಆಯನೂರು ಮಂಜುನಾಥ್
ಶ್ರೀ ಎಸ್.ಎಲ್.ಭೋಜೇಗೌಡ
ಶ್ರೀ ಸಾ.ರಾ.ಮಹೇಶ್(ಪ್ರವಾಸೋದ್ಯಮ ಹಾಗೂ ರೇಷ್ಮೆ ಸಚಿವರು)
ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ
ಶ್ರೀ ಬಸವರಾಜ ಪಾಟೀಲ್ ಇಟಗಿ
ಶ್ರೀ ಎಸ್.ಆರ್.ಪಾಟೀಲ್
ಶ್ರೀ ಶರಣಪ್ಪ ಮಟ್ಟೂರ
ಶ್ರೀ ಪಿ.ಆರ್.ರಮೇಶ್
ಶ್ರೀ ಆರ್.ಧರ್ಮಸೇನ
ಶ್ರೀ ಯು.ಟಿ.ಖಾದರ್(ನಗರಾಭಿವೃದ್ಧಿ ಹಾಗೂ ವಸತಿ ಸಚಿವರು)
ಶ್ರೀ ವೆಂಕಟರಾವ್ ನಾಡಗೌಡ
(ಪಶುಸಂಗೋಪನೆ ಹಾಗೂ ಮೀನುಗಾರಿಕೆ ಸಚಿವರು)

~~~~~~~~

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "
~~~~~~~~

**“ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”**

*(594) 20-12-2018 (11.30) ವೈಎಲ್-ಜಿಆರ್*

# <u>ಕರ್ನಾಟಕ ವಿಧಾನ ಪರಿಷತ್ತು</u>

## ಗುರುವಾರ, 20ನೇ ಡಿಸೆಂಬರ್ 2018

ಸದನವು ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿರುವ ವಿಧಾನ ಪರಿಷತ್ತಿನ ಸಭಾಂಗಣದಲ್ಲಿ *ಬೆಳಿಗ್ಗೆ **11** ಗಂಟೆ **33*** ನಿಮಿಷಕ್ಕೆ ಸಮಾವೇಶಗೊಂಡಿತು.

ಸಭಾಪತಿ ***(ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ)*** ಯವರು ಪೀಠದಲ್ಲಿ ಉಪಸ್ಥಿತರಿದ್ದರು.

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ನಿಲುವಳಿ ಸೂಚನೆ ಪ್ರಸ್ತಾವ ಮಂಡಿಸಲು ಅನುಮತಿ ಕೋರಿ ಚರ್ಚೆ**

**ಉತ್ತರ ಕರ್ನಾಟಕದ ನೀರಾವರಿ ಯೋಜನೆಗಳ ಬಗ್ಗೆ.**

- - - -

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೆ, ಇವತ್ತು ಮತ್ತು ನಾಳೆ ಎರಡು ದಿವಸ ಮಾತ್ರ ಸದನದ ಉಪವೇಶನ ಇರುವುದರಿಂದ...

(ಗೊಂದಲ)

**ಶ್ರೀ ಐವನ್ ಡಿ'ಸೋಜಾ(ನಾಮನಿರ್ದೇಶಿತರು):-** ಮಾನ್ಯ ಸಭಾಪತಿಯವರೆ, ಪ್ರತಿ ಬಾರಿಯೂ ಇದೇ...

(ಗೊಂದಲ)

**ಡಾ: ವೈ.ಎ.ನಾರಾಯಣ ಸ್ವಾಮಿ(ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಮಾನ್ಯ ವಿರೋಧ ಪಕ್ಷದ ನಾಯಕರು ಮಾತನಾಡುತ್ತಿದ್ದಾರೆ. ಮಾನ್ಯ ಐವನ್ ಡಿ'ಸೋಜಾರವರು ಈಗ ಸರ್ಕಾರದ ಮುಖ್ಯ ಸಚೇತಕರಾಗಲಿ, ಸಭಾ ನಾಯಕರಾಗಲಿ ಆಗಿರುವುದಿಲ್ಲ. ಆದರೂ ಪ್ರತಿ ಬಾರಿ ಅವರು ಏಕೆ ಈ ರೀತಿ ಮಧ್ಯದಲ್ಲಿ ಎದ್ದು ನಿಂತು ಮಾತನಾಡುತ್ತಾರೆ? ಮಾನ್ಯ ವಿರೋಧ ಪಕ್ಷದ ನಾಯಕರಿಗೆ ಜನರ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸುವುದಕ್ಕೆ ಅವಕಾಶ ಇದೆ. ಆದ್ದರಿಂದ ಮಾನ್ಯ ವಿರೋಧ ಪಕ್ಷದ ನಾಯಕರು ಮಾತನಾಡುವಂತಹ ಸಂದರ್ಭದಲ್ಲಿ ಮಾನ್ಯ ಐವನ್ ಡಿ'ಸೋಜಾ ಅವರು ಮಧ್ಯದಲ್ಲಿ ಅವರಿಗೆ ಅಡ್ಡಿಪಡಿಸದೆ ಕುಳಿತುಕೊಳ್ಳುವಂತೆ ದಯಮಾಡಿ ಪೀಠ ಆದೇಶವನ್ನು ನೀಡಬೇಕೆಂದು ವಿನಂತಿಸುತ್ತೇನೆ.

(ಗೊಂದಲ)

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸದಸ್ಯರೆ, ತಾವು ಕುಳಿತುಕೊಳ್ಳಿ.

(ಗೊಂದಲ)

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಒಂದು ವಿಚಾರವನ್ನು ತಾವು ಸ್ಪಷ್ಟಪಡಿಸಬೇಕಾಗುತ್ತದೆ.

(ಗೊಂದಲ)

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಡಾ॥ ಜಯಮಾಲ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರ ಅವಧಿ ನಮ್ಮ ಹಕ್ಕಾಗಿದೆ.

(ಗೊಂದಲ)

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಮಾನ್ಯ ಸಭಾನಾಯಕರು ಮೊದಲು ನಾವು ಹೇಳುವುದನ್ನು ಕೇಳಲಿ. ನಾನು ಏನೂ ಮಾತನಾಡಿರುವುದಿಲ್ಲ. ಏತಕ್ಕಾಗಿ ಅವರುಗಳು ಗಲಾಟೆ ಮಾಡುತ್ತಿದ್ದಾರೆ. ನಾನು ಎದ್ದು ನಿಂತಿದು ಬಿಟ್ಟರೆ, ಇನ್ನೂ ಏನು ಮಾತನಾಡಿಯೇ ಇಲ್ಲ. ಅವರು ಏತಕ್ಕೆ ಗಲಾಟೆ ಮಾಡುತ್ತಿದ್ದಾರೆ?

(ಗೊಂದಲ)

**ಶ್ರೀ ಎಂ.ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಅವರು ಎದ್ದು ನಿಂತರೆ ಯಾವ ರೀತಿ ಸದನ ನಡೆಯುತ್ತದೆ ಎಂಬುದು ಗೊತ್ತಿದೆ. ಮೊದಲು ಪ್ರಶ್ನೋತ್ತರ ಕಲಾಪ ಮುಗಿಯಲಿ.

(ಗೊಂದಲ)

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೆ, ಅವರು ಏನನ್ನೋ ಹೇಳುವುದಕ್ಕೆ ಹೊರಟಿದ್ದಾರೆ. ಈಗ ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಳ್ಳಬೇಕೇ ಅಥವಾ ಕಾರ್ಯಕಲಾಪಗಳ ಪಟ್ಟಿಯಲ್ಲಿರುವ ಬೇರೆ ವಿಚಾರವನ್ನು ಚರ್ಚೆಗೆ ತೆಗೆದುಕೊಳ್ಳಬೇಕೇ ಎನ್ನುವುದು ಪೀಠಕ್ಕೆ ಬಿಟ್ಟ ವಿಚಾರ. ನಾನು ವಿರೋಧ ಪಕ್ಷದ ನಾಯಕನಾಗಿ ಎದ್ದು ನಿಂತಿದ್ದೇನೆ ಅಷ್ಟೇ. ನಾನು ಎದ್ದ ಕೂಡಲೇ ಅವರು ಏಕೆ ಗಲಾಟೆ ಮಾಡುತ್ತಿದ್ದಾರೆ, ಗಲಾಟೆ ಮಾಡುವುದಕ್ಕಾಗಿಯೇ ಅವರು ಬಂದಿದ್ದಾರೆಯೇ? ನಮಗೆ ಅವರು ಏನು ತೀರ್ಮಾನ ಮಾಡಿಕೊಂಡಿದ್ದಾರೆ ಎಂಬುದು ಗೊತ್ತಿಲ್ಲ. ಆದರೆ, ನಾನು ತಮ್ಮ ಗಮನಕ್ಕೆ ತರುವಂಥ ವಿಚಾರವೇನೆಂದರೆ, ಇವತ್ತು ಹಾಗೂ ನಾಳೆ ಬಹುತೇಕ ಅರ್ಧ ದಿವಸ ಮಾತ್ರ ಸದನ ಇರುತ್ತದೆ. ಉತ್ತರ ಕರ್ನಾಟಕದ ಅನೇಕ ಜ್ವಲಂತ ಸಮಸ್ಯೆ ಬಗ್ಗೆ ಚರ್ಚೆ ಆಗಿಲ್ಲ ಎನ್ನುವುದರ ಬಗ್ಗೆ ಮಾಧ್ಯಮದಲ್ಲಿಯೂ ಪ್ರಕಟವಾಗಿದೆ ಮತ್ತು ಸಾರ್ವಜನಿಕರಲ್ಲಿಯೂ ಅದೇ ರೀತಿಯ ಅಭಿಪ್ರಾಯಗಳು ವ್ಯಕ್ತವಾಗಿವೆ. ಹಾಗಾಗಿ ತಮ್ಮಲ್ಲಿ ವಿನಂತಿ ಮಾಡಿಕೊಳ್ಳುವುದೇನೆಂದರೆ, ಉತ್ತರ ಕರ್ನಾಟಕದಲ್ಲಿರುವಂಥ ಅತ್ಯಂತ ಘೋರ ಸಮಸ್ಯೆಗಳಾದ ಅದರಲ್ಲಿಯೂ ಕುಡಿಯುವ ನೀರಿನ ಸಮಸ್ಯೆ, ಬೇರೆ ಬೇರೆ ನೀರಾವರಿ ಯೋಜನೆಗಳು ನೆನೆಗುದಿಗೆ ಬಿದ್ದಿರುವಂಥದ್ದರ ಬಗ್ಗೆ ಬೆಳಕು ಚೆಲ್ಲುವುದಕ್ಕೆ ಅವಕಾಶ ಮಾಡಿಕೊಡಬೇಕೆಂದು

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ತಮಗೆ ತಿಳಿಸುವುದಕ್ಕಾಗಿ ನಾನು ಎದ್ದು ನಿಂತಿದ್ದು. **(ಗೊಂದಲ)** 371ಜೆ ಬಗ್ಗೆ ಇದೇ ಸದನದಲ್ಲಿ ನಾವು ಚರ್ಚೆ ಮಾಡಿದ್ದೆವು.

(ಗೊಂದಲ)

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರ ಅವಧಿಯನ್ನು ಕೈಗೆತ್ತಿಕೊಂಡಿರುವುದಿಲ್ಲ. ಅವರು ಭಾಷಣವನ್ನು ಮಾಡುವುದಕ್ಕೆ ಹೋಗುತ್ತಿದ್ದಾರೆ.

**ಡಾ॥ ವೈ.ಎ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ತಾವು mention ಮಾಡಿ.

(ಗೊಂದಲ)

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಉತ್ತರ ಕರ್ನಾಟಕ ಪ್ರದೇಶವೂ ಹಿಂದುಳಿದಿದ್ದು, ಡಾ॥ಡಿ.ಎಂ.ನಂಜುಂಡಪ್ಪ ವರದಿಯಿಂದಲೂ ಏನು ಅನುಷ್ಠಾನವಾಗಿಲ್ಲ ಎನ್ನುವ ಅಭಿವೃದ್ಧಿಯ ಸೂಚ್ಯಂಕದಲ್ಲಿ ಅತ್ಯಂತ ಹಿಂದುಳಿದ ಪ್ರದೇಶ ಯಾವುದೆಂದರೆ ಉತ್ತರ ಕರ್ನಾಟಕದ ಬಹುತೇಕ ಹಳ್ಳಿಗಳು ಎಂದು ರಾಜ್ಯದ ವರದಿ ಹೇಳುತ್ತದೆ. ಈ ಹಿನ್ನಲೆಯಲ್ಲಿ ತಮ್ಮ ಗಮನಕ್ಕೆ ತರುವುದೇನೆಂದರೆ, ....

**ಸಭಾಪತಿಯವರು:-** ಆಯಿತು. ಈ ವಿಚಾರವನ್ನು ಪ್ರಶ್ನೋತ್ತರ ಅವಧಿ ಮುಗಿದ ಮೇಲೆ ತೆಗೆದುಕೊಂಡರೆ ಆಗುವುದಿಲ್ಲವೇ?

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ನಾನು ಹೇಳುವುದನ್ನು ತಾವು ದಯಮಾಡಿ ಕೇಳಬೇಕು. ಮೊದಲು ನನ್ನ ಮಾತನ್ನು ಪೂರ್ಣಗೊಳಿಸುತ್ತೇನೆ. ಇವತ್ತು ನಿಲುವಳಿ ಸೂಚನೆಯ ಅಡಿಯಲ್ಲಿ ವಿಷಯವೊಂದನ್ನು ಪ್ರಸ್ತಾಪಿಸಲು ಅವಕಾಶ ಕೋರಿ ಈಗಾಗಲೇ ಸೂಚನಾ ಪತ್ರವೊಂದನ್ನು ತಮಗೆ ಕಳುಹಿಸಿ ಕೊಟ್ಟಿದ್ದೇವೆ. ಉತ್ತರ ಕರ್ನಾಟಕ ಭಾಗದ ಅನೇಕ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲಬೇಕಾದ ಅನಿವಾರ್ಯತೆ ಇರುವುದರಿಂದ ಈ ವಿಷಯದ ಬಗ್ಗೆ ಒಂದು ದಿವಸ ಚರ್ಚೆ ಮಾಡೋಣ. ನಾಳೆ ಅರ್ಧ ದಿವಸ ಮಾತ್ರ ಸದನ ನಡೆಯುತ್ತದೆ. ಸದನವನ್ನು ಮುಂದೂಡುವುದಾದರೆ ಅಥವಾ ಸದನವನ್ನು ಇನ್ನೂ 2 ದಿವಸಗಳವರೆಗೆ ನಡೆಸುತ್ತೇವೆಂದು ತಾವು ಹೇಳಿದರೆ, ನಮಗೆ ಏನು ತೊಂದರೆ ಇಲ್ಲ. ಹಾಗಾಗಿ ಈ ನಿಲುವಳಿ ಸೂಚನೆಯನ್ನು ತಾವು ಕೈಗೆತ್ತಿಕೊಂಡು

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಉತ್ತರ ಕರ್ನಾಟಕ ಪ್ರದೇಶದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಲು ದಯಮಾಡಿ ಅವಕಾಶ ಮಾಡಿಕೊಡಬೇಕು ಎನ್ನುವಂಥ ಅಗ್ರಹವನ್ನು ನಾನು ಮಾಡುತ್ತಿದ್ದೇನೆ.

**ಡಾ॥ ಜಯಮಾಲ:-** ಮಾನ್ಯ ಸಭಾಪತಿಯವರೆ, ...

**ಸಭಾಪತಿಯವರು:-** ಮಾನ್ಯ ಸದಸ್ಯರೆ, ವಿರೋಧ ಪಕ್ಷದ ನಾಯಕರು ಪ್ರಶ್ನೋತ್ತರ ಕಲಾಪಕ್ಕೂ ಮೊದಲು ನಿಲುವಳಿ ಸೂಚನೆಗೆ ಅವಕಾಶ ಮಾಡಿಕೊಡಬೇಕೆಂದು ಕೇಳುತ್ತಿದ್ದಾರೆ.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ವಿರೋಧ ಪಕ್ಷದ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಯವರೆ, ಇವತ್ತು ಇಡೀ ನಾಡಿನ ಜನತೆ ಬೆಳಗಾವಿಯ ಸುವರ್ಣ ಸೌಧದ ಹತ್ತಿರ ಮುಖ ಮಾಡಿದೆ. ಕಳೆದ 5 ವರ್ಷಗಳಲ್ಲಿ ಮಾನ್ಯ ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರ ಸರ್ಕಾರ ಇದ್ದಾಗಲೂ ಸಹಿತ ಸುಮಾರು 50 ದಿವಸಗಳು ಮಾತ್ರ ಬೆಳಗಾವಿಯ ಅಧಿವೇಶನ ನಡೆಯಿತು. ಇಷ್ಟು ದೊಡ್ಡ ಸುವರ್ಣ ಸೌಧವನ್ನು ನಿರ್ಮಿಸಿ, ...

**ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಈಗಾಗಲೇ ವಿರೋಧ ಪಕ್ಷದ ನಾಯಕರು ಆ ವಿಚಾರವನ್ನು ಪ್ರಸ್ತಾಪ ಮಾಡಿದ್ದಾರೆ. ಪ್ರಶ್ನೋತ್ತರ ಕಲಾಪಕ್ಕೆ ದಯಮಾಡಿ ತಾವು ಅವಕಾಶ ಮಾಡಿಕೊಡಿ.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ:-** ಮಾನ್ಯ ಸದಸ್ಯರೆ, ನನಗೆ ಮಾತನಾಡಲು ಪೀಠ allow ಮಾಡಿದೆ.

(ಗೊಂದಲ)

**ಡಾ॥ ತೇಜಸ್ವಿನಿ ಗೌಡ:-** ಮಾನ್ಯ ಸಭಾಪತಿಯವರೆ, ಸರ್ಕಾರದ ಮನಸ್ಥಿತಿ negative ಆಗಿದೆ. ಅವರು ಪೀಠಕ್ಕೆ ಮನ್ನಣೆ ಕೊಡುತ್ತಿಲ್ಲ. ಮಾನ್ಯ ಸದಸ್ಯರಿಗೆ ಮಾತನಾಡಲು ಪೀಠ ಅವಕಾಶ ಕೊಟ್ಟಿದೆ, ಅವರ ಮಾತುಗಳನ್ನು ಮಾನ್ಯ ಸದಸ್ಯರು ಕೇಳಿಸಿಕೊಳ್ಳಲಿ.

(ಗೊಂದಲ)

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ:-** ಮಾನ್ಯ ಸಭಾಪತಿಯವರೆ, ತಾವು ನನಗೆ ಮಾತನಾಡಲು ಅವಕಾಶ ನೀಡಿದ್ದೀರಿ. ವಿಚಾರ ಪ್ರಸ್ತಾಪ ಮಾಡುತ್ತಿದ್ದೇನೆ. ಸಮಯ ಬಂದಾಗ ಸದಸ್ಯರುಗಳು ಏನು ಹೇಳಬೇಕೋ ಅದನ್ನು ಹೇಳಲಿ.

(ಗೊಂದಲ)

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, I beg to raise a point of order. ತಾವು ಅವರಿಗೆ ಮಾತನಾಡುವುದಕ್ಕೆ ಒಪ್ಪಿಗೆ ನೀಡಿದರೆ, there is a point of order. I am raising the point of order quoting rule book.

**ಡಾ॥ ವೈ.ಎ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ನಾವು ನಿಲುವಳಿ ಸೂಚನೆಯನ್ನು ಕೊಟ್ಟಿದ್ದೇವೆ. ತಾವು ಮಾತನಾಡುವುದಕ್ಕೆ ಅವಕಾಶ ನೀಡಿದ್ದು, ಅದರ ಬಗ್ಗೆ ತೀರ್ಮಾನ ಕೊಟ್ಟಿಲ್ಲ. ತೀರ್ಮಾನವನ್ನು ಕೊಡಬೇಕು. ಎಲ್ಲರಿಗೂ ಚರ್ಚೆ ಮಾಡುವುದಕ್ಕೆ ಅವಕಾಶ ಇದೆ.

**ಸಭಾಪತಿಯವರು:-** ಅವಕಾಶ ಮಾಡಿಕೊಟ್ಟಿಲ್ಲ. ಮಾನ್ಯ ವಿರೋಧ ಪಕ್ಷದ ನಾಯಕರು ಉತ್ತರ ಕರ್ನಾಟಕ ಪ್ರದೇಶದ ಬಗ್ಗೆ ಹೇಳುತ್ತೇವೆ ಎಂದು ಹೇಳಿರುವುದರಿಂದ ಅದನ್ನು ಕೇಳುತ್ತಿದ್ದೇನೆ ಅಷ್ಟೇ. ಹಾಗೆಂದು ನಿಲುವಳಿ ಸೂಚನೆ ಕೈಗೆತ್ತಿಕೊಂಡಿದ್ದೇನೆ ಎಂದಾಗುವುದಿಲ್ಲ. ಅರ್ಥವಾಯಿತೇ? ಉತ್ತರ ಕರ್ನಾಟಕದ ಬಗ್ಗೆ ಮಾತನಾಡಬೇಕೆಂದು ಹೇಳಿದ್ದರಿಂದ ಬೇಡ ಎಂದು ಹೇಳುವುದಕ್ಕೆ ಆಗುವುದಿಲ್ಲ.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ:-** ಮಾನ್ಯ ಸಭಾಪತಿಯವರೆ, ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವಂಥ ಈ ಅಧಿವೇಶನವನ್ನು ಇಡೀ ಕರ್ನಾಟಕ ರಾಜ್ಯದ ಜನತೆ ಗಮನಿಸುತ್ತಿದ್ದಾರೆ. ಅನೇಕ ಸಂದರ್ಭಗಳಲ್ಲಿ ಪ್ರತ್ಯೇಕತೆಯ ಕೂಗನ್ನು ಕೇಳುತ್ತಿದ್ದೇವೆ.

"ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(ಮುಂದುವರೆದಿದೆ...)

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

*(595) 20.12.2018 (11.40) ಟಿಸಿಹೆಚ್-ಎಂಡಿ*

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ** (ಮುಂದುವರೆದುದು...)

ಅನೇಕ ಸಂದರ್ಭಗಳಲ್ಲಿ ಪ್ರತ್ಯೇಕತೆಯ ಕೂಗನ್ನು ನಾವು ಕೇಳುತ್ತಿದ್ದೇವೆ. ಆದರೆ, ಪ್ರತ್ಯೇಕ ಮಾಡುವುದು ಬೇಡ. ನಾವೆಲ್ಲರೂ ಒಂದೇ ತಾಯಿಯ ಮಕ್ಕಳು. ಉತ್ತರ ಕನಾಟಕದ ಜನರು ಅಖಂಡ ಕರ್ನಾಟಕದ ಕನಸನ್ನು ಕಂಡವರು. ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರತಕ್ಕಂಥ ಈ ಅಧಿವೇಶನವನ್ನು ಇಡೀ ನಮ್ಮ ನಾಡಿನ ಜನತೆ ಗಮನಿಸುತ್ತಿದ್ದಾರೆ. ಇಲ್ಲಿ ನಡೆಯತಕ್ಕಂಥ ಚರ್ಚೆಗಳು, ಇಲ್ಲಿಗೆ ಬರತಕ್ಕಂಥ ವಿಚಾರಗಳು, ಇದರ ಬಗ್ಗೆ ತೆಗೆದುಕೊಳ್ಳತಕ್ಕಂಥ ಸರ್ಕಾರದ ನಿರ್ಣಯಗಳು ಜನಪರವಾಗಿರಬೇಕು, ಈ ಭಾಗದ ಜನರ ಭಾವನೆಗಳಿಗೆ ಸ್ಪಂದಿಸಬೇಕು ಎನ್ನತಕ್ಕಂಥ ರೀತಿಯಲ್ಲಿ ಜನ ನಮ್ಮನ್ನು ನೋಡುತ್ತಿದ್ದಾರೆ. ಆದರೆ, ಇವತ್ತಿನ ದಿವಸ ಉತ್ತರ ಕರ್ನಾಟಕದ ಪ್ರಮುಖ ಜೀವನದಿಯಾಗಿರತಕ್ಕಂಥ ಕೃಷ್ಣಾ ನದಿಯ UKP (Upper Krishna Project) ಬಗ್ಗೆ ನಾವು ಚರ್ಚೆ ಮಾಡಬೇಕಾಗಿದೆ.

**ಡಾ॥ ಜಯಮಾಲ (ಸಭಾ ನಾಯಕರು):-** ಮಾನ್ಯ ಸಭಾಪತಿಯವರೆ, ಒಂದು ನಿಮಿಷ.

**ಸಭಾಪತಿಯವರು:-** ಮಾನ್ಯ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನರವರೇ, ನಾನು ನಿಮಗೆ ಪ್ರಸ್ತಾಪ ಮಾಡುವುದಕ್ಕೆ ಆಗುವುದಿಲ್ಲವೆಂದು ಹೇಳಿಲ್ಲ. ಈಗ ನಿಮಗೆ ಅದರ ಬಗ್ಗೆ ಮಾತನಾಡಲು ಅವಕಾಶ ಮಾಡಿಕೊಡಲಿಲ್ಲವೆಂದರೆ, ಈ ವಿಚಾರ ಪ್ರಸ್ತಾಪ ಆಗಬೇಕಿತ್ತು. ನಾನು ತಮಗೆ ಮಾತನಾಡಲು ಅವಕಾಶ ಮಾಡಿಕೊಡುವುದಿಲ್ಲವೆಂದು ಹೇಳುವುದಿಲ್ಲ. ಆದರೆ, ಈಗ ಪ್ರಶ್ನೋತ್ತರ ಕಲಾಪ ನಡೆಯಲಿ. ಆ ನಂತರ ತಾವೇನು ಆ ಸಂಬಂಧ ಮಾತನಾಡಬೇಕು ಎಂದುಕೊಂಡಿದ್ದೀರಿ, ಅದನ್ನು ಮಾತನಾಡಬಹುದು.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ವಿರೋಧ ಪಕ್ಷದ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಯವರೆ, ಉತ್ತರ ಕರ್ನಾಟಕದ ನೀರಾವರಿ ಯೋಜನೆ ಬಗ್ಗೆ ನಾವು ಚರ್ಚೆ ಮಾಡಬೇಕಾಗಿದೆ.

**ಡಾ॥ ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ಇಲ್ಲಿಗೆ ಬಂದ ದಿವಸದಿಂದ ಇವತ್ತಿನವರೆಗೂ ಇದರ ಬಗ್ಗೆ ಚರ್ಚೆಗಳಾಗಿವೆ. ಮಾನ್ಯ ಸಚಿವರು ಚರ್ಚೆಗೆ ಉತ್ತರವನ್ನು ಕೂಡ ನೀಡಿದ್ದಾರೆ. ಇದಾದ ನಂತರವೂ ಕೂಡ ಪುನಃ ಪುನಃ ಇದರ ಬಗ್ಗೆಯೇ ಚರ್ಚೆ ಆಗಬೇಕೆಂದರೆ ಹೇಗೆ?

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ:–** ಮಾನ್ಯ ಸಭಾಪತಿಯವರೆ, ದಯವಿಟ್ಟು ಕ್ಷಮಿಸಬೇಕು. ಉತ್ತರ ಕರ್ನಾಟಕ ಭಾಗದಲ್ಲಿನ ಆಲಮಟ್ಟಿ ವಿಚಾರವಾಗಿ ಅಧಿವೇಶನ ಪ್ರಾರಂಭವಾದ ದಿನದಂದು ಒಂದು ಪ್ರಶ್ನೆ ಬಂದಿತ್ತು.

**ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭಾ ಕ್ಷೇತ್ರ):–** ಮಾನ್ಯ ಸಭಾಪತಿಯವರೆ, ಅದರ ಬಗ್ಗೆ ಕೇಳಲಿ, ಆದರೆ, ಪ್ರಶ್ನೋತ್ತರ ಅವಧಿಯಲ್ಲಿಯೇ ಕೇಳಬೇಕೆಂದು ನಿಯಮವೆಲ್ಲಿದೆ?

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ:–** ಮಾನ್ಯ ಸಭಾಪತಿಯವರೆ, ಅದು convert ಆಗಿದೆ, convert ಆದ ನಂತರ ಸರ್ಕಾರದಿಂದ ಅದಕ್ಕೆ ಉತ್ತರ ಬಂದಿಲ್ಲ. ಅದರ ಬಗ್ಗೆ ಚರ್ಚೆ ಆಗಲಿಲ್ಲ. ಮಾನ್ಯ ಎಸ್.ಆರ್.ಪಾಟೀಲ್‌ರವರು ಅದರ ಬಗ್ಗೆ ಮಾತನಾಡಿದ್ದಾರೆ. ನಾಳೆ ಈ ಸದನ ಮುಕ್ತಾಯಗೊಳ್ಳಲಿದೆ.

**ಶ್ರೀ ಎಸ್.ಆರ್.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–** ಮಾನ್ಯ ಸಭಾಪತಿಯವರೆ, ಈ ವಿಷಯದ ಬಗ್ಗೆ ಚರ್ಚೆ ಆಗಿಲ್ಲ.

**ಸಭಾಪತಿಯವರು:–** ಆಯಿತು.

(ಗೊಂದಲ)

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ:–** ಮಾನ್ಯ ಸಭಾಪತಿಯವರೆ, ದಯವಿಟ್ಟು ಈ ವಿಚಾರವನ್ನು ಈಗ ಚರ್ಚೆಗೆ ತೆಗೆದುಕೊಳ್ಳಬೇಕು, ಇವತ್ತು ತಾವು ನಮ್ಮ ರಕ್ಷಣೆಗೆ ಬರಬೇಕು. ಆಲಮಟ್ಟಿ ಜಲಾಶಯದ ನೀರು ಪೂರ್ಣ ಪ್ರಮಾಣದಲ್ಲಿ ಬಳಕೆ ಆಗಬೇಕು ಎಂಬುದು ನಮ್ಮ ಹೋರಾಟವಾಗಿದೆ.

**ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–** ಇವತ್ತು ಪ್ರಶ್ನೋತ್ತರ ಕಲಾಪವನ್ನು ಬದಿಗಿಟ್ಟು, ಉತ್ತರ ಕರ್ನಾಟಕದ ಬಗ್ಗೆ ಚರ್ಚೆ ಮಾಡಬೇಕೆಂದು ನಾವು ಆಗ್ರಹಿಸುತ್ತಿದ್ದೇವೆ.

**ಸಭಾಪತಿಯವರು:–** ವಿರೋಧ ಪಕ್ಷದ ಮುಖ್ಯ ಸಚೇತಕರೇ, ಈ ಬಗ್ಗೆ ಪ್ರಶ್ನೋತ್ತರ ಕಲಾಪದ ನಂತರ ತೆಗೆದುಕೊಳ್ಳಬೇಕೇ ಅಥವಾ ಪ್ರಶ್ನೋತ್ತರ ಕಲಾಪಕ್ಕೂ ಮುಂಚೆ ತೆಗೆದುಕೊಳ್ಳಬೇಕೆ ಎನ್ನತಕ್ಕಂಥದ್ದು ಮಾತ್ರ ಇದೆ. ಈಗ ಪ್ರಶ್ನೋತ್ತರ ಅವಧಿಯ ನಂತರ ಅದರ ಬಗ್ಗೆ ಚರ್ಚೆ ಮಾಡಿ. ಏಕೆಂದರೆ, ಈ ನಿಯಮಾವಳಿಗಳನ್ನು ನಾವೆಲ್ಲಾ ಸೇರಿಯೇ ರೂಪಿಸಿಕೊಂಡಿದ್ದೇವೆ. ಇದನ್ನು ನೀವೇ ನಮಗೆ ಹೇಳಿದ್ದೀರಿ, ಈಗ ನೀವೇ ಅದರ ಬಗ್ಗೆ ಚರ್ಚೆ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ತೆಗೆದುಕೊಳ್ಳಬೇಕೆಂದು ಹೇಳುತ್ತಿದ್ದೀರಿ. ಈಗಲೇ ಚರ್ಚೆಗೆ ತೆಗೆದುಕೊಳ್ಳಿ ಎನ್ನತಕ್ಕಂಥದ್ದು ಅಷ್ಟೊಂದು ಸಮಂಜಸವಲ್ಲ. ಆದಕಾರಣ, ಪ್ರಶ್ನೋತ್ತರ ಅವಧಿ ಮುಗಿದ ನಂತರ ತಾವೇನು ಹೇಳುತ್ತಿದ್ದೀರಿ, ಅದಕ್ಕೆ ಬಹುಶಃ ಚರ್ಚೆ ಆಗಬೇಕಾಗಿದೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಉತ್ತರ ಕರ್ನಾಟಕದ ಸಮಸ್ಯೆ ಬಗ್ಗೆ ಚರ್ಚೆ ಮಾಡಬೇಕು ಎನ್ನುವುದರ ಬಗ್ಗೆ ನಮಗಾಗಲಿ, ನಿಮಗಾಗಲಿ ಯಾವುದೇ ಸಂಘರ್ಷವಿಲ್ಲ.

**ಸಭಾಪತಿಯವರು:-** ಮಾನ್ಯ ಕೋಟ ಶ್ರೀನಿವಾಸ ಪೂಜಾರಿಯವರೆ, ಆ ವಿಷಯ ಬಂದಿಲ್ಲವಲ್ಲ. ಅದರ ಬಗ್ಗೆ ಪ್ರಸ್ತಾಪ ಆಗಿಲ್ಲ. ಇದನ್ನು ಪೀಠ ಕೂಡ ಒಪ್ಪಿಕೊಂಡಿದೆ.

**ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶಿತರು):-** ಮಾನ್ಯ ಸಭಾಪತಿಯವರೆ, ಇದು ನಿಯಮಗಳ ಪ್ರಕಾರ ಇಲ್ಲ. ಒಂದು ವೇಳೆ ಯಾವುದೇ ವಿಷಯವನ್ನು ಸದನದಲ್ಲಿ ಚರ್ಚೆ ಮಾಡಬೇಕಾದರೆ, ಮಾನ್ಯ ಸಭಾಪತಿಯವರಿಗೆ ಲಿಖಿತವಾಗಿ ಒಂದು ಗಂಟೆ ಮುಂಚಿತವಾಗಿ ಕೊಡಬೇಕೆಂದು ನಿಯಮ ಇದೆ.

(ಗೊಂದಲ)

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಆ ಪೀಠವನ್ನು ಪ್ರಶ್ನಿಸುವಂತಹ ಹಕ್ಕು ಯಾರಿಗೂ ಇಲ್ಲ. ಪೀಠವು ಒಂದು ಬಾರಿ allow ಮಾಡಿದರೆ ಆಯಿತು, ನಾವು ಅದರ ಪ್ರಕಾರವೇ ನಡೆದುಕೊಳ್ಳಬೇಕಾಗುತ್ತದೆ.

(ಗೊಂದಲ)

**ಡಾ॥ ವೈ.ಎ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ಸದನದ ಯಾವುದೇ ಸದಸ್ಯರು ಪ್ರಶ್ನೆ ಕೇಳಿದಾಗ, ಸುಮಾರು 500 ಪ್ರಶ್ನೆಗಳಿಗೆ 300 ಪ್ರಶ್ನೆಗಳಲ್ಲಿ ಮಾತ್ರ ಉತ್ತರವನ್ನು ಕೊಡುತ್ತಾರೆ. ಉತ್ತರ ಕರ್ನಾಟಕ ಭಾಗದ ಸಮಸ್ಯೆ ಕುರಿತು ಚರ್ಚೆ ಮಾಡಲು ಸರ್ಕಾರಕ್ಕೆ ಆಸಕ್ತಿ ಇಲ್ಲ. ಆದ್ದರಿಂದ ದಯವಿಟ್ಟು ತಾವು ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂಬುದು ನಮ್ಮ ವಿನಂತಿಯಾಗಿದೆ. ಸದನವನ್ನು ಬೇಕಾದರೆ ಇನ್ನೂ ಎರಡು ದಿನ ಮುಂದುವರೆಸಿ, ಇಲ್ಲವೆಂದರೆ, ಪ್ರಶ್ನೋತ್ತರ ಕಲಾಪವನ್ನು ಮುಂದೂಡಿ ಚರ್ಚೆ ಪ್ರಾರಂಭ ಮಾಡಿ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(ಗೊಂದಲ)

**ಶ್ರೀ ಜಿ.ಟಿ.ದೇವೇಗೌಡ (ಉನ್ನತ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೆ, ಉತ್ತರ ಕರ್ನಾಟಕದ ಚರ್ಚೆ ಬಗ್ಗೆ ತಾವೇನು ತೀರ್ಮಾನ ತೆಗೆದುಕೊಳ್ಳುತ್ತಿರೋ ಅದಕ್ಕೆ ಆಡಳಿತ ಪಕ್ಷದವರು ಬದ್ಧರಿದ್ದೇವೆ ಹಾಗೂ ಮಾನ್ಯ ವಿರೋಧ ಪಕ್ಷದವರೂ ಕೂಡ ಬದ್ಧರಾಗಿದ್ದಾರೆ.

**ಸಭಾಪತಿಯವರು:-** ಆಯಿತು.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಸಂಪ್ರದಾಯದ ಪ್ರಕಾರವಾಗಿಯೇ ಮಾಡಬೇಕಾಗುತ್ತದೆ ನಿಜ. ಅದನ್ನು ನಾವು ಇಲ್ಲವೆಂದು ಹೇಳಲಿಲ್ಲ. ನಾವು ಏನು ಹೇಳುತ್ತೇವೆಂದರೆ, ಇವತ್ತು ಮತ್ತು ನಾಳೆ ಅರ್ಧ ದಿವಸ ಮಾತ್ರ ಸದನ ನಡೆಯುವುದರಿಂದ, ಉತ್ತರ ಕರ್ನಾಟಕ ಭಾಗದ ಜನರ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಬೇಕಾದಂತಹ ಅವಶ್ಯಕತೆಗಳು ಇರುವುದರಿಂದ, ಎಲ್ಲವನ್ನೂ ಬದಿಗೊತ್ತಿ, ಬಹಳ ಗಂಭೀರವಾದಂತಹ ವಿಷಯವನ್ನು ಮಾತ್ರ ಚರ್ಚೆಗೆ ಕೈಗೆತ್ತಿಕೊಳ್ಳಬೇಕೆಂಬುದು ನಮ್ಮ ವಿನಂತಿ. ಈ ವಿಚಾರದಲ್ಲಿ ಬಿನ್ನಾಭಿಪ್ರಾಯಗಳು ಬೇಡ, ಈ ವಿಚಾರದಲ್ಲಿ ಅವರಲ್ಲಿಯೂ ಸಹ ಬಿನ್ನಾಭಿಪ್ರಾಯಗಳಿರುವುದಕ್ಕೆ ಸಾಧ್ಯವಿಲ್ಲ.

**ಸಭಾಪತಿಯವರು:-** ಈಗ ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುವುದಕ್ಕೆ ನಿಮಗೆ ಅವಕಾಶ ಮಾಡಿಕೊಡಬೇಕೆಂದು ಪ್ರಸ್ತಾಪ ಇಟ್ಟಿದ್ದೀರಿ. ಆದರೆ, ಈಗ ಪ್ರಶ್ನೆ ಇರತಕ್ಕಂಥದ್ದು, ಉತ್ತರ ಕರ್ನಾಟಕಕ್ಕೆ ಸಂಬಂಧಪಟ್ಟ ವಿಷಯಗಳ ಬಗ್ಗೆ ಕೇಳಿರುವಂತಹ ಪ್ರಶ್ನೆಗಳು ಸಹ ಇವತ್ತಿನ ಪ್ರಶ್ನೆಗಳ ಪಟ್ಟಿಯಲ್ಲಿವೆ. ಎಲ್ಲಾ ಭಾಗಗಳ ವಿಷಯ ಕೂಡ ಇದೆ. ಆದ್ದರಿಂದ ಮೊದಲು ಪ್ರಶ್ನೋತ್ತರ ಕಲಾಪ ಆಗಲಿ, ನಂತರ ನಿಮಗೆ ಏನು ಸಮಸ್ಯೆ ಇದೆ, ಅದನ್ನು ಕೇಳುವುದಕ್ಕೆ ನಾವು ತಯಾರಿದ್ದೇವೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಯಾವುದೇ ಕಾರ್ಯಕಲಾಪಗಳ ಪಟ್ಟಿಯನ್ನು ಪೂರ್ಣಗೊಳಿಸಲು ಆಗುತ್ತಿಲ್ಲ. ಏಕೆಂದರೆ, ತಾವು ಇವತ್ತಿನ ಕಾರ್ಯಕಲಾಪಗಳ ಪಟ್ಟಿಯಲ್ಲಿ ಸುಮಾರು 20 ವಿಷಯಗಳನ್ನು ಹಾಕಿಕೊಂಡಿದ್ದೀರಿ, ನಾವು ಅದನ್ನು ಸ್ವಾಗತ ಮಾಡಿದ್ದೇವೆ.

**“ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”**

(ಗೊಂದಲ)

**ಡಾ॥ವೈ.ಎ.ನಾರಾಯಣಸ್ವಾಮಿ:–** ಮಾನ್ಯ ಸಭಾಪತಿಯವರೆ, ಅಧಿವೇಶನ ಪ್ರಾರಂಭವಾದ ಮೊದಲನೆಯ ದಿನದಂದು ಕೂಡ ನಾವು ಪ್ರಶ್ನೋತ್ತರ ಕಲಾಪವನ್ನು ನಡೆಸಲಾಗಲಿಲ್ಲ.

(ಗೊಂದಲ)

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:–** ಮಾನ್ಯ ಸಭಾಪತಿಯವರೆ, ಸದ್ಯಕ್ಕೆ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಆಗಬೇಕು. ಇದರಲ್ಲಿ ಏನು ಅನುಮಾನವಿಲ್ಲ. ಆ ಕಾರಣಕ್ಕಾಗಿ ತಾವು ಸರ್ಕಾರಕ್ಕೆ ಮನವರಿಕೆ ಮಾಡಬೇಕು. ಆನಂತರ, ತಾವು ಪ್ರಶ್ನೋತ್ತರಕ್ಕೆ ಸಮಯ ಕೊಡಬಹುದಾಗಿದೆ. ಆದ್ದರಿಂದ ಈಗ ಬೇರೆಲ್ಲಾ ಕಾರ್ಯಕಲಾಪಗಳನ್ನೂ ಬದಿಗೊತ್ತಿ, ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಬಗ್ಗೆ ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂಬುದು ನನ್ನ ವಿನಂತಿಯಾಗಿದೆ.

(ಗೊಂದಲ)

**ಡಾ॥ತೇಜಸ್ವಿನಿ ಗೌಡ (ವಿಧಾನಸಭಾ ಕ್ಷೇತ್ರ):–** ಮಾನ್ಯ ಸಭಾಪತಿಯವರೆ, ನಿಯಮಾವಳಿಗಳ ಪ್ರಕಾರ ನಾವೇ ಒಪ್ಪಿಕೊಂಡಿರತಕ್ಕಂಥ ಪ್ರಶ್ನೋತ್ತರವನ್ನು ರದ್ದುಪಡಿಸಿ, ನಾನು ವಿರೋಧ ಪಕ್ಷದವರು ತಂದಿರುವ ಈ ವಿಷಯದ ಬಗ್ಗೆ ಪ್ರಸ್ತಾಪಿಸಲು ಆದ್ಯತೆ ಕೊಡಬೇಕೆ ಎನ್ನುವಂತಹ ಪ್ರಶ್ನೆಯನ್ನು ತಾವು ಕೇಳಿದ್ದೀರಿ. ಇದು ಸಮಂಜಸವಾಗಿದೆ. ನನ್ನ ಅನುಭವದ ಪ್ರಕಾರ ಹೇಳುವುದಾದರೆ, ಕಳೆದ 9 ದಿನಗಳ ಅವಧಿಯಲ್ಲಿ ಪ್ರಶ್ನೋತ್ತರ ಕಲಾಪವನ್ನು ನ್ಯಾಯಬದ್ಧವಾಗಿ ನಡೆಸಲಾಗಿದ್ದು, ಬೆಳಿಗ್ಗೆಯಿಂದ ಮಧ್ಯಾಹ್ನದವರೆಗೆ ಸುಮಾರು 3 ಅಥವಾ 4 ಗಂಟೆಗಳ ಕಾಲ ಪ್ರಶ್ನೋತ್ತರ ಕಲಾಪ ನಡೆದಿದ್ದೆ. ಈಗ ನಮ್ಮ ಮುಂದಿರುವ ಸಮಸ್ಯೆ ಏನೆಂದರೆ, ಸದನ ನಾಳೆ ಮಧ್ಯಾಹ್ನದವರೆಗೆ ಮಾತ್ರ ಇರುತ್ತದೆ. ವಿಶೇಷವಾಗಿ 55 ವರ್ಷಗಳಿಂದ ನೆನೆಗುದಿಗೆ ಬಿದ್ದಿರತಕ್ಕಂಥ ಉತ್ತರ ಕರ್ನಾಟಕದ ಆಲಮಟ್ಟಿ ಜಲಾಶಯದ ವಿಚಾರ ಇರಬಹುದು, ಅಥವಾ ಇಲ್ಲಿನ ಇತರೆ ನೀರಾವರಿ ಯೋಜನೆಗಳು ಇರಬಹುದು, ಕೃಷ್ಣಾ ನದಿಯ 'ಬಿ' ಸ್ಕೀಂನ ಯೋಜನೆ ಇರಬಹುದು, ಇದಕ್ಕೆ ನಾವು ಆದ್ಯತೆ ಕೊಡಬೇಕಾಗಿರುತ್ತದೆ. ಮತ್ತೆ ರೈತರ ಸಾಲ ಮನ್ನಾದಂತಹ ವಿಚಾರಗಳು ಹಾಗೂ ತೀವ್ರ ಬರಗಾಲದ ಬಗ್ಗೆ ತಾವು ಚರ್ಚೆಗೆ ಅವಕಾಶ ಮಾಡಿಕೊಟ್ಟಿದ್ದೀರಿ. ಅದಕ್ಕೆ ನಾವು ಪೀಠವನ್ನು ಅಭಿನಂದಿಸುತ್ತೇವೆ. ಏಕೆಂದರೆ, ಎಲ್ಲಾ ವಿಷಯಗಳ ಬಗ್ಗೆ ಪ್ರಸ್ತಾಪಿಸಬೇಕೆಂದರೆ, ಸಮಯ ಸಾಕಾಗುವುದಿಲ್ಲ. ನಮ್ಮ ಮಾನ್ಯ ವಿರೋಧ ಪಕ್ಷದ ನಾಯಕರು ಕೇಳಿದ್ದು ಏನೆಂದರೆ, ಈ ಅಧಿವೇಶನದ ಉಪವೇಶನವನ್ನು ಮತ್ತೊಂದು ದಿನ ಮುಂದುವರೆಸುವುದಾದರೆ,

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಅದಕ್ಕೆ ನಮ್ಮದೂ ಕೂಡ ಸಹಮತ ಇದೆ. ಒಂದು ವೇಳೆ, ಸರ್ಕಾರದ ಕಡೆಯಿಂದ ಮತ್ತೊಂದು ದಿನ ಅಧಿವೇಶನವನ್ನು ಮುಂದುವರೆಸುವುದಿಲ್ಲ ಎನ್ನುವುದಾದರೆ, ತೀವ್ರ ರೂಪದಲ್ಲಿ ಗಂಭೀರವಾಗಿ ನಾವು ಇವತ್ತಿನ ದಿವಸ ಕಳಸ ಬಂಡೂರಿ ವಿಚಾರ ಇರಬಹುದು ಅಥವಾ ಈ ಭಾಗದ ಇನ್ನಿತರ ನೀರಾವರಿ ಯೋಜನೆಗಳ ಬಗ್ಗೆ ಸದನದಲ್ಲಿ ವಿಚಾರಗಳನ್ನು ಮಂಡನೆ ಮಾಡಬೇಕಾಗಿದೆ. ಆದ್ದರಿಂದ, ಸಮಯದ ಕೊರತೆಯಿಂದಾಗಿ ಇದಕ್ಕೆ ಹೆಚ್ಚಿನ ಆದ್ಯತೆ ಕೊಡಬೇಕೆಂದು, ಮಾನ್ಯ ಎಲ್ಲಾ ಸದಸ್ಯರ ಸಹಕಾರವನ್ನು ಕೋರಿ, ಪ್ರಶ್ನೋತ್ತರ ಕಲಾಪದ ಬದಲಿಗೆ ಉತ್ತರ ಕರ್ನಾಟಕ ಭಾಗದ ನೀರಾವರಿ ಯೋಜನೆಗಳ ಬಗ್ಗೆ ಚರ್ಚೆ ತೆಗೆದುಕೊಳ್ಳಬೇಕೆಂದು ನಾನು ಸಹ ತಮ್ಮಲ್ಲಿ ಪ್ರಾರ್ಥನೆ ಮಾಡುತ್ತೇನೆ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ನಮ್ಮ ಮಾನ್ಯ ವಿರೋಧ ಪಕ್ಷದ ನಾಯಕರ ಕೊನೆ ಗಳಿಗೆಯ ಕಳಕಳಿಯನ್ನು ನಾನು ಮೆಚ್ಚುತ್ತೇನೆ!

(ಗೊಂದಲ)

**ಡಾ॥ ತೇಜಸ್ವಿನಿ ಗೌಡ:-** ಮಾನ್ಯ ಸಭಾಪತಿಯವರೆ, ಆಡಳಿತ ಪಕ್ಷದವರು ಈ ರೀತಿ ಕುಹಕವಾಗಿ ಮಾತನಾಡಿ, ಈ ರೀತಿಯ ದುರ್ವರ್ತನೆಯನ್ನು ತೋರಿಸುವುದು ಸರಿಯಲ್ಲ. ನಮಗೂ ಸಹ ಕುಟುಕುವುದಕ್ಕೆ ಬರುತ್ತದೆ. ಇದು ಸರ್ಕಾರದ ಕೊನೆ ಗಳಿಗೆ ಎಂಬುದು ಇವರ ಮಾತುಗಳಿಂದ ವ್ಯಕ್ತವಾಗುತ್ತಿದೆ.

(ಗೊಂದಲ)

**ಶ್ರೀ ಎನ್.ರವಿಕುಮಾರ್ (ವಿಧಾನ ಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಅವರು ಕೊನೆಯ ದಿನದ ಕಳಕಳಿ ಎಂದು ಹೇಳುತ್ತಿದ್ದಾರಲ್ಲ, ಹಾಗಾದರೆ, 55 ವರ್ಷದ ಕಳಕಳಿ ಎಲ್ಲಿಗೆ ಹೋಯಿತು?

(ಗೊಂದಲ)

**ಸಭಾಪತಿಯವರು:-** ಮಾನ್ಯ ಸದಸ್ಯರೇ, ಮಾನ್ಯ ಸಚಿವರೇ, ದಯವಿಟ್ಟು ಎಲ್ಲರೂ ಕುಳಿತುಕೊಳ್ಳಿ.

**"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"**

**ಶ್ರೀ ಮರಿತಿಬ್ಬೇಗೌಡ:–** ಮಾನ್ಯ ಸಭಾಪತಿಯವರೆ, ನಮ್ಮ ವಿಧಾನ ಪರಿಷತ್‌ನ ನಡವಳಿಕೆ ನಿಯಮಗಳ ಪ್ರಕಾರ, ತಾವು ಪ್ರಶ್ನೋತ್ತರ ಕಲಾಪವನ್ನು ತೆಗೆದುಕೊಂಡಿದ್ದೀರಿ, ಮಾನ್ಯ ವಿರೋಧ ಪಕ್ಷದ ನಾಯಕರು ವಿಶೇಷ ನಿಲುವಳಿ ಸೂಚನೆಯನ್ನು ತಂದಿದ್ದೇವೆಂದು ತಮ್ಮ ಗಮನಕ್ಕೆ ತಂದಿದ್ದಾರೆ. ತಾವು ಅವರಿಗೆ ಮಾತನಾಡುವುದಕ್ಕೆ ಕೂಡ ಅವಕಾಶವನ್ನು ಮಾಡಿಕೊಟ್ಟಿದ್ದೀರಿ. ಈ ಸಂದರ್ಭದಲ್ಲಿ ಸಭಾ ಪೀಠಕ್ಕೆ ನನ್ನದೊಂದು ಮನವಿ ಏನೆಂದರೆ, ಈ ಸದನದಲ್ಲಿ ಉತ್ತರ ಕರ್ನಾಟಕದ ಬಗ್ಗೆ ಚರ್ಚೆಯನ್ನೇ ಮಾಡಿಲ್ಲವೆಂದು ಪತ್ರಿಕೆಯಲ್ಲಿ ವರದಿಯಾಗಿದೆ.

**ಡಾ॥ ತೇಜಸ್ವಿನಿ ಗೌಡ:–** ಮಾನ್ಯ ಸಭಾಪತಿಯವರೆ, ಇವರ ಉದ್ದೇಶವೇನು? ಇವರು ಉತ್ತರ ಕರ್ನಾಟಕ ಅಭಿವೃದ್ಧಿಯ ವಿರೋಧಿಗಳು.

(ಗೊಂದಲ)

**(ಮುಂದುವರೆದಿದೆ...)**

(596) 20-12-2018 (11-50) mm-md

**ಶ್ರೀ ಮರಿತಿಬ್ಬೇಗೌಡ:–** ಮಾನ್ಯ ಸಭಾಪತಿಯವರೆ, ಈ ಸದನದಲ್ಲಿ ಉತ್ತರ ಕರ್ನಾಟಕದ ಬಗ್ಗೆ ಚರ್ಚೆಯನ್ನೇ ಮಾಡಲಿಲ್ಲ ಎಂದು ಪತ್ರಿಕೆಯವರು ಬರೆದುಬಿಟ್ಟಿದ್ದಾರೆ. ಆ ಹಿನ್ನೆಲೆಯಲ್ಲಿ ನಾವು ಈ ಕೊನೆಯ ಒಂದು ದಿನದ ಅಧಿವೇಶನವನ್ನು ...

(ಗೊಂದಲ)

**ಡಾ: ತೇಜಸ್ವಿನಿ ಗೌಡ:–** ಮಾನ್ಯ ಸಭಾಪತಿಯವರೆ, ಇವರ ಉದ್ದೇಶ ನಮಗೆ ಗೊತ್ತಾಗುತ್ತಿದೆ. ಇವರು ಉತ್ತರ ಕರ್ನಾಟಕದ ಅಭಿವೃದ್ಧಿಯ ವಿರೋಧಿಗಳು. ...

(ಗೊಂದಲ)

**ಶ್ರೀ ಎಸ್.ವ್ಹಿ.ಸಂಕನೂರ:–** ಈ ರೀತಿ ವ್ಯಂಗ್ಯವಾಗಿ ಮಾತನಾಡಬೇಡಿ.

(ಗೊಂದಲ)

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಡಾ: ತೇಜಸ್ವಿನಿ ಗೌಡ:-** ವ್ಯಂಗ್ಯವಾಗಿ, ತೀಕ್ಷ್ಣವಾಗಿ ಮಾತನಾಡುವುದಕ್ಕೆ ನಮಗೂ ಬರುತ್ತದೆ.

(ಗೊಂದಲ)

**ಡಾ: ತೇಜಸ್ವಿನಿ ಗೌಡ:-** ಅವರಿಗೆ ರಾಜ್ಯ ವಿಭಜನೆಯಾಗಬೇಕು. ಉತ್ತರ ಕರ್ನಾಟಕದ ಅಭಿವೃದ್ಧಿಯ ವಿರೋಧಿಗಳಿಂದ ಮಾತ್ರ ಈ ರೀತಿ ಹೇಳಿಕೆ ಕೊಡುವುದಕ್ಕೆ ಸಾಧ್ಯವಿದೆ.

(ಗೊಂದಲ)

**ಡಾ: ವೈ.ಎ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ...

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ನಾರಾಯಣಸ್ವಾಮಿಯವರೆ, ದಯವಿಟ್ಟು ಕುಳಿತುಕೊಳ್ಳಿ. ನೀವು ಮಾತನಾಡುವಾಗ ನಾವು ನಿಮಗೆ ತೊಂದರೆ ಕೊಡಲಿಲ್ಲ.

**ಸಭಾಪತಿಯವರು:-** ಮಾನ್ಯ ನಾರಾಯಣಸ್ವಾಮಿಯವರೆ, ದಯವಿಟ್ಟು ಕುಳಿತುಕೊಳ್ಳಿ.

**ಡಾ: ವೈ.ಎ ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ಈ ಸದನದಲ್ಲಿ ಎಲ್ಲರೂ ಸರ್ವಜ್ಞರೇ, ನೀವೊಬ್ಬರೇ ಅಲ್ಲ. ಎಲ್ಲರೂ ಬುದ್ಧಿವಂತರೇ, ಎಲ್ಲರೂ ಚಿಂತಕರೇ. ಅದನ್ನು ಗಮನದಲ್ಲಿಟ್ಟುಕೊಂಡು ಮಾತನಾಡಿ.

**ಸಭಾಪತಿಯವರು:-** ಮಾನ್ಯ ನಾರಾಯಣಸ್ವಾಮಿಯವರೆ, ಒಂದು ನಿಮಿಷ, ...

**ಶ್ರೀ ಎಸ್.ವ್ಹಿ. ಸಂಕನೂರ:-** ಮಾನ್ಯ ಸಭಾಪತಿಯವರೆ, ...

**ಸಭಾಪತಿಯವರು:-** ಮಾನ್ಯ ಸಂಕನೂರರವರೆ, ...

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"**

(ಗೊಂದಲ)

**ಸಭಾಪತಿಯವರು:-** ದಯಮಾಡಿ ಎಲ್ಲರೂ ಕುಳಿತುಕೊಳ್ಳಿ. ನನಗೇ ಮಾತನಾಡಲು ಬಿಡುವುದಿಲ್ಲವೇ? ಕುಳಿತುಕೊಳ್ಳಿ. ನಿಮಗೆ ಹೇಳಿದ್ದು ಅರ್ಥವಾಗುವುದಿಲ್ಲವೇ? ಈಗ ಅವರು ಏನು ತಪ್ಪು ಮಾತನಾಡಿದ್ದಾರೆ? ನಿಮಗೆ ಖುಷಿಯಾಗುವ ಹಾಗೆ ಮಾತನಾಡುವುದಕ್ಕೆ ಆಗುವುದಿಲ್ಲ. ಅವರು ಅವರ ವಿಷಯವನ್ನು ಹೇಳುತ್ತಾರೆ. ನಿಮಗೂ ಮಾತನಾಡುವುದಕ್ಕೆ ಅವಕಾಶ ಕೊಟ್ಟಿದ್ದೇವೆ, ಅವಕಾಶ ಕೊಡುತ್ತೇವೆ. ನೀವು ಎಷ್ಟೇ ವ್ಯಂಗ್ಯವಾಗಿ ಮಾತನಾಡಿ ಅದಕ್ಕೂ ತೊಂದರೆ ಇಲ್ಲ. ಆದರೆ ಬೇರೆಯವರು ಮಾತನಾಡುವುದನ್ನು ತಡೆಯುವುದು ಅಷ್ಟು ಸಮಂಜಸವಲ್ಲ.

**ಡಾ: ವೈ.ಎ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ಹಾಗಲ್ಲ, ಪತ್ರಿಕೆಯಲ್ಲಿ ವರದಿ ಬಂದಿದೆ. ಅದಕ್ಕೋಸ್ಕರ ...

**ಸಭಾಪತಿಯವರು:-** ಅದೇನು unparliamentary ಆಗಿದೆಯೇ?

(ಗೊಂದಲ)

**ಶ್ರೀ ಟಿ.ಎ.ಶರವಣ:-** ಮಾನ್ಯ ಸಭಾಪತಿಯವರೆ, ಒಂದು resolution pass ಮಾಡಿ ಹೇಗೆ ಮಾತನಾಡಬೇಕೆಂಬುದನ್ನು ಅವರಿಗೆ ಬರೆದುಕೊಡಲು ಹೇಳಿ ಹಾಗೆಯೇ ಮಾತನಾಡುತ್ತಾರೆ.

(ಗೊಂದಲ)

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ಸಭಾಪತಿಯವರೆ, ಈ ಸದನದ ಸದಸ್ಯರಾದ ನಾವೆಲ್ಲರೂ ಕೂಡ ಉತ್ತರ ಕರ್ನಾಟಕದ ಬಗ್ಗೆ, ಸಮಗ್ರ ಕರ್ನಾಟಕದ ಅಭಿವೃದ್ಧಿ ಬಗ್ಗೆ ಚಿಂತನೆ ಇಟ್ಟುಕೊಂಡೇ ಶಾಸಕರಾಗಿ ಕೆಲಸ ಮಾಡುತ್ತಿದ್ದೇವೆ. ಆದರೆ ಬೆಳಗಾವಿ ಅಧಿವೇಶನ ಪ್ರಾರಂಭವಾಗಿ ಇವತ್ತಿಗೆ ಎಂಟು ದಿನಗಳಾಯಿತು. ಇದುವರೆಗೂ ಸದನದಲ್ಲಿ ಯಾರೇ ವಿರೋಧ ಪಕ್ಷದಲ್ಲಿರಲಿ, ಯಾರೇ ಆಡಳಿತ ಪಕ್ಷದಲ್ಲಿರಲಿ ಕಳೆದ ಎಂಟು ದಿನಗಳಿಂದ ವಿಶೇಷವಾಗಿ ಉತ್ತರ ಕರ್ನಾಟಕದ ಬಗ್ಗೆ ಬೆಳಗಾವಿ ಅಧಿವೇಶನದಲ್ಲಿ ಮತ್ತು ಪ್ರತಿ ಅಧಿವೇಶನದಲ್ಲಿ ಕೂಡ ಚರ್ಚೆಯಾಗುತ್ತಿತ್ತು. ಆದರೆ ಈ ಬಾರಿ ಕೊನೆಯ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಗಳಿಗೆಯಲ್ಲಿ ಕೂಡ ವಿರೋಧಪಕ್ಷದವರು ಉತ್ತರ ಕರ್ನಾಟಕದ ಅಭಿವೃದ್ಧಿಯ ಚಿಂತನೆಗೆ ಕೈ ಹಾಕಲಿಲ್ಲ, ಪತ್ರ ಕೊಡಲಿಲ್ಲ, ಸೂಚನೆ ಕೊಡಲಿಲ್ಲ.

(ಗೊಂದಲ)

**ಡಾ: ವೈ.ಎ.ನಾರಾಯಣಸ್ವಾಮಿ:-** ನಾಲ್ಕು ದಿನಗಳ ಮುಂಚೆಯೇ ವಿಶೇಷವಾಗಿ ಅವಕಾಶ ಕೊಡಬೇಕೆಂದು ಹೇಳಿದ್ದೇವೆ.

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ನಾರಾಯಣಸ್ವಾಮಿಯವರೆ, ದಯವಿಟ್ಟು ಕುಳಿತುಕೊಳ್ಳಿ.

(ಗೊಂದಲ)

**ಶ್ರೀ ಹೆಚ್.ಎಂ.ರೇವಣ್ಣ:-** ಉತ್ತರ ಕರ್ನಾಟಕದ contractor ನೀವಲ್ಲ.

**ಶ್ರೀ ಎಸ್.ವ್ವಿ.ಸಂಕನೂರ:-** ಮಾನ್ಯ ಸಭಾಪತಿಯವರೆ, ...

**ಸಭಾಪತಿಯವರು:-** ಅವರು ಮುಗಿಸಿದ ತಕ್ಷಣ ತಮಗೆ ಅವಕಾಶ ಕೊಡುತ್ತೇನೆ.

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ಸಭಾಪತಿಯವರೆ, ...

**ಡಾ||ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ಮಾನ್ಯ ಸದಸ್ಯರು ಮಾತನಾಡುವುದಕ್ಕೆ ಅವಕಾಶ ಮಾಡಿಕೊಡಿ.

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ಸಂಕನೂರರವರೆ, ...

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಎಸ್.ವ್ಹಿ.ಸಂಕನೂರ:-** ಮಾನ್ಯ ಸಭಾಪತಿಯವರೆ, ಇಲ್ಲಿ ಅಧಿವೇಶನ ಮಾಡಿದ್ದಕ್ಕೆ ಫಲಶೃತಿ ಏನು, ಸಾರ್ಥಕತೆ ಏನು? ಇನ್ನೂ ಪರಿಹಾರ ಸಿಕ್ಕಿಲ್ಲ. ನಾಳೆ ಸದನ ಮುಗಿಯಲಿದೆ, ಏತಕ್ಕೆ ಅವಸರ ಮಾಡುತ್ತಿದ್ದೀರಿ? ಉತ್ತರ ಕರ್ನಾಟಕಕ್ಕೆ ಇನ್ನೂ ಏನೂ ಘೋಷಣೆ ಮಾಡಿಲ್ಲ. ಘೋಷಣೆ ಮಾಡಿ.

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ಸಭಾಪತಿಯವರೆ, ನನಗೆ ವಿರೋಧಪಕ್ಷದ ನಾಯಕರ ಹೇಳಿಕೆ ಬಗ್ಗೆ, ಮತ್ತೊಂದರ ಬಗ್ಗೆ ಯಾವ ಸಿಟ್ಟೂ ಇಲ್ಲ. ಈ ಭಾಗದ ಅಭಿವೃದ್ಧಿಯಾಗಬೇಕೆನ್ನುವ ಬಗ್ಗೆ ನಮಗೂ ಕೂಡ ಕಳಕಳಿ ಇದೆ. ನಾವು ಈ ಸದನದಲ್ಲಿ ಚರ್ಚೆಗೆ ಬೇಡ ಎನ್ನುವವರಲ್ಲ. ನಾವು ಕೂಡ ಸ್ವಾಗತ ಮಾಡುತ್ತೇವೆ. ಆದರೆ ನನ್ನ ಒಂದು ಮನವಿಯೇನೆಂದರೆ, ನಾಳೆ ಅಧಿವೇಶನ ಮುಗಿಯುತ್ತಿದೆ. ಪ್ರಾರಂಭದಲ್ಲಿಯೇ ವಿಶೇಷ ಸೂಚನೆ ಕೊಟ್ಟಿದ್ದರೆ ಮೂರು ದಿನ ಸಮಗ್ರವಾಗಿ ಎರಡೂ ಸದನದಲ್ಲಿ ಚರ್ಚೆ ಮಾಡುವುದಕ್ಕೆ ಸಿದ್ಧವಾಗಿದ್ದೆವು. ಇವರು ಕೊಡಲಿಲ್ಲ. ಈ ದಿನ ವಿಶೇಷ ಸೂಚನೆ ಕೊಟ್ಟಿದ್ದಾರೆ. ದಯಮಾಡಿ ಪ್ರಶ್ನೋತ್ತರ ವೇಳೆ ಮುಗಿದ ನಂತರ ತೆಗೆದುಕೊಳ್ಳಿ. ಪ್ರಶ್ನಾವಳಿಯ ಮಹತ್ವ ತಮಗೆಲ್ಲಾ ಗೊತ್ತಿದೆ. ಅದು ಸದಸ್ಯರ ಹಕ್ಕು. ಪ್ರಶ್ನೋತ್ತರ ಅವಧಿ ಮುಗಿದ ನಂತರ ಪೀಠದಿಂದ ಯಾವ ತೀರ್ಮಾನ ಕೊಡುತ್ತಾರೋ ಆ ತೀರ್ಮಾನಕ್ಕೆ ನಾವು ಸಿದ್ಧ. ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಬಗ್ಗೆ ನಮಗೂ ಕೂಡ ದೊಡ್ಡ ಚಿಂತನೆ, ಆಗ್ರಹ ಇದೆ, ಇದನ್ನು ಮಾಡಬೇಕಾಗಿದೆ. ಆದ್ದರಿಂದ ದಯಮಾಡಿ ಪ್ರಶ್ನೋತ್ತರ ಅವಧಿ ಮುಗಿದ ನಂತರ ತಾವು ಪೀಠದಿಂದ ಯಾವುದಾದರೂ ತೀರ್ಮಾನ ಕೊಡಿ, ಅದನ್ನು ನಾವು ಸ್ವಾಗತ ಮಾಡುತ್ತೇವೆ.

(ಗೊಂದಲ)

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಈ ಚರ್ಚೆ ಮಾಡುವುದು ಮಾನ್ಯ ಸದಸ್ಯರುಗಳ ಜವಾಬ್ದಾರಿಯಾಗಿದೆ. ಆ ಜವಾಬ್ದಾರಿಯನ್ನು ನಿರ್ವಹಿಸುವುದಕ್ಕೆ ಅನುಮತಿ ಕೊಡಬೇಕೆಂದು ವಿನಂತಿ ಮಾಡುತ್ತೇವೆ.

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ನಮ್ಮ ಮುಂದಿರುವ ದೊಡ್ಡ ಪ್ರಶ್ನೆಯೇನೆಂದರೆ, ಈ ಸದನವನ್ನು ಬೆಳಗಾವಿಯಲ್ಲಿ ಏತಕ್ಕೆ ಕರೆದಿದ್ದೇವೆ? ಬೆಳಗಾವಿಯಲ್ಲಿ . .

**ಸಭಾಪತಿಯವರು:-** ಮಾನ್ಯ ರಘುನಾಥ್ ಮಲ್ಕಾಪೂರೆಯವರೆ, ಒಂದು ನಿಮಿಷ ಇರಿ, ಸಭಾನಾಯಕರು ಮಾತನಾಡಲಿದ್ದಾರೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ರಘುನಾಥ ರಾವ್ ಮಲ್ಕಾಪೂರೆ:-** ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಗೋಸ್ಕರ ಬೆಳಗಾವಿಯಲ್ಲಿ ನಾವು ಸದನವನ್ನು ಕರೆದಿದ್ದೇವೆ.

**ಸಭಾಪತಿಯವರು:-** ಮಾನ್ಯ ರಘುನಾಥ್ ಮಲ್ಕಾಪೂರೆಯವರೆ, ಒಂದು ನಿಮಿಷ ಇರಿ.

**ಡಾ॥ ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ...

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ಸಭಾಪತಿಯವರೆ, ಉತ್ತರ ಕರ್ನಾಟಕದ ಅಭಿವೃದ್ಧಿಯ ಬಗ್ಗೆ ಮಾತನಾಡುವುದು ಬೇಡವೇ?

(ಗೊಂದಲ)

**ಡಾ॥ ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ಪ್ರಶ್ನಾವಳಿ ಸಂದರ್ಭದಲ್ಲಿ ಪ್ರತಿ ದಿನವೂ ಈ ರೀತಿಯ ಒಂದಲ್ಲ ಒಂದು ಘಟನೆಯನ್ನು ಕಾಣುತ್ತಿದ್ದೇವೆ. ಒಂದು ಪ್ರಶ್ನೆಯನ್ನು ತಮ್ಮಲ್ಲಿ ಮತ್ತು ವಿರೋಧಪಕ್ಷದ ನಾಯಕರಲ್ಲಿಯೂ ಕೇಳಿಕೊಳ್ಳುತ್ತೇನೆ, ನಾವೇ ಮಾಡಿಕೊಂಡಿರುವ ನಿಯಮವನ್ನು ನಾವು ಮೀರುತ್ತಿರುವುದು ಇದು ಮೊದಲನೆಯದು. ಇನ್ನು ಚರ್ಚೆಗಳಾಗಬೇಕೆಂದರೆ, ಈಗ ತಾವು ಅರ್ಧ ಗಂಟೆ ತಡವಾಗಿ ವಿಷಯವನ್ನು ಕೊಟ್ಟಿದ್ದೀರಿ. ಅದು ನಿಯಮಬಾಹಿರವಾಗಿರುವುದರಿಂದ ಅದನ್ನು ತೆಗೆದುಕೊಳ್ಳಲು ಬರುವುದಿಲ್ಲ. ಆದರೂ ಕೂಡ ಪೀಠ ಹೇಳಿದರೆ; ಇಷ್ಟೂ ದಿವಸಗಳ ಚರ್ಚೆಗಳಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ, ಅಭಿವೃದ್ಧಿಯ ಬಗ್ಗೆಯೇ ಮಾತನಾಡಿದ್ದೇವೆ. ಇನ್ನೂ ಆಗಬೇಕೆಂದರೆ, ಅದನ್ನು ತಾವು ನಿರ್ಧಾರ ಮಾಡಿ. ಆದರೆ ಪ್ರಶ್ನಾವಳಿಗೆ ಮೊದಲ ಆದ್ಯತೆಯನ್ನು ನೀಡಬೇಕೆಂದು ಕೋರುತ್ತೇನೆ.

**ಶ್ರೀ ರಘುನಾಥ ರಾವ್ ಮಲ್ಕಾಪೂರೆ:-** ಮಾನ್ಯ ಸಭಾಪತಿಯವರೆ, ನಮ್ಮ ವಿರೋಧಪಕ್ಷದ ನಾಯಕರು ನಿಲುವಳಿ ಸೂಚನೆಯನ್ನು ಇವತ್ತೇ ಏಕೆ ತಂದಿದ್ದಾರೆ ಎಂದು ಕೆಲವರಿಗೆ ಅನುಮಾನ ಇದೆ. ಮೊದಲನೇ ದಿವಸ ತರಬೇಕಾಗಿತ್ತಾ?

**ಸಭಾಪತಿಯವರು:-** ನಿಲುವಳಿ ಸೂಚನೆಯನ್ನು ತಂದಿಲ್ಲ.

**ಶ್ರೀ ರಘುನಾಥ ರಾವ್ ಮಲ್ಕಾಪೂರೆ:-** ನಿಲುವಳಿ ಸೂಚನೆ ಕೊಟ್ಟಿದ್ದಾರೆ.

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"**

**ಸಭಾಪತಿಯವರು:–** ಅದು accept ಆಗಿಲ್ಲ. ಇದು ನಿಲುವಳಿ ಸೂಚನೆಯನ್ನು ತೆಗೆದುಕೊಳ್ಳಬೇಕೋ ಬೇಡವೋ ಎನ್ನುವ ಬಗ್ಗೆ ಚರ್ಚೆಯಲ್ಲ.

**ಶ್ರೀ ರಘುನಾಥ ರಾವ್ ಮಲ್ಕಾಪೂರೆ:–** ಮಾನ್ಯ ಸಭಾಪತಿಯವರೆ, ಅದು ಪೀಠದ ನಿರ್ಣಯಕ್ಕೆ ಬಿಟ್ಟಂತಹ ವಿಚಾರ. ಆದರೆ ನಮ್ಮ ವಿರೋಧ ಪಕ್ಷದ ನಾಯಕರು ಕೊಟ್ಟಿದ್ದಾರೆ. ನಾವು ಬೆಳಗಾವಿಯಲ್ಲಿ ಅಧಿವೇಶನ ಸೇರಿರುವುದು ಏತಕ್ಕೆ? ಬೆಳಗಾವಿಯಲ್ಲಿ ಅಧಿವೇಶನ ಸೇರಿ ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಬಗ್ಗೆ; ಅದು ನೀರಾವರಿ ಯೋಜನೆಯಾಗಿರಬಹುದು, ನೀರಾವರಿ ಯೋಜನೆಯಲ್ಲಿ ಪ್ರಮುಖವಾಗಿ ಕೃಷ್ಣಾ ಮೇಲ್ದಂಡೆ ಯೋಜನೆ ಇರಬಹುದು, ಉತ್ತರ ಕರ್ನಾಟಕದಲ್ಲಿ ಎಲ್ಲಕ್ಕಿಂತ ಹಿಂದುಳಿದ ಭಾಗವಾದಂತಹ ಹೈದರಾಬಾದ್–ಕರ್ನಾಟಕದ ಸಮಗ್ರ ಅಭಿವೃದ್ಧಿ ಇರಬಹುದು, ಕಲಂ 371(ಜೆ) ಅನ್ನು ಪರಿಪಕ್ವವಾಗಿ ಅನುಷ್ಠಾನ ಮಾಡುವಂತಹ ವಿಷಯ ಇರಬಹುದು. ನಾನು ಕೈ ಮುಗಿದು ವಿನಂತಿ ಮಾಡುತ್ತೇನೆ, ಎಷ್ಟು ಸಮಯ ಇಲ್ಲಿ ಚರ್ಚೆ ಮಾಡಿದ್ದೇವೆ ಎನ್ನುವುದನ್ನು ತಾವೇ ಹೇಳಿ. ಆಡಳಿತ ಪಕ್ಷದವರು ಏತಕ್ಕೆ ಹೀಗೆ ಮಾಡುತ್ತಿದ್ದಾರೆ ಎನ್ನುವುದು ನಮಗೆ ಗೊತ್ತಿಲ್ಲ. ಮಾನ್ಯ ಮುಖ್ಯಮಂತ್ರಿಯವರು ಬಂದಿದ್ದಾರೆ. ಬೆಳಗಾವಿಯಲ್ಲಿ ಸುವರ್ಣ ಸೌಧವನ್ನು ಕಟ್ಟಿದ ಉದ್ದೇಶವೇನು?

**ಶ್ರೀ ಕೆ.ಅಬ್ದುಲ್ ಜಬ್ಬಾರ್:–** ಮಾನ್ಯ ಸಭಾಪತಿಯವರೇ, ತಾವೇನಾದರೂ ಉತ್ತರ ಕರ್ನಾಟಕದ ವಿಷಯವನ್ನು ಚರ್ಚೆಗೆ ತೆಗೆದುಕೊಳ್ಳುವುದಿಲ್ಲ ಎಂದು ಹೇಳಿದ್ದೀರಾ?

**ಶ್ರೀ ರಘುನಾಥ ರಾವ್ ಮಲ್ಕಾಪೂರೆ:–** ಪೀಠದಿಂದ ನಾನು ಮಾತನಾಡುವುದಕ್ಕೆ ಅವಕಾಶ ಕೊಟ್ಟಿದ್ದಾರೆ, ಮಾತನಾಡುತ್ತೇನೆ. ನಾನೇನಾದರೂ ತಪ್ಪು ಮಾತನಾಡಿದರೆ ಹೇಳಿ ಕುಳಿತುಕೊಳ್ಳುತ್ತೇನೆ.

**ಶ್ರೀ ಕೆ.ಅಬ್ದುಲ್ ಜಬ್ಬಾರ್:–** ಪ್ರಶ್ನೋತ್ತರ ಅವಧಿಯ ನಂತರ ತೆಗೆದುಕೊಳ್ಳುವುದಕ್ಕೆ ಹೇಳಿದ್ದೇವೆ. ಮತ್ತೆ ಅದೇ ಮಾತನ್ನು ಹೇಳುತ್ತೀರಿ.

(ಗೊಂದಲ)

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"**

**ಶ್ರೀ ರಘುನಾಥ ರಾವ್ ಮಲ್ಕಾಪೂರೆ:-** ಮಂಗಳೂರಿನವರಿಗೆ ಉತ್ತರ ಕರ್ನಾಟಕದ ಸಮಸ್ಯೆಗಳು ಗೊತ್ತಿರುವುದಿಲ್ಲ, ದಯವಿಟ್ಟು ಕುಳಿತುಕೊಳ್ಳಿ. This is not the way. ಇದು ಪದ್ಧತಿ ಅಲ್ಲ. ನಾವಿಲ್ಲಿ ಸೇರಿರುವ ಉದ್ದೇಶವೇನು? ಹತ್ತಾರು ಕೋಟಿ ರೂಪಾಯಿಗಳನ್ನು ಖರ್ಚು ಮಾಡಿ ಬೆಳಗಾವಿಯಲ್ಲಿ ಅಧಿವೇಶನಕ್ಕೆಂದು ಏಕೆ ಸೇರಿದ್ದೇವೆ? ಈಗ ಬೆಳಗಾವಿಯಲ್ಲಿ ಅಧಿವೇಶನ ಸೇರಿದ್ದು ಸಾರ್ಥಕವಾಗುತ್ತಿದೆಯೇ?

(ಮುಂದುವರೆದಿದೆ...

*(597) 20-12-2018/12-00/ಕೆಹೆಚ್-ಎಕೆ*

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ** (ಮುಂದುವರೆದುದು ...

ನಾಳೆಯ ದಿವಸ ನಾವೆಲ್ಲಾ ನಮ್ಮ ನಮ್ಮ ಕ್ಷೇತ್ರಗಳಿಗೆ ಮತ್ತು ಜಿಲ್ಲೆಗಳಿಗೆ ಹೋದ ಮೇಲೆ ಇದರ ಬಗ್ಗೆ ಉತ್ತರವನ್ನು ಕೊಡಬೇಕಾಗುತ್ತದೆ. ಆ ದಿಕ್ಕಿನಲ್ಲಿ ನಾನು ಪೀಠಕ್ಕೆ ಕೈಮುಗಿದು ವಿನಂತಿಯನ್ನು ಮಾಡುತ್ತೇನೆ. ಈ ಸದನದ ಎಲ್ಲಾ ಕಾರ್ಯಕಲಾಪಗಳನ್ನು ಬದಿಗಿಟ್ಟು ಉತ್ತರ ಕರ್ನಾಟಕ ಮತ್ತು ಹೈದರಾಬಾದ್-ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುವುದಕ್ಕೆ ಅನುವು ಮಾಡಿಕೊಡಬೇಕೆಂದು ಕೈಮುಗಿದು ವಿನಂತಿಯನ್ನು ಮಾಡುತ್ತೇನೆ.

**(ಗೊಂದಲ)**

**ಶ್ರೀ ಪುಟ್ಟರಂಗಶೆಟ್ಟಿ (ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು):-** ಮಾನ್ಯ ಸಭಾಪತಿಯವರೆ, ಮಾನ್ಯ ಸದಸ್ಯರು ಹೇಳುವುದನ್ನು ಒಪ್ಪುತ್ತೇನೆ. ಪ್ರಶ್ನೋತ್ತರ ಅವಧಿ ಮುಗಿದ ಮೇಲೆ ಅದರ ಬಗ್ಗೆ ಮಾತನಾಡುವುದಕ್ಕೆ ಅವಕಾಶ ಮಾಡಿಕೊಡುತ್ತೇನೆ ಎಂದು ಹೇಳಿದ್ದಾರಲ್ಲವೇ?

**ಸಭಾಪತಿಯವರು:-** ಈಗ ಪ್ರಶ್ನೋತ್ತರ ಅವಧಿಯನ್ನು ಪ್ರಾರಂಭ ಮಾಡೋಣ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೆ, ಉತ್ತರ ಕರ್ನಾಟಕದ ಜಲ್ವಂತ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಬೇಕೆಂದು ಹೇಳಿದ್ದೇವೆ. ಸದನಕ್ಕೆ ಮಾನ್ಯ ಮುಖ್ಯಮಂತ್ರಿಯವರು ಬಂದಿದ್ದಾರೆ. ದಯವಿಟ್ಟು ಪ್ರಶ್ನೋತ್ತರ ಅವಧಿಯನ್ನು ಬದಿಗಿಟ್ಟು ಉತ್ತರ ಕರ್ನಾಟಕ ವಿಷಯವನ್ನು ಕೈಗೆತ್ತಿಕೊಳ್ಳಬೇಕು.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಕುಡಿಯುವ ನೀರಿಗೆ ಹಾಹಾಕಾರವಾಗಿದೆ. (ಗೊಂದಲ) ಡಾ॥ ನಂಜುಡಪ್ಪ ವರದಿ ಇನ್ನೂ ಜಾರಿಯಾಗದೇ ಉಳಿದಿದೆ. ಇನ್ನೂ ಅನೇಕ ಸಮಸ್ಯೆಗಳು ಇವೆ. ಇಡೀ ಉತ್ತರ ಕರ್ನಾಟಕ ತತ್ತರಿಸಿ ಹೋಗುವಂತಹ ಪರಿಸ್ಥಿತಿ ಉದ್ಭವವಾಗಿದೆ.

**(ಗೊಂದಲ)**

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರ ಅವಧಿಯನ್ನು ಬದಿಗಿಡುವುದಕ್ಕೆ ಆಗುವುದಿಲ್ಲ. ನಾವು ಕಷ್ಟ ಬಿದ್ದು ಏಕೆ ಪ್ರಶ್ನೆಗಳನ್ನು ತಂದಿದ್ದೇವೆ?

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ನಾನು ಮಾನ್ಯ ಮುಖ್ಯಮಂತ್ರಿಯವರಲ್ಲಿ ವಿನಂತಿ ಮಾಡುತ್ತೇನೆ. ಈ ಸಂಪ್ರದಾಯವನ್ನು ಬದಿಗೊತ್ತಿ ಈ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಬೇಕು.

**(ಗೊಂದಲ)**

**ಶ್ರೀ ಪುಟ್ಟರಂಗಶೆಟ್ಟಿ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರ ಅವಧಿಯನ್ನು ಪ್ರಾರಂಭ ಮಾಡಿ.

**ಶ್ರೀ ಎಸ್.ವಿ.ಸಂಕನೂರ (ಪದವೀಧರರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಮಾನ್ಯ ಸಚಿವರಾದ ದೇಶಪಾಂಡೆಯವರು ಸಹ ಉತ್ತರ ಕರ್ನಾಟಕ ಭಾಗದವರಾಗಿದ್ದಾರೆ.

**ಶ್ರೀ ಆರ್.ವಿ.ದೇಶಪಾಂಡೆ (ಕಂದಾಯ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು):-** ಮಾನ್ಯ ಸಭಾಪತಿಯವರೆ, ಉತ್ತರ ಕರ್ನಾಟಕದ ಬಗ್ಗೆ ಚರ್ಚೆಯಾಗಬೇಕು. ಈ ಸಭೆಯ ನಾಯಕರು ಬಹಳ ಸ್ಪಷ್ಟವಾಗಿ ಹೇಳಿದ್ದಾರೆ. ಪ್ರಶ್ನೋತ್ತರ ಅವಧಿಯನ್ನು ತೆಗೆದುಕೊಂಡರೂ ಸಹ ಉತ್ತರ ಕರ್ನಾಟಕದ ಚರ್ಚೆಯ ಬಗ್ಗೆ ಯಾರೂ ವಿರೋಧವನ್ನು ವ್ಯಕ್ತಪಡಿಸಿಲ್ಲ? ಇಷ್ಟು ಹೊತ್ತು ಏಕೆ ವಿಳಂಬ ಮಾಡಲಾಯಿತು. ಮುಂಚೆಯೇ ಪ್ರಶ್ನೋತ್ತರ ಅವಧಿಯನ್ನು ಪ್ರಾರಂಭ ಮಾಡಬೇಕಾಗಿತ್ತು. ಇವತ್ತು ಮತ್ತು ನಾಳೆ ಉತ್ತರ ಕರ್ನಾಟಕದ ಬಗ್ಗೆ ಚರ್ಚೆ ಮಾಡಿ. ಆದರೆ ಪ್ರಶ್ನೋತ್ತರ

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಅವಧಿ ಮುಗಿದ ಮೇಲೆ ಚರ್ಚೆ ಮಾಡಬೇಕು. ಈ ಸಭೆಯ ನಿಯಮಗಳನ್ನು ತಾವು ಮಾಡಿರುವುದಲ್ಲ. ಈ ಸಭೆಯ ನಿಯಮದ ಪ್ರಕಾರ ಮಾಡಿ.

**ಶ್ರೀ ಎಸ್.ವ್ಹಿ.ಸಂಕನೂರ:-** ಮಾನ್ಯ ಸಭಾಪತಿಯವರೆ, ...

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಒಂದು ನಿಮಿಷ.

**ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ ಒಂದು ಗಂಟೆಗಳ ಕಾಲ ಕಾಯುವುದಕ್ಕೆ ಆಗುವುದಿಲ್ಲವೇ. ಏನು ಈ ರೀತಿ ಮಾಡುತ್ತಿದ್ದೀರಿ?

**ಶ್ರೀ ಕೆ.ಸಿ.ಕೊಂಡಯ್ಯ:-** ಮಾನ್ಯ ಸಭಾಪತಿಯವರೆ, ಮಾನ್ಯ ವಿರೋಧ ಪಕ್ಷದ ನಾಯಕರೇ ನಮಗೂ ಕೂಡ ಉತ್ತರ ಕರ್ನಾಟಕದ ಬಗ್ಗೆ ಕಾಳಜಿ ಇದೆ.

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಮಾನ್ಯ ಸದಸ್ಯರೇ ತಾವು ಕೂಡ ಹೈದರಾಬಾದ್-ಕರ್ನಾಟಕದವರು, ತಾವು ಈ ರೀತಿ ಮಾಡಿದರೆ ಹೇಗೆ? ತಾವು ಸಹ ನಮ್ಮ ಬೆಂಬಲಕ್ಕೆ ಬರಬೇಕು. ದಯವಿಟ್ಟು ಪ್ರಶ್ನೆಯನ್ನು ಕೇಳಬೇಡಿ.

**ಶ್ರೀ ಕೆ.ಸಿ.ಕೊಂಡಯ್ಯ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರ ಅವಧಿ ಮುಗಿದ ನಂತರ ಆ ವಿಷಯವನ್ನು ತೆಗೆದುಕೊಂಡು ಬನ್ನಿ.

**ಸಭಾಪತಿಯವರು:-** ಮಾನ್ಯ ಕೊಂಡಯ್ಯನವರೆ, ತಾವು ಪ್ರಶ್ನೆಯನ್ನು ಕೇಳಿ.

**ಶ್ರೀ ಕೆ.ಸಿ.ಕೊಂಡಯ್ಯ:-** ಮಾನ್ಯ ಸಭಾಪತಿಯವರೆ, ಪ್ರಶ್ನೆ ಸಂಖ್ಯೆ:1125ನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಲ್ಲಿ ಕೇಳುತ್ತಿದ್ದೇನೆ.

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ವಿರೋಧ ಪಕ್ಷದ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಯವರೆ, ದಯವಿಟ್ಟು ಪ್ರಶ್ನೋತ್ತರ ಅವಧಿಯನ್ನು ರದ್ದು ಮಾಡಿ, ಉತ್ತರ ಕರ್ನಾಟಕದ ಬಗ್ಗೆ ಚರ್ಚೆ ಮಾಡಬೇಕು.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ತಮ್ಮ ಮುಖಾಂತರ ಸರ್ಕಾರಕ್ಕೆ ವಿನಂತಿ ಮಾಡುತ್ತೇವೆ. (ಗೊಂದಲ) ಪ್ರತಿಷ್ಠೆ ಬದಿಗೊತ್ತಿ ಉತ್ತರ ಕರ್ನಾಟಕದ ಸಮಸ್ಯೆಯ ಬಗ್ಗೆ ಗಂಭೀರವಾಗಿ ಚರ್ಚೆ ಮಾಡಬೇಕು.

**ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೆ, ಒಂದು ನಿಮಿಷ ಕುಳಿತುಕೊಳ್ಳಿ.

**ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೆ, ನಾನು ಸದನಕ್ಕೆ ಬಂದಾಗ ಮಾನ್ಯ ಸದಸ್ಯರುಗಳು ಚರ್ಚೆಯನ್ನು ಮಾಡುತ್ತಿದ್ದಂತಹ ಸಂದರ್ಭದಲ್ಲಿ, ಅವರ ಅಭಿಪ್ರಾಯದಲ್ಲಿ ಕೇವಲ ಉತ್ತರ ಕರ್ನಾಟಕದ ಸಮಸ್ಯೆಯ ಬಗ್ಗೆ ಚರ್ಚೆ ಮಾಡುವುದಕ್ಕೋಸ್ಕರವೇ ಈ ಬೆಳಗಾವಿ ಅಧಿವೇಶನವನ್ನು ಕರೆದಿರುವುದು ಎನ್ನುವ ಭಾವನೆಯಿಂದ ಹೇಳುತ್ತಿದ್ದರು.

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ:-** ಮಾನ್ಯ ಸಭಾಪತಿಯವರೆ, ವಿಶೇಷವಾಗಿ . . .

**(ಗೊಂದಲ)**

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಇನ್ನು ಬೇರೆ ವಿಷಯಗಳ ಬಗ್ಗೆ ಚಕಾರ ಎತ್ತಿಲ್ಲ.

**(ಗೊಂದಲ)**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

---

**ಶ್ರೀ ಹೆಚ್.ಡಿ. ಕುಮಾರಸ್ವಾಮಿ:-** ಮಾನ್ಯ ಸಭಾಪತಿಯವರೆ, ನಾನು ಗೌರವಾನ್ವಿತ ಸದಸ್ಯರಲ್ಲಿ ಮನವಿ ಮಾಡುವುದೇನೆಂದರೆ, 2006ನೇ ಸಾಲಿನಲ್ಲಿ ಸುವರ್ಣ ಸೌಧ ಕಟ್ಟುವ ಬಗ್ಗೆ ನಿರ್ಧಾರ ಮಾಡಲಾಯಿತು. ಆವತ್ತಿನ ದಿವಸ ಕೇಂದ್ರದ ಗೃಹ ಸಚಿವರು ಮತ್ತು ಮಹಾರಾಷ್ಟ್ರದವರು ಪ್ರಧಾನಮಂತ್ರಿಗಳ ಹತ್ತಿರ ನಿಯೋಗವನ್ನು ತೆಗೆದುಕೊಂಡು ಹೋಗಿ ಬೆಳಗಾವಿಯನ್ನು ಮಹಾರಾಷ್ಟ್ರಕ್ಕೆ ಸೇರಿಸಬೇಕೆಂಬ ಬಗ್ಗೆ ಮನವಿ ಕೊಡುವಂತಹ ಘಟನೆ ಏನು ನಡೆಯಿತು, ಆವತ್ತಿನ ದಿವಸ ಕಾಕತಾಳೀಯವೆಂಬಂತೆ ಅವರು ಮತ್ತು ನಾವು ಸೇರಿ ಸರ್ಕಾರವನ್ನು ಮಾಡಿದೆವು. ಆವತ್ತಿನ ದಿವಸ ಈ ಬೆಳಗಾವಿಯಲ್ಲಿ ವಿಧಾನ ಮಂಡಲದ ಕಲಾಪಗಳನ್ನು ನಡೆಸಬೇಕೆಂದು ನಾನು ತೀರ್ಮಾನ ಮಾಡಿದ್ದೆ. ಮಹಾರಾಷ್ಟ್ರದವರು ಪ್ರತಿನಿತ್ಯ ಬೆಳಗಾವಿಯನ್ನು ಒಡೆಯುವಂತಹ ನಿಟ್ಟಿನಲ್ಲಿ ಅವರ ಒಂದು ಬೇಡಿಕೆಗಳನ್ನಿಟ್ಟುಕೊಂಡು ಹೊರಟಿದ್ದರು. ಅದಕ್ಕೆ ಸ್ಪಷ್ಟವಾದ ಉತ್ತರವೇನೆಂದರೆ, ಬೆಳಗಾವಿ ಜಿಲ್ಲೆ ಕನ್ನಡಿಗರ ಹಕ್ಕು, ಇದು ಕರ್ನಾಟಕಕ್ಕೆ ಸೇರಿದ್ದು ಎನ್ನುವಂತಹ ಒಂದು ಸ್ಪಷ್ಟವಾದ ಸಂದೇಶ ಹೋಗಬೇಕೆನ್ನುವ ಹಿನ್ನೆಲೆಯೊಳಗೆ ವಿಧಾನಸಭೆಯ ಕಲಾಪಗಳು ಈ ಬೆಳಗಾವಿ ನಗರದಲ್ಲಿಯೇ ನಡೆಯಬೇಕೆಂದು ನಿರ್ಧಾರವನ್ನು ಮಾಡಲಾಯಿತು. ಆವತ್ತು ಇನ್ನು ಸುವರ್ಣ ವಿಧಾನಸೌಧವನ್ನು ಕಟ್ಟಿರಲಿಲ್ಲ. ಆದರೂ ತಕ್ಷಣಕ್ಕೆ ನಾವೆಲ್ಲರೂ ಸೇರಿ ಸದನವನ್ನು ನಡೆಸಲಾಯಿತು. ನಮ್ಮ ಸನ್ಮಾನ್ಯ ಪ್ರಭಾಕರ ಕೋರೆಯವರ ಕೆ.ಎಲ್.ಇ., ಸೊಸೈಟಿಯ ಒಂದು ಸಭಾಂಗಣದಲ್ಲಿಯೇ ವಿಧಾನ ಮಂಡಲದ ಎರಡೂ ಸದನಗಳನ್ನು ನಡೆಸುವುದಕ್ಕೆ ತೀರ್ಮಾನವನ್ನು ಮಾಡಲಾಯಿತು. ನಂತರದ ದಿನಗಳಲ್ಲಿ ಈ ಸುವರ್ಣ ಸೌಧವನ್ನು ಕಟ್ಟಲಾಯಿತು.

ವರ್ಷದಲ್ಲಿ ಒಂದು ಅಧಿವೇಶನ ಈ ಬೆಳಗಾವಿಯಲ್ಲಿ ನಡೆಸಬೇಕೆಂಬ ಉದ್ದೇಶದಿಂದ ಸುವರ್ಣ ಸೌಧವನ್ನು ನಿರ್ಮಾಣ ಮಾಡಲಾಗಿದೆಯೇ ಹೊರತು ಅಖಂಡ ಕರ್ನಾಟಕವನ್ನು ಒಡೆಯಬೇಕೆಂಬ ದೃಷ್ಟಿಯಿಂದ ನಿರ್ಮಿಸಿರುವುದಿಲ್ಲ. ಈ ರಾಜ್ಯದ ಸಮಸ್ಯೆಗಳ ಬಗ್ಗೆ ಅಲ್ಲಿ ಏನು ಚರ್ಚೆ ಮಾಡುತ್ತೇವೆ, ಅದನ್ನು ಇಲ್ಲಿ ಮುಂದುವರಿಸುವುದಕ್ಕೆ ಈ ಸುವರ್ಣ ಸೌಧವನ್ನು ನಿರ್ಮಿಸಲಾಗಿದೆ. ಇವತ್ತಿನ ದಿವಸ ಹೈದರಾಬಾದ್-ಕರ್ನಾಟಕದ ವಿಷಯದಲ್ಲಿ ಮಾನ್ಯ ಸದಸ್ಯರು ಹೇಳುತ್ತಿದ್ದಾರೆ. 2002-03ನೇ ಸಾಲಿನಲ್ಲಿ ಡಾ॥ ನಂಜುಡಪ್ಪ ವರದಿ ಜಾರಿಗೆ ಬಂದಿದೆ. 2006ನೇ ಸಾಲಿನ ನಂತರ ಡಾ॥ ನಂಜುಡಪ್ಪ ವರದಿಯನ್ನು ಜಾರಿಗೆ ತರುವಂತಹ ನಿಟ್ಟಿನಲ್ಲಿ ನಾವು ಚಾಲನೆ ಕೊಡುವುದಕ್ಕೆ ಪ್ರಯತ್ನ ಪಟ್ಟಿದ್ದೇವೆ. ಇವತ್ತಿನ ದಿವಸ ಅದು ಪ್ರಮುಖವಾದ ಅಂಶ ಎಂದು ನಾನು ಒಪ್ಪಿಕೊಳ್ಳುತ್ತೇನೆ. ಉತ್ತರ ಕರ್ನಾಟಕದ ಅಭಿವೃದ್ಧಿಗೆ ಚಾಲನೆಯನ್ನು ಕೊಡಬೇಕು. ಇದರ ಬಗ್ಗೆ ಚರ್ಚೆ ಮಾಡುವುದಕ್ಕೆ ನನ್ನದೇನು ತಕರಾರು ಇಲ್ಲ. ನಾನು ಸದನದ ಮಾನ್ಯ ಸದಸ್ಯರುಗಳಲ್ಲಿ ಮನವಿ ಮಾಡುವುದೇನೆಂದರೆ, ಇದುವರೆಗೂ ಎಷ್ಟು ಸಮಯ ವ್ಯರ್ಥವಾಯಿತು? ಆ ಸಮಯದಲ್ಲಿ ಪ್ರಶ್ನೋತ್ತರ ಅವಧಿಯನ್ನು ಮುಗಿಸಿದ್ದರೆ, ನಂತರ ಉತ್ತರ ಕರ್ನಾಟಕದ ಅಭಿವೃದ್ಧಿ ಬಗ್ಗೆಯೇ ಚರ್ಚೆ ಮಾಡಬಹುದಾಗಿತ್ತು.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಇವತ್ತಿನ ದಿವಸ ಹೊರಗಡೆ ಒಂದು ರೀತಿಯ ಭಾವನೆಗಳಿವೆ. ಸಾಲ ಮನ್ನಾ ಯೋಜನೆಗೋಸ್ಕರ ಈ ಸರ್ಕಾರವು ಹಿಂದಿನ ಸರ್ಕಾರದಲ್ಲಿ ಅನುಮೋದನೆ ಕೊಟ್ಟು, ಉತ್ತರ ಕರ್ನಾಟಕದ ಹಲವಾರು ನೀರಾವರಿ ಯೋಜನೆಗಳನ್ನು ಸ್ಥಗಿತಗೊಳಿಸಿದ್ದಾರೆ ಎಂದು ಇವತ್ತಿನ ದಿವಸ ಕೆಲವು ಚಾನೆಲ್‌ಗಳಲ್ಲಿ ಮತ್ತು ಪತ್ರಿಕೆಗಳಲ್ಲೂ ವರದಿಯಾಗಿರುವುದನ್ನು ನಾವು ನೋಡಿದ್ದೇನೆ. ಇದನ್ನು ಒಂದು ದೊಡ್ಡ ಸ್ಟೋರಿಯಾಗಿ ಮಾಡಿಕೊಂಡಿದ್ದಾರೆ. ಇವತ್ತಿನ ದಿವಸ ಅದರ ಬಗ್ಗೆ ಚರ್ಚೆ ಮಾಡುವುದಕ್ಕೆ ನಮಗೂ ಅವಶ್ಯಕತೆ ಇದೆ. ಸರ್ಕಾರದ ಸಾಲ ಮನ್ನಾ ಕಾರ್ಯಕ್ರಮಕ್ಕೂ ಮತ್ತು ರಾಜ್ಯದ ಅಭಿವೃದ್ಧಿಗೂ ಹಿಂದಿನ ಮಾನ್ಯ ಸಿದ್ಧರಾಮಯ್ಯನವರ ಸರ್ಕಾರ ಅಧಿಕಾರದಲ್ಲಿದ್ದಾಗ Vote on Account ಅನ್ನು ತೆಗೆದುಕೊಂಡಿದ್ದಾರೆ ಮತ್ತು ನಾವು ಒಂದು ಬಜೆಟ್‌ನ್ನು ಮಂಡನೆ ಮಾಡಿದ್ದೇವೆ. ಯಾವುದೇ ಯೋಜನೆಗಳನ್ನು ತಿಳಿಸುವಂತಹ ಪ್ರಶ್ನೆ ಇಲ್ಲ. ಹಣವನ್ನು ಕೊಟ್ಟಿರುವಂತಹದ್ದನ್ನು ಕಡಿತಗೊಳಿಸುವಂತಹ ಮಾತಿಲ್ಲ ಎನ್ನುವ ಬಗ್ಗೆ ನಿರಂತರವಾಗಿ ಮತ್ತು ಸ್ಪಷ್ಟವಾಗಿ ಹೇಳಿದ್ದೇನೆ. ಸಾಲ ಮನ್ನಾ ಉದ್ದೇಶಕ್ಕೆ ಬೇರೆ ಹಣವನ್ನು ತೆಗೆದಿಟ್ಟಿದ್ದೇವೆ. ಆದರೂ ಹೊರಗಡೆ ಈ ರೀತಿಯ ಚರ್ಚೆಗಳು ಏನಿವೆ, ಮಾನ್ಯ ಸದಸ್ಯರುಗಳು ಉತ್ತರ ಕರ್ನಾಟಕದ ಬಗ್ಗೆ ಚರ್ಚೆ ಮಾಡಬೇಕೆಂದು ಏನು ಪ್ರಸ್ತಾಪ ಮಾಡುತ್ತಿದ್ದಾರೆ, ಅವರಿಗಿಂತ ಹೆಚ್ಚಾಗಿ ನನಗೆ ಬಹಳ ಅನಿವಾರ್ಯತೆ ಇದೆ. ದಯವಿಟ್ಟು, ಗೌರವಾನ್ವಿತ ಸದಸ್ಯರಲ್ಲಿ ಮನವಿ ಮಾಡುವುದೇನೆಂದರೆ, ಈ ಪ್ರಶ್ನೋತ್ತರ ಅವಧಿ ಇನ್ನು ಒಂದು ಗಂಟೆಯಲ್ಲಿ ಮುಗಿಯುತ್ತದೆ. ನಂತರ ಉತ್ತರ ಕರ್ನಾಟಕದ ಅಭಿವೃದ್ಧಿಯ ಬಗ್ಗೆ ಚರ್ಚೆ ಮಾಡಲಿ, ಅವರ ಜೊತೆಗೆ ನಾನು ಭಾಗವಹಿಸುತ್ತೇನೆ. ನನಗೂ ಸಹ ಇದರ ಅವಶ್ಯಕತೆ ಇದೆ. ಇದಕ್ಕೆ ಮಾನ್ಯ ಸದಸ್ಯರೆಲ್ಲರೂ ಸಹಕಾರ ಕೊಡಬೇಕೆಂದು ಮನವಿ ಮಾಡುತ್ತೇನೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೆ, ನಾವು ಸರ್ಕಾರಕ್ಕೆ ಇಷ್ಟೇ ಹೇಳುವುದು, ಗೌರವಾನ್ವಿತ ಮುಖ್ಯಮಂತ್ರಿಯವರು 2 ವಾರಗಳ ಕಾಲ ಅಧಿವೇಶನವನ್ನು ಕರೆದಿದ್ದಾರೆ. ಆದರೆ, ಈ 2 ವಾರದಲ್ಲಿ 10 ದಿವಸಗಳು ಮಾತ್ರ working days ಸಿಗುತ್ತದೆ. ಸ್ವಾಭಾವಿಕವಾಗಿ ಶುಕ್ರವಾರ ದಿನದಂದು ಅರ್ಧ ದಿವಸ ಮಾತ್ರ ಸದನವನ್ನು ನಡೆಯುತ್ತದೆ. ಸರಾಗವಾಗಿ 8 ದಿವಸಗಳು ಮಾತ್ರ ಕೆಲಸದ ದಿನಗಳು ಸಿಗುತ್ತದೆ. ಇವತ್ತು 7ನೇಯ ದಿವಸವಾಗಿದ್ದು, ನಾಳೆ ಅರ್ಧ ದಿವಸ ಮಾತ್ರ ಸದನವನ್ನು ನಡೆಯುತ್ತದೆ. ನಾಳೆ ಪ್ರಶ್ನೋತ್ತರ ಅವಧಿ ನಡೆಯುವುದಿಲ್ಲ. ಅದು ನಮಗೂ ಮತ್ತು ನಿಮಗೂ ಗೊತ್ತಿರುವಂತಹದ್ದು, ಇವತ್ತು ಒಂದು ದಿವಸದ ಅವಧಿಯಲ್ಲಿ ಎಲ್ಲವನ್ನೂ ಬದಿಗೊತ್ತಿ ನಿಲುವಳಿ ಸೂಚನೆಯನ್ನು ಕೊಟ್ಟು ಉತ್ತರ ಕರ್ನಾಟಕದ ಬಗ್ಗೆ ಚರ್ಚೆ ಮಾಡೋಣ ಎಂದು ಹೇಳಿದ್ದೇವೆ. ಡಾ॥ ನಂಜುಡಪ್ಪ ವರದಿ, ನೀರಾವರಿ ಯೋಜನೆಗಳು, ಬಡವರ ಮನೆಗಳು ಮತ್ತು ಕುಡಿಯುವ ನೀರಿನ ಸಮಸ್ಯೆಗಳು ಇನ್ನೂ ಹಲವಾರು ಸಮಸ್ಯೆಗಳು ಈ ಉತ್ತರ ಕರ್ನಾಟಕದ ಭಾಗದಲ್ಲಿ ಇದೆ ಎಂಬುದನ್ನು ನಾವು ಒಪ್ಪಿಕೊಂಡಿದ್ದೇವೆ. ಬಹುತೇಕ ಸರ್ಕಾರ ಪೂರ್ಣ ಸನ್ನದ್ಧವಾಗಿ ಬಂದು ಮಾನ್ಯ ಮುಖ್ಯಮಂತ್ರಿಯವರು ಇಡೀ ದಿವಸ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಕುಳಿತುಕೊಂಡರೂ ಸಹ ಪೂರ್ಣ ಚರ್ಚೆ ಮಾಡುವುದಕ್ಕೆ ಸಮಯ ಕಡಿಮೆಯಾಗಬಹುದೆಂಬುದು ಉದ್ದೇಶವಾಗಿದೆ. ಹಾಗಾಗಿ ತಾವು ಹೇಳುತ್ತಿರುವ ಸಂಪ್ರದಾಯ ಸರಿಯಾಗಿ ಇದೆ. ಸಂಪ್ರದಾಯ ಸರಿಯಿಲ್ಲ ಎಂದು ನಾನು ಹೇಳುತ್ತಿಲ್ಲ. ಇದನ್ನು ನಾವು ಒಪ್ಪುತ್ತೇವೆ. ಇವತ್ತಿನ ಈ ಪರಿಸ್ಥಿತಿಯಲ್ಲಿ ಉತ್ತರ ಕರ್ನಾಟಕದ ಸಮಸ್ಯೆಯ ಬಗ್ಗೆ ಗಂಭೀರವಾಗಿ ಚರ್ಚೆ ಮಾಡಬೇಕಾದ ಅನಿವಾರ್ಯತೆ ಇರುವುದರಿಂದ, ಎಲ್ಲಾ ಸಂಪ್ರದಾಯವನ್ನು ಬದಿಗೊತ್ತಿ, ಇದಕ್ಕೆ ಪ್ರಾತಿನಿಧ್ಯವನ್ನು ಕೊಡುವಂತಹ ಪರಮಾಧಿಕಾರ ಈ ಪೀಠಕ್ಕೆ ಇದೆ. ಆದ್ದರಿಂದ ಇದನ್ನು ಒತ್ತಾಯ ಮಾಡುತ್ತಿದ್ದೇವೆ. ಹಾಗಾಗಿ ಇದರಲ್ಲಿ ಯಾವುದೇ ಗೊಂದಲ ಮತ್ತು ಪ್ರತಿಷ್ಠೆ ಇಲ್ಲ. ಸರ್ಕಾರ ಏಕೆ ಪ್ರತಿಷ್ಠೆಯನ್ನು ಕೈಗೆತ್ತಿಕೊಂಡಿತೋ ನಮಗೆ ಗೊತ್ತಿಲ್ಲ. ನಮ್ಮ ವಿನಂತಿಯೇನೆಂದರೆ, ಎಲ್ಲವನ್ನೂ ಬದಿಗೊತ್ತಿ, ನಿಲುವಳಿ ಸೂಚನೆಯನ್ನು ಕೈಗೆತ್ತಿಕೊಳ್ಳಬೇಕು. ಉತ್ತರ ಕರ್ನಾಟಕದ ಜ್ವಲಂತ ಸಮಸ್ಯೆಯ ಬಗ್ಗೆ ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂಬುದಷ್ಟೇ ನಮ್ಮ ಆಗ್ರಹವಾಗಿದೆ.

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ...

**ಸಭಾಪತಿಯವರು:-** ಈಗಾಗಲೇ ಪ್ರಶ್ನೋತ್ತರ ಅವಧಿಯನ್ನು ಕರೆಯಲಾಗಿದೆ. ಮಾನ್ಯ ಕೊಂಡಯ್ಯನವರು ಪ್ರಶ್ನೆಯನ್ನು ಕೇಳಿದ್ದಾರೆ. ಇದರ ಬಗ್ಗೆ ಮಾನ್ಯ ಸಚಿವರು ಉತ್ತರವನ್ನು ಕೊಡುತ್ತಾರೆ.

**(ಗೊಂದಲ)**

**ಶ್ರೀ ಆಯನೂರು ಮಂಜುನಾಥ್(ಪದವೀಧರರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಮಾನ್ಯ ಸದಸ್ಯರುಗಳ ಆತಂಕವೇನೆಂದರೆ, ಪ್ರಶ್ನೋತ್ತರ ಅವಧಿ ಒಂದು ಗಂಟೆ ಕಾಲ ನಡೆಯುವುದಿಲ್ಲ. ಮೂರು –ಮೂರು ಗಂಟೆಗಳ ಕಾಲ ನಡೆಯುತ್ತದೆ.

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರ ಅವಧಿಗೆ ಉತ್ತರವನ್ನು ಕೊಟ್ಟ ಮೇಲೆ ನಮಗೆ ಪುಷ್ಟಿ ಬರುತ್ತದೆ. ಇದರ ಬಗ್ಗೆ ಪೀಠ ತೀರ್ಮಾನವನ್ನು ಕೊಡುತ್ತದೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**ಸಭಾಪತಿಯವರು:-** ಪ್ರಶ್ನೋತ್ತರ ಅವಧಿಯನ್ನು ಈಗ ಪ್ರಾರಂಭ ಮಾಡಿ ಒಂದು ಗಂಟೆಗೆ ಮುಕ್ತಾಯ ಮಾಡೋಣ.

**ಶ್ರೀ ಎಸ್.ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಮಾನ್ಯ ಸದಸ್ಯರು ಮಾತನಾಡುವುದಕ್ಕೆ ಅವಕಾಶ ಕೊಡಬೇಕು. ಈ ಸದನವು ಮಾನ್ಯ ವಿರೋಧ ಪಕ್ಷದ ನಾಯಕರು ಹೇಳಿದ ಹಾಗೆ ಕೇಳಬೇಕೆಂದು ನಾನು ಹೇಳುತ್ತೇನೆ.

**(ಗೊಂದಲ)**

**(ಮುಂದುವರೆದಿದೆ...)**

***(598) 20-12-2018 (12-10) ಎಸ್‌ಪಿಆರ್-ಎಕೆ***

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರವನ್ನು ಕೊನೆಯಲ್ಲಿ ತೆಗೆದುಕೊಳ್ಳೋಣ. ಇದರಲ್ಲಿ ಯಾವುದೇ ರಾಜಿ ಇಲ್ಲ. **(ಗೊಂದಲ)** ಇದರಲ್ಲಿ ಯಾವುದೇ ತೊಂದರೆ ಇಲ್ಲ. ಇದನ್ನು ನಾವು ಒಪ್ಪಿದ್ದೇವೆ. **(ಗೊಂದಲ)** ಇದರಲ್ಲಿ ಸರ್ಕಾರ ಸಹ ಭಾಗಿಯಾಗಲಿ.

**(ಗೊಂದಲ)**

**ಶ್ರೀ ಶರಣಪ್ಪ ಮಟ್ಟೂರ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರವನ್ನು ...

**(ಗೊಂದಲ)**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಸರ್ಕಾರ ಹಠ ಮಾಡಬಾರದು. ಇದು ಸರ್ಕಾರಕ್ಕೆ ಶೋಭೆ ತರುವುದಿಲ್ಲ.

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ(ನಾಮನಿರ್ದೇಶಿತರು):-** ಮಾನ್ಯ ಸಭಾಪತಿಯವರೆ, ಇದು ಪ್ರಶ್ನೋತ್ತರ ಅವಧಿಯಾಗಿದೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ನಾಳೆಯ ದಿನ ರಾಜ್ಯದ ಜನತೆಗೆ ಯಾವ ರೀತಿಯ ಸಂದೇಶ ಹೋಗಬೇಕಾಗಿದೆ ಎಂದರೆ ...

**(ಗೊಂದಲ)**

**ಡಾ॥ ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ಇದು ಕಾನೂನನ್ನು ಪರಿಪಾಲನೆ ಮಾಡುವಂತಹದ್ದು. ನಾವೇ ಕಾನೂನನ್ನು ತಂದು ಅದನ್ನು ಮುರಿಯುವುದು ಬೇಡ. ದಯಮಾಡಿ ಒಂದು ಗಂಟೆಗಳ ಕಾಲ ಪ್ರಶ್ನೋತ್ತರ ಕಲಾಪವಾಗುತ್ತದೆ ಅಷ್ಟೆ. ಮೊದಲು ಪ್ರಶ್ನೋತ್ತರಕ್ಕೆ ಅವಕಾಶ ಕೊಡಬೇಕು.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಜ್ವಲಂತ ಸಮಸ್ಯೆಗಳನ್ನು ಮೊದಲು ಕೈಗೆತ್ತಿಕೊಳ್ಳಿ ಎಂದು ರಾಜ್ಯದ ಮಾನ್ಯ ಮುಖ್ಯಮಂತ್ರಿಗಳು ಹೇಳಿದರು ಎಂಬ ಸಂದೇಶವು. ನಾಳೆಯ ದಿವಸ ಬರುತ್ತದೆ. ಪ್ರಶ್ನೋತ್ತರವನ್ನು ಬದಿಗೊತ್ತಿ ಉತ್ತರ ಕರ್ನಾಟಕದ ವಿಷಯಕ್ಕೆ ಸರ್ಕಾರ ಆದ್ಯತೆ ನೀಡಿದೆ ಎನ್ನುವಂತಹ ಗೌರವ ಸರ್ಕಾರಕ್ಕೆ ಸಿಗುತ್ತದೆ. **(ಗೊಂದಲ)** ನಾಳೆಯ ದಿವಸ ಯಾವ ಸಂದೇಶ ಹೋಗುತ್ತದೆ ಎಂದರೆ, ಸ್ವತಃ ರಾಜ್ಯದ ಮುಖ್ಯಮಂತ್ರಿಗಳು ಮತ್ತು ಸಭಾನಾಯಕರು ಇಬ್ಬರೂ ಸದನದಲ್ಲಿ ಇದ್ದರೂ ಸಹ ಪ್ರಶ್ನೋತ್ತರ ಕಲಾಪವನ್ನು ಬದಿಗೊತ್ತಿ ಉತ್ತರ ಕರ್ನಾಟಕದ ಜಿಲ್ಲೆಗಳ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಲು ಅವಕಾಶ ಮಾಡಿಕೊಟ್ಟಿದ್ದಾರೆ ಎನ್ನುವಂತಹ ಗೌರವ ಸರ್ಕಾರಕ್ಕೆ ಸಿಗುತ್ತದೆ. ಇಂತಹ ಅವಕಾಶವನ್ನು ಸರ್ಕಾರ ಏಕೆ ಕಳೆದುಕೊಳ್ಳುತ್ತದೆ ಎಂದು ನಾನು ಕೇಳುತ್ತೇನೆ. **(ಗೊಂದಲ)** ಸರ್ಕಾರ ಏಕೆ ಒಳ್ಳೆಯ ಅವಕಾಶವನ್ನು ಕಳೆದುಕೊಳ್ಳುತ್ತಿದೆ?

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಡಾ|| ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ಒಂದು ಗಂಟೆ ಅವಧಿಯೊಳಗೆ ಪ್ರಶ್ನೋತ್ತರಗಳು ಮುಗಿದು ಹೋಗುತ್ತಿತ್ತು. **(ಗೊಂದಲ)** ಇಷ್ಟು ಹೊತ್ತಿಗೆ ಪ್ರಶ್ನೋತ್ತರ ಮುಗಿದು ಹೋಗುತ್ತಿತ್ತು.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ನಾವು ವಿರೋಧ ಪಕ್ಷದವರು ಈ ನಿಲುವಳಿಯನ್ನು ಪ್ರಸ್ತಾಪಿಸಿದ್ದೇವೆ. **(ಗೊಂದಲ)** ಸಂಪ್ರದಾಯದ ಹೆಸರಿನಲ್ಲಿ ಗೊಂದಲ ನಿರ್ಮಾಣ ಮಾಡುವುದಕ್ಕಿಂತ ಸರ್ಕಾರ ಇದನ್ನು ಒಪ್ಪಿಕೊಂಡಿದ್ದರೆ ಸರ್ಕಾರಕ್ಕೆ ಗೌರವ ಬರುತ್ತದೆ ಎಂದು ನಾನು ಹೇಳುತ್ತಿದ್ದೇನೆ. ಸರ್ಕಾರಕ್ಕೆ ಮತ್ತಷ್ಟೂ ಹೆಚ್ಚಿನ ಗೌರವ ಸಿಗುತ್ತದೆ.

**(ಗೊಂದಲ)**

**ಶ್ರೀ ಸಾ.ರಾ.ಮಹೇಶ್(ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು):-** ಮಾನ್ಯ ಸಭಾಪತಿಯವರೆ, ಸುವರ್ಣ ವಿಧಾನಸೌಧದಲ್ಲಿ ಈ ಹಿಂದೆ ಯಾವತ್ತೂ ಇಷ್ಟೊಂದು ಚೆನ್ನಾಗಿ ಅಧಿವೇಶನ ನಡೆದಿರಲಿಲ್ಲ. ಈ ಕೀರ್ತಿ ಸರ್ಕಾರಕ್ಕೆ ಬರಬಾರದು ಎಂದು ವಿರೋಧ ಪಕ್ಷದ ಸದಸ್ಯರು ಗೊಂದಲ ಸೃಷ್ಟಿ ಮಾಡುವ ಪ್ರಯತ್ನ ಮಾಡುತ್ತಿದ್ದಾರೆ. ಸಭಾಪತಿಯವರು ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಳ್ಳುವುದೆಂದು ಆಗಲೇ ತೀರ್ಮಾನ ಮಾಡಿದ್ದಾರೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಸರ್ಕಾರ ಸಮರ್ಪಕವಾದ ಉತ್ತರವನ್ನು ನೀಡಬೇಕು.

**(ಗೊಂದಲ)**

**ಡಾ|| ವೈ.ಎ.ನಾರಾಯಣಸ್ವಾಮಿ(ವಿರೋಧ ಪಕ್ಷದ ಉಪನಾಯಕರು):-** ಮಾನ್ಯ ಸಭಾಪತಿಯವರೆ, ಈ ಸದನವು ಕೇವಲ ಆಡಳಿತ ಪಕ್ಷದವರಿಗೆ ಮಾತ್ರವೇ ಅಲ್ಲದೇ, ಎಲ್ಲರಿಗೋಸ್ಕರವಾಗಿಯೇ ಇದೆ. ಈ ಸದನದಲ್ಲಿ ಉತ್ತರ ಕರ್ನಾಟಕದ ವಿಷಯಗಳನ್ನು ಚರ್ಚೆ ಮಾಡುವುದಕ್ಕೆ ಅವಕಾಶ ನೀಡಬೇಕೆಂದು ನಾವು ಕೇಳುತ್ತಿದ್ದೇವೆ.

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**ಶ್ರೀ ಸಾ.ರಾ.ಮಹೇಶ್:-** ಮಾನ್ಯ ಸಭಾಪತಿಯವರೆ, ಸದನದ ಕಾರ್ಯಕಲಾಪವನ್ನು ಪ್ರಿಂಟ್ ಮಾಡಿದ ಮೇಲೆ ಅದರಂತೆ ಕಲಾಪವನ್ನು ನಡೆಸಬೇಕೋ ಅಥವಾ ಯಾವುದರನ್ವಯ ಸದನದ ಕಲಾಪಗಳನ್ನು ಮಾಡಬೇಕು? ವಿರೋಧ ಪಕ್ಷದ ಒತ್ತಾಯಕ್ಕೆ ಮಣಿದು ಸದನದ ಕಾರ್ಯಕಲಾಪಗಳನ್ನು ನಡೆಸಬೇಕೇ?

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಕಾಯಿದೆ-ಕಾನೂನುಗಳೆಲ್ಲವೂ ನಮಗೆ ತಿಳಿದಿದೆ. ಅವುಗಳೆಲ್ಲವೂ ನಮಗೆ ಗೊತ್ತಿಲ್ಲವೆಂದು ನಾವು ಹೇಳಿಲ್ಲ. ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಲು ನಾವು ವಿಶೇಷ ಪ್ರಸ್ತಾವನೆಯನ್ನು ನೀಡಿದ್ದೇವೆ. ಹೀಗಾಗಿ ನಮಗೆ ಮುಕ್ತ ಅವಕಾಶವನ್ನು ನೀಡಿ. ಅದಕ್ಕೆ ಸರ್ಕಾರ ಉತ್ತರವನ್ನೂ ಸಹ ನೀಡಲಿ. ಕೊನೆಯಲ್ಲಿ ಪ್ರಶ್ನೋತ್ತರವನ್ನು ತೆಗೆದುಕೊಳ್ಳೋಣ. ಸಂಪ್ರದಾಯ ಹಾಗೂ ಕಾನೂನು ಹೆಸರಿನಲ್ಲಿ ಸರ್ಕಾರ ಏಕೆ ಪ್ರತಿಷ್ಠೆಯನ್ನು ಮಾಡುತ್ತದೆ?

**(ಗೊಂದಲ)**

**ಡಾ|| ಜಯಮಾಲ:-** ಮಾನ್ಯ ಸಭಾಪತಿಯವರೆ, ಮಾನ್ಯ ವಿರೋಧ ಪಕ್ಷದ ನಾಯಕರಲ್ಲಿ ನಾನು ಪ್ರಶ್ನೆಯೊಂದನ್ನು ಕೇಳಲಿಚ್ಛಿಸುತ್ತೇನೆ. ಮಾನ್ಯ ಮುಖ್ಯಮಂತ್ರಿಗಳು ಈ ಸದನದಲ್ಲಿಯೇ ಇರುವುದಾಗಿ ಹಾಗೂ ವಿರೋಧ ಪಕ್ಷದ ಸದಸ್ಯರ ಮಾತುಗಳನ್ನು ಕೇಳುವುದಾಗಿ ಹಾಗೂ ಪ್ರಶ್ನೋತ್ತರವನ್ನು ಮುಗಿಸುವಂತೆ ಹೇಳಿದ್ದಾರೆ. ವಿರೋಧ ಪಕ್ಷದ ನಾಯಕರು ಏಕೆ ಕಾನೂನಿನ ಉಲ್ಲಂಘನೆ ಮಾಡಲು ಹೇಳುತ್ತಿದ್ದಾರೆ?

**(ಗೊಂದಲ)**

**ಡಾ|| ವೈ.ಎ.ನಾರಾಯಣ ಸ್ವಾಮಿ:-** ಮಾನ್ಯ ಸಭಾಪತಿಯವರೆ, ಈ ಸದನದಲ್ಲಿ ಪ್ರಶ್ನೋತ್ತರಗಳನ್ನು ಬದಿಗೊತ್ತಿ ಎಷ್ಟೋ ವಿಚಾರಗಳ ಬಗ್ಗೆ ಚರ್ಚೆಯನ್ನು ಮಾಡಿರುವ ಸಂಗತಿಗಳಿವೆ. ಹೀಗಾಗಿ ಚರ್ಚೆಯನ್ನು ಪ್ರಾರಂಭ ಮಾಡಿ. ಪ್ರಶ್ನೋತ್ತರವನ್ನು ಈ ದಿನದ ಸಂಜೆಯ ವೇಳೆಯಲ್ಲಿ ತೆಗೆದುಕೊಳ್ಳಿ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ನಾವು ಇಲ್ಲಿ ಪ್ರತಿಷ್ಠೆ ಮಾಡುತ್ತಿಲ್ಲ.

(ಗೊಂದಲ)

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರ ಆದೇಶಕ್ಕೆ ವಿರೋಧ ಪಕ್ಷದ ಸದಸ್ಯರು ಗೌರವ ನೀಡುತ್ತಿಲ್ಲ.

(ಗೊಂದಲ)

**ಸಭಾಪತಿಯವರು:-** ಎರಡು ವಿಷಯಗಳ ಪೈಕಿ ಒಂದರ ಬಗ್ಗೆ ತೀರ್ಮಾನಕ್ಕೆ ಬರೋಣ. ನಾನು ಹೇಳುತ್ತಿರುವುದನ್ನು ಮೊದಲು ಕೇಳಿ.

**ಡಾ॥ ಜಯಮಾಲ:-** ಮಾನ್ಯ ಸಭಾಪತಿಯವರೆ, ನಾವು ಮಾಡಿರುವ ಕಾನೂನನ್ನು ನಾವೇ ಮುರಿಯುವುದು ಎಷ್ಟು ಸರಿ?

**ಸಭಾಪತಿಯವರು:-** ಈಗ ಸದನವನ್ನು ನಡೆಸಬೇಕೇ ಅಥವಾ ಬೇಡವೇ? ಸದನವನ್ನು ನಡೆಸಬೇಕಾದರೆ, ಸದನ ನಡೆಯುವಂತೆ ಇಲ್ಲಿನ ಸದಸ್ಯರುಗಳು ನಡೆದುಕೊಳ್ಳಬೇಕು. ಒಂದು ವೇಳೆ ಸದನ ನಡೆಯಬೇಕಾದರೆ, ಅದು ವಿರೋಧ ಪಕ್ಷದವರು ಹೇಳಿದಂತೆ ನಡೆಯಬೇಕೆಂಬುದು ಸರಿ ಅಲ್ಲ.

(ಗೊಂದಲ)

**ಡಾ॥ ವೈ.ಎ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ಈ ಸದನ ನಡೆಯಬೇಕು. ಉತ್ತರ ಕರ್ನಾಟಕ ವಿಷಯಗಳ ಬಗ್ಗೆ ಚರ್ಚೆಯಾಗಬೇಕು. ಇದಕ್ಕೆ ಸರ್ಕಾರ ಉತ್ತರ ನೀಡಬೇಕು.

**ಸಭಾಪತಿಯವರು:-** ವಿರೋಧ ಪಕ್ಷದ ನಾಯಕರೆ, ಈಗ ಸದನ ನಡೆಯಬೇಕೆಂದು ಹೇಳುವುದಾದರೆ, ನೀವು ಹೇಳಿದ ರೀತಿಯಲ್ಲಿಯೇ ನಡೆಯಬೇಕೆನ್ನುವುದು ಸಮಂಜಸವಾದುದಲ್ಲ.

**ಡಾ॥ ವೈ.ಎ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ಆ ರೀತಿಯಾಗಿ ಕೇಳುವುದಕ್ಕೆ ನಮಗೆ ಹಕ್ಕು ಇದೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಸಭಾಪತಿಯವರು:-** ನಿಮಗೆ ಯಾವ ರೀತಿಯಾದ ಹಕ್ಕು ಇದೆ? **(ಗೊಂದಲ)** ನಿಯಮಾವಳಿಗಳನ್ನು ಮೀರಿ ಸದನದ ಕಾರ್ಯಕಲಾಪಗಳನ್ನು ನಡೆಸುವಂತಿಲ್ಲ. ಪ್ರಶ್ನೋತ್ತರ ಅವಧಿ ಪೂರ್ಣಗೊಂಡ ನಂತರ ವಿರೋಧ ಪಕ್ಷದ ಸದಸ್ಯರುಗಳಿಗೆ ಒಂದು ಗಂಟೆ ಅವಧಿಯಷ್ಟು ಚರ್ಚೆಗೆ ಅವಕಾಶವನ್ನು ಕೊಡುತ್ತೇನೆ.

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ಸದನ ನಡೆಯುವುದು ವಿರೋಧ ಪಕ್ಷದವರಿಗೆ ಬೇಕಾಗಿಲ್ಲ. ಅವರು ಹೇಳಿದಂತೆಯೇ ಸದನ ನಡೆಯಬೇಕು.

**ಶ್ರೀ ಶರಣಪ್ಪ ಮಟ್ಟೂರ:-** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದ ಸದಸ್ಯರ ನಡವಳಿಕೆಯು ನನಗೆ ಅರ್ಥವಾಗುತ್ತಿಲ್ಲ.

**(ಗೊಂದಲ)**

**ಸಭಾಪತಿಯವರು:-** ಇದು ಮನೆಯೋ ಅಥವಾ ಸದನವೋ? ಸದನವು ನಿಯಮಾವಳಿಗಳ ಪ್ರಕಾರ ನಡೆಯಬೇಕು.

**(ಗೊಂದಲ)**

**ಶ್ರೀ ಟಿ.ಎ.ಶರವಣ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರಕ್ಕೆ ಅವಕಾಶ ಮಾಡಿಕೊಡಿ.

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ನಿಮ್ಮ ಪೀಠವನ್ನು ವಿರೊಧ ಪಕ್ಷದ ಸದಸ್ಯರುಗಳು ಗೌರವಿಸುವುದಿಲ್ಲ.

**(ಗೊಂದಲ)**

**ಶ್ರೀ ಟಿ.ಎ.ಶರವಣ:-** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದ ಸದಸ್ಯರಿಗೆ ಸದನ ನಡೆಯುವುದು ಇಷ್ಟವಿಲ್ಲ. ಪ್ರಶ್ನೋತ್ತರಕ್ಕೆ ಅವಕಾಶ ಮಾಡಿಕೊಡಿ.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕೆ.ಸಿ.ಕೊಂಡಯ್ಯ:-** ಮಾನ್ಯ ಸಭಾಪತಿಯವರೆ, ಪ್ರಶ್ನೆಯನ್ನು ಕೇಳುವುದು ನಮ್ಮ ಹಕ್ಕು. ಒಂದು ಗಂಟೆಯ ನಂತರ ಚರ್ಚೆಯನ್ನು ತೆಗೆದುಕೊಂಡರೆ ಏನೂ ಆಗುವುದಿಲ್ಲ. ನಾವು ಕೇಳಿರುವ ಪ್ರಶ್ನೆಗೆ ಕಷ್ಟಪಟ್ಟು ಸಿದ್ಧತೆಯನ್ನು ಮಾಡಿಕೊಂಡು ಬಂದಿರುತ್ತೇವೆ. ಹೀಗಾಗಿ ಮೊದಲು ಪ್ರಶ್ನೋತ್ತರವನ್ನು ತೆಗೆದುಕೊಳ್ಳೋಣ.

**ಸಭಾಪತಿಯವರು:-** ಮಾನ್ಯ ಮುಖ್ಯಮಂತ್ರಿಗಳು ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ನಡೆಯುವ ಚರ್ಚೆಗೆ ಉತ್ತರ ನೀಡಲು ಸದನಕ್ಕೆ ಬಂದಿದ್ದಾರೆ. ಹೀಗಾಗಿ ಪ್ರಶ್ನೋತ್ತರ ಕಲಾಪವು ಪೂರ್ಣಗೊಳ್ಳಲಿ.

**ಶ್ರೀ ಕೆ.ಸಿ.ಕೊಂಡಯ್ಯ:-** ಮಾನ್ಯ ಸಭಾಪತಿಯವರೆ, ಮಾನ್ಯ ಮುಖ್ಯಮಂತ್ರಿಗಳು ಬಹಳ ಸ್ಪಷ್ಟವಾಗಿ ಹೇಳಿದ್ದಾರೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಸರ್ಕಾರ ಪ್ರತಿಷ್ಠೆ ಮಾಡುವುದು ಬೇಡವೆಂದು ನಾನು ಹೇಳುತ್ತೇನೆ. ಉತ್ತರ ಕರ್ನಾಟಕದ ಸಮಸ್ಯೆಗಳ ಗಂಭೀರತೆಯನ್ನು ಸರ್ಕಾರ ಅರ್ಥಮಾಡಿಕೊಳ್ಳಲಿ. ಹೀಗಾಗಿ ಈ ಚರ್ಚೆಯನ್ನು ಮೊದಲು ಕೈಗೆತ್ತಿಕೊಳ್ಳಬೇಕೆಂದು ನಾನು ಆಗ್ರಹಿಸುತ್ತೇನೆ.

**(ಗೊಂದಲ)**

**ಡಾ॥ ಜಯಮಾಲ:-** ಮಾನ್ಯ ಸಭಾಪತಿಯವರೆ, ನಾವು ಯಾವುದನ್ನೂ ಸಹ ಪ್ರತಿಷ್ಠೆಯಾಗಿ ತೆಗೆದುಕೊಂಡಿಲ್ಲ. ಕಾನೂನಿನ ಪರಿಪಾಲನೆಯನ್ನು ಮಾಡುತ್ತಿದ್ದೇವೆ ಅಷ್ಟೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಕುಡಿಯಲಿಕ್ಕೂ ಸಹ ನೀರಿಲ್ಲದೇ ಈ ಭಾಗದ ಬಡ ಜನರು ಸಂಕಟವನ್ನು ಅನುಭವಿಸುತ್ತಿದ್ದಾರೆ. ಅವರುಗಳು ಪ್ರತಿಭಟನೆಯನ್ನು ಮಾಡುತ್ತಿದ್ದಾರೆ. ಅವರಿಗಿಂತ ಸರ್ಕಾರಕ್ಕೆ ಕಾನೂನು ಹೆಚ್ಚಾಯಿತೇ?

**(ಗೊಂದಲ)**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಡಾ|| ಜಯಮಾಲ:-** ಮಾನ್ಯ ಸಭಾಪತಿಯವರೆ, ಒಂದು ಗಂಟೆಯೊಳಗೆ ಪ್ರಶ್ನೋತ್ತರ ಕಲಾಪವು ಪೂರ್ಣಗೊಳ್ಳುತ್ತದೆ. ನಂತರದಲ್ಲಿ ಈ ಬಗ್ಗೆ ಚರ್ಚೆಯನ್ನು ತೆಗೆದುಕೊಳ್ಳೋಣ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಈ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ. ಇಡೀ ಉತ್ತರ ಕರ್ನಾಟಕವು ಅತಂತ್ರ ಸ್ಥಿತಿಯಲ್ಲಿದೆ.

**(ಗೊಂದಲ)**

**ಡಾ|| ಜಯಮಾಲ:-** ಮಾನ್ಯ ಸಭಾಪತಿಯವರೆ, ಮಾನ್ಯ ಮುಖ್ಯಮಂತ್ರಿಗಳು ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳನ್ನು ಕೇಳುವುದಾಗಿ ಹೇಳಿದ್ದಾರೆ.

**(ಗೊಂದಲ)**

**ಶ್ರೀ ಹೆಚ್.ಡಿ.ಕುಮಾರಸ್ವಾಮಿ(ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೆ, ಕುಡಿಯುವ ನೀರಿಗಾಗಿ ದೊಡ್ಡ ಪ್ರಮಾಣದಲ್ಲಿ ಪ್ರತಿಭಟನೆ ನಡೆಯುತ್ತಿರುವುದಾಗಿ ಮಾನ್ಯ ವಿರೋಧ ಪಕ್ಷದ ನಾಯಕರು ಹೇಳಿದರು. ದಯಮಾಡಿ ಅದರ ವಿವರವನ್ನು ಅವರು ನೀಡಲಿ. **(ಗೊಂದಲ)** ನಾನು ಹೇಳುವುದನ್ನು ವಿರೋಧ ಪಕ್ಷದ ಮಾನ್ಯ ಸದಸ್ಯರುಗಳು ಕೇಳಲಿ. ಅವರುಗಳು ನಂತರದಲ್ಲಿ ಮಾತನಾಡಲಿ.

**(ಗೊಂದಲ)**

**ಶ್ರೀ ಸಾ.ರಾ.ಮಹೇಶ್:-** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದ ಸದಸ್ಯರುಗಳು ಮಾನ್ಯ ಮುಖ್ಯಮಂತ್ರಿಗಳಿಗೆ ಅವರ ಮಾತನ್ನು ಪೂರ್ಣಗೊಳಿಸಲು ಅವಕಾಶವನ್ನು ನೀಡಲಿ.

**(ಗೊಂದಲ)**

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ಸಭಾಪತಿಯವರೆ, ಕಳೆದ ಎಂಟು ದಿನಗಳಿಂದ ವಿರೋಧ ಪಕ್ಷದ ಸದಸ್ಯರುಗಳು ಎಲ್ಲಿಗೆ ಹೋಗಿದ್ದರು? ನಮಗೂ ಸಹ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಕಳಕಳಿ ಇದೆ. ಹೀಗಾಗಿ ಅವರುಗಳು ಕುಳಿತುಕೊಳ್ಳಲಿ.

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(ಗೊಂದಲ)

**ಡಾ॥ ತೇಜಸ್ವಿನಿ ಗೌಡ:–** ಮಾನ್ಯ ಸಭಾಪತಿಯವರೆ, ಮಾನ್ಯ ಮರಿತಿಬ್ಬೇಗೌಡರು ಸದನದಲ್ಲಿ ಯಾವ ರೀತಿಯ ಭಾಷೆಯನ್ನು ಬಳಸುತ್ತಿದ್ದಾರೆ? ಅವರು ನಮ್ಮ ಪಕ್ಷದ ಸದಸ್ಯರುಗಳಿಗೆ (ಏರುಧ್ವನಿಯಲ್ಲಿ) ಧಮ್ಕಿ ಹಾಕುವ ರೀತಿಯಲ್ಲಿ ಮಾತನಾಡುತ್ತಿದ್ದಾರೆ.

(ಗೊಂದಲ)

**ಡಾ॥ ವೈ.ಎ.ನಾರಾಯಣಸ್ವಾಮಿ:–** ಮಾನ್ಯ ಸಭಾಪತಿಯವರೆ, ಇದು ದುರಹಂಕಾರದ ಪರಮಾವಧಿಯಾಗಿದೆ.

(ಗೊಂದಲ)

**ಶ್ರೀ ಮರಿತಿಬ್ಬೇಗೌಡ:–** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದ ಮಾನ್ಯ ಸದಸ್ಯರುಗಳು ಉತ್ತರ ಕರ್ನಾಟಕದ ಸಮಸ್ಯೆಗಳ ಬಗೆಗಿನ ಚರ್ಚೆಗೆ ಬಂದಿಲ್ಲ.

(ಗೊಂದಲ)

**ಡಾ॥ ತೇಜಸ್ವಿನಿ ಗೌಡ:–** ಮಾನ್ಯ ಸಭಾಪತಿಯವರೆ, ಮಾನ್ಯ ಸದಸ್ಯರು ಬಳಸುತ್ತಿರುವ ಧಮ್ಕಿ ಭಾಷೆ ಸರಿಯಲ್ಲ.

(ಗೊಂದಲ)

**ಶ್ರೀ ಮರಿತಿಬ್ಬೇಗೌಡ:–** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದ ಮಾನ್ಯ ಸದಸ್ಯರುಗಳು ಪೀಠಕ್ಕೆ ಗೌರವ ಕೊಡುತ್ತಿಲ್ಲ. ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಕಳಕಳಿಯುಳ್ಳವರು ಈ ರೀತಿಯ ವರ್ತನೆಯನ್ನು ತೋರುತ್ತಾರೆಯೇ?

**ಡಾ॥ ತೇಜಸ್ವಿನಿ ಗೌಡ:–** ಮಾನ್ಯ ಸಭಾಪತಿಯವರೆ, ಪ್ರಸ್ತುತ ಮಾನ್ಯ ಮುಖ್ಯಮಂತ್ರಿಗಳು ಸದನದಲ್ಲಿದ್ದಾರೆ. ವಿರೋಧ ಪಕ್ಷದ ನಾಯಕರು ಅವರನ್ನು ಕೇಳುತ್ತಿದ್ದಾರೆ. ಆದ್ದರಿಂದ ಬೇರೆಯವರು ಅವರಿಗೆ ಮಾತನಾಡಲು ಅವಕಾಶ ಮಾಡಿಕೊಟ್ಟು ಕುಳಿತುಕೊಳ್ಳುವಂತೆ ದಯಮಾಡಿ ಪೀಠದಿಂದ ಆದೇಶ ಮಾಡಬೇಕಾಗುತ್ತದೆ.

ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(ಗೊಂದಲ)

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದ ನಾಯಕರು ಕೇಳುತ್ತಾರೆ. ಹೀಗಾಗಿ ಪ್ರತಿಪಕ್ಷದ ಎಲ್ಲಾ ಸದಸ್ಯರುಗಳು ಏಕೆ ಮಾತನಾಡಬೇಕು?

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೆ, 'ದೇವರು ವರ ನೀಡಿದರೂ, ಪೂಜಾರಿ ವರ ನೀಡಲಿಲ್ಲ' ಎಂಬಂತಾಗಿದೆ ಇಲ್ಲಿನ ಪರಿಸ್ಥಿತಿ.

**ಶ್ರೀ ಹೆಚ್.ಡಿ.ಕುಮಾರಸ್ವಾಮಿ:-** ಮಾನ್ಯ ಸಭಾಪತಿಯವರೆ, ಮಾನ್ಯ ವಿರೋಧ ಪಕ್ಷದ ನಾಯಕರ ಗಮನಕ್ಕೆ ತರುವುದೇನೆಂದರೆ, ರಾಜ್ಯದ ಹಲವಾರು ಭಾಗಗಳಿಂದ ಪ್ರತಿನಿತ್ಯ ಸಮಸ್ಯೆಗಳನ್ನು ಹೊತ್ತು ಪ್ರತಿಭಟನೆ ನಡೆಸಲು ಬಂದಿರುವ ಸುಮಾರು 12-13 ಸಂಘ ಸಂಸ್ಥೆಗಳನ್ನು ನಾನೇ ಖುದ್ದಾಗಿ ಅವರುಗಳನ್ನು ಕರೆದು, ಅವರುಗಳಿಂದ ಮನವಿಗಳನ್ನು ಸ್ವೀಕರಿಸುತ್ತಿದ್ದೇನೆ. ಅವರುಗಳು ನನ್ನ ಗಮನಕ್ಕೆ ತಂದಿರುವ ವಿಷಯಗಳನ್ನು ಪರಿಶೀಲಿಸುತ್ತಿದ್ದೇನೆ ಎಂದು ಹೇಳಿ, ಎಲ್ಲಾ ಸಂಘ ಸಂಸ್ಥೆಗಳ ಜೊತೆಗೆ ಚರ್ಚೆಯನ್ನು ಮಾಡಿದ್ದೇನೆ. ಬೆಳಗಾವಿಯಲ್ಲಿ ಅಧಿವೇಶನ ಪ್ರಾರಂಭವಾದಾಗಿನಿಂದ ಹಲವಾರು ಸಂಘ ಸಂಸ್ಥೆಗಳು ಪ್ರತಿದಿನ ತಮ್ಮ ಮನವಿಗಳನ್ನು ಸಲ್ಲಿಸುತ್ತಿವೆ ಮತ್ತು ಸುವರ್ಣ ವಿಧಾನಸೌಧದ ಬಳಿ ಪ್ರತಿಭಟನೆಯನ್ನೂ ಸಹ ನಡೆಸುತ್ತಿವೆ. ಇದು ಸರ್ವೇ ಸಾಮಾನ್ಯವಾದ ವಿಚಾರವಾಗಿದೆ. ಹೋಲಿಕೆ ಮಾಡಿದರೆ, ಹಿಂದಿನ ಬಾರಿ ಇದ್ದಂತಹ ದೊಡ್ಡ ಮಟ್ಟದ ಪ್ರತಿಭಟನೆಗಳು ನಡೆದಿಲ್ಲ. ಆದರೆ ಈ ಬಾರಿ ಸಣ್ಣ-ಪುಟ್ಟ ಸಮಸ್ಯೆಗಳಿಗೆ ಪರಿಹಾರ ಕೇಳಿಕೊಂಡು ಸಂಘ ಸಂಸ್ಥೆಗಳು ಬಂದಿವೆ. ಅಂತಹ ಸಂಘ ಸಂಸ್ಥೆಗಳಿಗೆ ನಾನು ಪ್ರತಿ ದಿನ ಅರ್ಧ ಗಂಟೆಗಳ ಅವಕಾಶವನ್ನು ನೀಡಿ, ಅವರುಗಳನ್ನೆಲ್ಲಾ ಕರೆಸಿ, ಅವರಿಗಿರುವ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಿದ್ದೇನೆ ಹಾಗೂ ಅವರ ಸಮಸ್ಯೆಗಳನ್ನೆಲ್ಲಾ ಆಲಿಸಿದ್ದೇನೆ. ಮಾನ್ಯ ವಿರೋಧ ಪಕ್ಷದ ನಾಯಕರು ಈಗ ಸದನದಲ್ಲಿ ಕುಡಿಯುವ ನೀರಿಗಾಗಿ ದೊಡ್ಡ ಮಟ್ಟದಲ್ಲಿ ಹೋರಾಟ ನಡೆಯುತ್ತಿದೆ ಎಂಬುದಾಗಿ ಹೇಳಿದ್ದಾರೆ. ಬರಗಾಲದ ವಿಷಯಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಸದನದಲ್ಲಿ ಚರ್ಚೆಯನ್ನು ಮಾಡಲಾಗಿದೆ. ಇದಕ್ಕೆ ಸರ್ಕಾರದಿಂದ ಮಾನ್ಯ ಕಂದಾಯ ಮಂತ್ರಿಗಳು ಸುದೀರ್ಘವಾದ ಉತ್ತರವನ್ನೂ ಸಹ ನೀಡಿದ್ದಾರೆ. ನೀರಾವರಿ ವಿಷಯಕ್ಕೆ ಸಂಬಂಧಪಟ್ಟಂತೆ ಚರ್ಚೆಯನ್ನು ಮಾಡಬೇಕು.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರವನ್ನು ಪ್ರಾರಂಭಿಸುವ ಬಗ್ಗೆ ತಾವು ಈಗಾಗಲೇ ಒಂದು ಬಾರಿ ರೂಲಿಂಗ್‌ನ್ನು ನೀಡಿದ್ದೀರಿ. ಒಂದು ಬಾರಿ ತಾವು ನೀಡಿದ ರೂಲಿಂಗ್‌ನ್ನು ಪುನಃ ಅವರೇ ಹಿಂಪಡೆಯುವಂತೆ ಮಾನ್ಯ ವಿರೋಧ ಪಕ್ಷದ ಸದಸ್ಯರುಗಳು ತಮ್ಮ ಮೇಲೆ ಒತ್ತಡ ತರುತ್ತಿರುವುದು ನಡವಳಿಕೆಯ ನಿಯಮಾವಳಿಗಳನ್ವಯ ಅದು ಸರಿಯೇ ಎಂದು ಮಾನ್ಯ ವಿರೋಧ ಪಕ್ಷದ ಸದಸ್ಯರುಗಳು ಯೋಚನೆ ಮಾಡಬೇಕು. ಪ್ರಶ್ನೋತ್ತರ ಕಲಾಪವನ್ನು ಒಂದು ಗಂಟೆಯ ಅವಧಿಯೊಳಗೆ ಪೂರ್ಣಗೊಳಿಸಿದ ನಂತರ ನೀರಾವರಿ, ಉತ್ತರ ಕರ್ನಾಟಕ ಸಮಸ್ಯೆಗಳು, ಡಾ॥ ನಂಜುಂಡಪ್ಪ ವರದಿ ಅಥವಾ ಇನ್ಯಾವುದೇ ವಿಷಯಗಳ ಬಗ್ಗೆ ವಿರೋಧ ಪಕ್ಷದ ಸದಸ್ಯರುಗಳು ಚರ್ಚೆಯನ್ನು ಮಾಡಲಿ. ಅದರ ಬಗ್ಗೆ ಉತ್ತರ ನೀಡಲು ಸರ್ಕಾರವು ಸಮರ್ಥವಾಗಿದೆ. ದಯಮಾಡಿ ಮಾನ್ಯ ಸಭಾಪತಿಯವರ ರೂಲಿಂಗ್‌ಗೆ ಗೌರವ ನೀಡಿ, ಸದನ ನಡೆಯಲು ಸಹಕಾರ ನೀಡಬೇಕೆಂದು ಮಾನ್ಯ ವಿರೋಧ ಪಕ್ಷದ ಸದಸ್ಯರಲ್ಲಿ ಮನವಿ ಮಾಡಿಕೊಳ್ಳುತ್ತೇನೆ.

**ಸಭಾಪತಿಯವರು:-** ಮಾನ್ಯ ಕೊಂಡಯ್ಯನವರೆ, ನಿಮ್ಮ ಪ್ರಶ್ನೆಯನ್ನು ಕೇಳಿ.

**ಶ್ರೀ ಕೆ.ಸಿ.ಕೊಂಡಯ್ಯ:-** ಮಾನ್ಯ ಸಭಾಪತಿಯವರೆ, ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 1125 ನ್ನು ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರಲ್ಲಿ ಕೇಳಬಯಸುತ್ತೇನೆ.

**ಡಾ॥ ವೈ.ಎ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರಕ್ಕೆ ಅವಕಾಶವಿಲ್ಲ.

**ಡಾ॥ ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ಮಾನ್ಯ ಸದಸ್ಯರು ಕೇಳಿರುವ ಪ್ರಶ್ನೆಗೆ ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಪರವಾಗಿ ಉತ್ತರವನ್ನು ಒದಗಿಸಲಾಗಿದೆ.

**(ಗೊಂದಲ)**

**ಡಾ॥ ಜಯಮಾಲ(ಸಭಾನಾಯಕರು):-** ಮಾನ್ಯ ವಿರೋಧ ಪಕ್ಷದ ನಾಯಕರೆ, ಒಂದು ಗಂಟೆಗಳ ಕಾಲ ಪ್ರಶ್ನೋತ್ತರವನ್ನು ನಡೆಸಲು ಅವಕಾಶ ಕೊಡಿ.

**(ಗೊಂದಲ)**

**ಡಾ॥ ವೈ.ಎ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ತಾವು ರೂಲಿಂಗ್‌ನ್ನು ನೀಡಿಲ್ಲ.

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರನ್ನು ಒಳಗೊಂಡಂತೆ ಭಾರತೀಯ ಜನತಾ ಪಕ್ಷದ ಎಲ್ಲಾ ಸದಸ್ಯರುಗಳು ಘೋಷಣೆಗಳನ್ನು ಕೂಗುತ್ತಾ, ಸದನದ ಬಾವಿಗೆ ಬಂದು ಧರಣಿ ನಿರತರಾದರು)**

**(ಮುಂದುವರೆದಿದೆ...)**

*(599) 20-12-2018 (12.20) ಸಿಎಸ್/ಆರ್‌ಎನ್*

**(ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ವಿರೋಧ ಪಕ್ಷದ ಸದಸ್ಯರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು.)**

**ಶ್ರೀ ಕೆ.ಸಿ.ಕೊಂಡಯ್ಯ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-** ಮಾನ್ಯ ಸಭಾಪತಿಗಳೇ, ವಿರೋಧ ಪಕ್ಷಗಳವರಿಗೆ ಸಮಗ್ರವಾಗಿ ಚರ್ಚೆಯೂ ಬೇಕಿಲ್ಲ, ಉತ್ತರವೂ ಬೇಕಾಗಿಲ್ಲ. ಸದನವನ್ನು sine die ಮಾಡಿಬಿಡಿ.

(ಗೊಂದಲ)

**ಡಾ||ಜಯಮಾಲ(ಸಭಾನಾಯಕರು):-** ಸದನ ನಡೆಸಲಿಕ್ಕೆ ಅವಕಾಶ ಮಾಡಿಕೊಡಬೇಕೆಂದು ಎಲ್ಲರಲ್ಲಿ ಕೇಳಿಕೊಳ್ಳುತ್ತೇನೆ. ಇಲ್ಲಿ ರಾಜಕೀಯವನ್ನು ಮಾಡಬಾರದೆಂದು ಮಾನ್ಯ ಸಭಾಪತಿಯವರು ಹೇಳಬೇಕು.

(ಗೊಂದಲ)

**ಶ್ರೀ ಸಾ.ರಾ.ಮಹೇಶ್(ಪ್ರವಾಸೋದ್ಯಮ ಹಾಗೂ ರೇಷ್ಮೆ ಸಚಿವರು):-** ಮಾನ್ಯ ಸಭಾಪತಿಗಳೆ, ವಿರೋಧ ಪಕ್ಷಗಳಿಗೆ ಗಲಭೆ ಮಾಡುವುದೇ ಬೇಕಾಗಿತ್ತು, ಒಳ್ಳೆಯ ಕೆಲಸ ಮಾಡುವುದಕ್ಕೆ ಅಲ್ಲ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"**

(ಗೊಂದಲ)

**ಸಭಾಪತಿಯವರು:-** ಈಗ ಸದನವನ್ನು ಮಧ್ಯಾಹ್ನ 12 ಗಂಟೆ 45 ನಿಮಿಷಗಳವರೆಗೆ ಮುಂದೂಡುತ್ತಿದ್ದೇನೆ.

**(ಅಪರಾಹ್ನ 12 ಗಂಟೆ 22 ನಿಮಿಷದಿಂದ ಅಪರಾಹ್ನ 12 ಗಂಟೆ 45 ನಿಮಿಷಗಳವರೆಗೆ ಮುಂದೂಡಲ್ಪಟ್ಟಿದ್ದ ಸದನವು ಪುನಃ ಮಧ್ಯಾಹ್ನ 12 ಗಂಟೆ 50 ನಿಮಿಷಗಳಿಗೆ ಸಮಾವೇಶಗೊಂಡಿತು.)**

**(ಮಾನ್ಯ ಸಭಾಪತಿಯವರು ಪೀಠವನ್ನು ಅಲಂಕರಿಸಿದರು.)**

**(600) 20-12-2018 (12-50) ಹೆಚ್‌ವಿ:ವಿಕೆ**

**(ಸದನ ಪ್ರಾರಂಭವಾಗುತ್ತಿದ್ದಂತೆ ಮಾನ್ಯ ವಿರೋಧ ಪಕ್ಷದ ಎಲ್ಲ ಸದಸ್ಯರುಗಳು ಸದನದ ಬಾವಿಗಿಳಿದು ಧರಣಿಯಲ್ಲಿ ನಿರತರಾಗಿದ್ದರು.)**

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ:-** ಸನ್ಮಾನ್ಯ ಸಭಾಪತಿಯವರೆ, ಅವರೆಲ್ಲರೂ ನೀರಿಲ್ಲದ ಬಾವಿಗಿಳಿದಿದ್ದಾರೆ. ಉತ್ತರ ಕರ್ನಾಟಕ ಭಾಗದ ಸಮಸ್ಯೆಯ ಬಗ್ಗೆ ಅವರಿಗೆ ಏನೇನೂ ಕಾಳಜಿ ಇಲ್ಲ, ಆಲೋಚನೆಯೂ ಇಲ್ಲ.

**ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ಸದಸ್ಯರೆಲ್ಲರೂ ತಮ್ಮ ತಮ್ಮ ಸ್ಥಾನಗಳಿಗೆ ಮರಳಿದರೆ, ಸದನವನ್ನು ನಡೆಸುವುದಕ್ಕೆ ಸಾಧ್ಯವಾಗುತ್ತದೆ. ಇಲ್ಲದಿದ್ದರೆ ಸದನವನ್ನು ಕರೆದು, ಯಾವುದೇ ವಿಚಾರಗಳ ಮೇಲೆ ಚರ್ಚೆ ನಡೆಯುವುದಕ್ಕೆ ಅವಕಾಶವನ್ನು ಕೊಡದೇ ಹೋದರೆ, ಏನು ಪ್ರಯೋಜನವಾಗುತ್ತದೆ? ಇದರ ಬಗ್ಗೆ ಮಾನ್ಯ ವಿರೋಧ ಪಕ್ಷದ ನಾಯಕರು ಮರು ಚಿಂತನೆ ಮಾಡಬೇಕಾಗಿದೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಧರಣಿ ನಡೆಸುತ್ತಿರುವವರು ಧರಣಿಯನ್ನು ಕೈಬಿಟ್ಟು ತಮ್ಮತಮ್ಮ ಸ್ಥಾನಗಳಿಗೆ ಬಂದು ಕುಳಿತುಕೊಂಡರೆ, ಪ್ರಶ್ನೋತ್ತರ ಕಲಾಪವನ್ನು ತೆಗೆದುಕೊಳ್ಳೋಣ. ನಂತರ ನೀವು ಪ್ರಸ್ತಾಪ ಮಾಡಬಯಸುತ್ತಿರುವ ವಿಚಾರಕ್ಕೆ ನಾನು ಅವಕಾಶ ಮಾಡಿಕೊಡುತ್ತೇನೆ.

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರು ತಮ್ಮ ಸ್ಥಾನಕ್ಕೆ ಮರಳಿದರು.)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಸನ್ಮಾನ್ಯ ಸಭಾಪತಿಯವರೆ, ನಾನು ಪ್ರಾರಂಭದಲ್ಲಿಯೇ ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಬೇಕೆನ್ನುವುದರ ಬಗ್ಗೆ ತಮಗೆ ಮನವರಿಕೆ ಮಾಡಿಕೊಟ್ಟಿದ್ದೇವೆ.

**ಸಭಾಪತಿಯವರು:-** ಕೆಟ್ಟ ಸಂಪ್ರದಾಯವನ್ನು ಪಾಲನೆ ಮಾಡಬೇಕೆನ್ನುವುದನ್ನು ತಾವು ಮನವರಿಕೆ ಮಾಡಿಕೊಟ್ಟಿದ್ದೀರಿ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಸನ್ಮಾನ್ಯ ಸಭಾಪತಿಯವರೆ, ಕೆಟ್ಟ ಸಂಪ್ರದಾಯವನ್ನು ಅನುಸರಿಸಬೇಕೆನ್ನುವುದು ನಮ್ಮ ವಾದವಲ್ಲ, ಇರುವಂತಹ ಸಂಪ್ರದಾಯವನ್ನು ಬದಿಗೊತ್ತಿ ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಮೇಲೆ ಚರ್ಚೆ ಮಾಡುವುದಕ್ಕೆ ಅವಕಾಶ ಕೊಡಿ ಎಂದು ನಾವು ಕೇಳಿಕೊಂಡಿದ್ದೇವೆ.

**ಸಭಾಪತಿಯವರು:-** ಈ ರಾಜ್ಯದ ಇತಿಹಾಸದಲ್ಲಿ ಅನುಸರಿಸದೇ ಇರುವಂತಹ ಸಂಪ್ರದಾಯವನ್ನು ಕೈಗೆತ್ತಿಕೊಳ್ಳಬೇಕೇ?

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಸನ್ಮಾನ್ಯ ಸಭಾಪತಿಯವರೆ, ತಾವು ಹೇಳಿರುವಂತಹ ಶಬ್ದಗಳನ್ನು ಮರು ಪರಿಶೀಲನೆ ಮಾಡಬೇಕು, ಯಾವುದೇ ಸಂದರ್ಭದಲ್ಲಿ ಸಂಪ್ರದಾಯವನ್ನು ಬದಿಗೊತ್ತಿ ವಿಶೇಷ ಪ್ರಕರಣವಾಗಿ ಬೇರೆ ವಿಚಾರವನ್ನು ಮೊದಲಿಗೆ ಕೈಗೆತ್ತಿಕೊಂಡಿರುವ ಉದಾಹರಣೆಗಳು ಇತಿಹಾಸದಲ್ಲಿ ಬಹಳಷ್ಟಿವೆ. ಬೇಕಾದರೆ, ತಾವು ಕಡತ ತೆಗೆದು ನೋಡಬಹುದು. ಕಳೆದ ಅಧಿವೇಶನಕ್ಕೂ ಮೊದಲು ಈ ಸಂಪ್ರದಾಯವನ್ನು ತರಲಾಗಿದೆ. ಪ್ರಶ್ನೋತ್ತರ ಅವಧಿಯನ್ನು ಬದಿಗೊತ್ತಿ ಉತ್ತರ ಕರ್ನಾಟಕ ಭಾಗದ ಗಂಭೀರ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡೋಣ ಎನ್ನುವ ವಿನಂತಿಯನ್ನು ನಾನು ಮಾಡಿದ್ದೆ. ಆದರೆ, ನನ್ನ ವಿನಂತಿ ಹಾಗೆಯೇ ಇದೆ. ತಮ್ಮ ಮೂಲಕ ಸರ್ಕಾರಕ್ಕೆ ಮನವಿ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಮಾಡುತ್ತಿದ್ದೇನೆ ಈ ರೀತಿಯ ಗೊಂದಲಗಳು ಬೇಡ. ಆ ವಿಚಾರದ ಮೇಲಿನ ಚರ್ಚೆಯನ್ನು ಕೈಗೆತ್ತಿಕೊಳ್ಳೋಣ, ಅದಕ್ಕೆ ಸರ್ಕಾರ ಉತ್ತರ ಕೊಡಲಿ ಎನ್ನುವುದು ನನ್ನ ಮನವಿಯಾಗಿದೆ.

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ):-** ಸನ್ಮಾನ್ಯ ಸಭಾಪತಿಯವರೆ, ಬೆಳಗಾವಿಯಲ್ಲಿ ಅಧಿವೇಶನ ಪ್ರಾರಂಭವಾದ ಮೊದಲನೆ ದಿನದಂದು ವಿರೋಧ ಪಕ್ಷದ ಸದಸ್ಯರು ಇದೇ ರೀತಿಯಲ್ಲಿ ವರ್ತಿಸಿದ್ದರು. ಪುನಃ ಈ ದಿನವೂ ಅದೇ ರೀತಿಯಲ್ಲಿ ವರ್ತಿಸುತ್ತಿದ್ದಾರೆ. ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುವುದಕ್ಕೆ ಪ್ರಶ್ನೋತ್ತರ ಅವಧಿಯನ್ನು ಮುಂದಕ್ಕೆ ಹಾಕುವಂತಹ ಅವಶ್ಯಕತೆ ಇಲ್ಲ. ಇಷ್ಟೊತ್ತು ಸಮಯವನ್ನು ಹಾಳು ಮಾಡಿದ್ದಾರೆ. ಸುಮ್ಮನೆ *'show'* ಕೊಡುವುದಕ್ಕೆ ಈ ರೀತಿ ಮಾಡುವುದು ಸರಿಯಲ್ಲ. ಇವರು ಪ್ರಚಾರಕ್ಕಾಗಿ ಇಂತಹ ಕೆಲಸ ಮಾಡುತ್ತಿದ್ದಾರೆ. ಉತ್ತರ ಕರ್ನಾಟಕದ ಬಗ್ಗೆ ಕಾಳಜಿ ಇದ್ದರೆ ತ್ವರಿತವಾಗಿ ಪ್ರಶ್ನೋತ್ತರ ಅವಧಿಯನ್ನು ಮುಗಿಸಿ, ಆ ವಿಚಾರವನ್ನು ಚರ್ಚೆಗೆ ತೆಗೆದುಕೊಳ್ಳಲಿ. ಆಗ ನಾವೂ ಸಹ ಚರ್ಚೆಯಲ್ಲಿ ಭಾಗವಹಿಸುತ್ತೇವೆ. ಇವರಿಗೆ ಉತ್ತರ ಕರ್ನಾಟಕದ ಬಗ್ಗೆ ಕಳಕಳಿ ಅಥವಾ ಪ್ರಾಮಾಣಿಕತೆ ಎನ್ನುವುದು ಇದ್ದರೆ, ರಾತ್ರಿ ಹನ್ನೆರಡು ಗಂಟೆಯಾದರೂ ಸರಿ ಈ ವಿಚಾರದ ಮೇಲೆ ಚರ್ಚೆ ಮಾಡೋಣ. ಅವರು ಎಷ್ಟು ಹೊತ್ತಿನವರೆಗೆ ಮಾತನಾಡುತ್ತಾರೆ, ಅಷ್ಟು ಹೊತ್ತಿನವರೆಗೆ ಮಾತನಾಡುವುದಕ್ಕೆ ತಾವು ಅನುಮತಿಯನ್ನು ನೀಡಿ. ನಾವು ಸಹ ಸದನದಲ್ಲಿ ಅವರೊಂದಿಗೆ ಎಷ್ಟು ಹೊತ್ತು ಬೇಕಾದರೂ ಕುಳಿತುಕೊಳ್ಳುತ್ತೇವೆ. ಸುಮ್ಮನೆ ಉತ್ತರ ಕರ್ನಾಟಕ ಎಂದು ಬಾಯಿಯಲ್ಲಿ ಹೇಳಿ, ಈ ರೀತಿ ಮಾಡಿದರೆ ಹೇಗೆ?

ಸನ್ಮಾನ್ಯ ಸಭಾಪತಿಯವರೆ, 'ದಯಮಾಡಿ ಎಲ್ಲರೂ ತಮ್ಮತಮ್ಮ ಸ್ಥಾನಗಳಿಗೆ ಮರಳಬೇಕು' ಎಂದು ನಾನು ತಮ್ಮ ಮುಖಾಂತರ ಮಾನ್ಯ ವಿರೋಧ ಪಕ್ಷದ ಸದಸ್ಯರಲ್ಲಿ ವಿನಂತಿ ಮಾಡಿಕೊಳ್ಳುತ್ತಿದ್ದೇನೆ. ಮಾನ್ಯ ಆಯನೂರು ಮಂಜುನಾಥ್‌ರವರು ಭಾರತೀಯ ಜನತಾ ಪಕ್ಷದ ಹಿರಿಯ ಸದಸ್ಯರು. ಅವರಿಗಾದರೂ ಈ ಬಗ್ಗೆ ತಿಳಿದಿರಬೇಕು. ಒಂದು ಗಂಟೆಯೊಳಗಾಗಿ ಪ್ರಶ್ನೋತ್ತರ ಅವಧಿಯನ್ನು ಮುಗಿಸಿ, ಉತ್ತರ ಕರ್ನಾಟಕದ ಸಮಸ್ಯೆಯ ಬಗ್ಗೆ ಇವತ್ತು ಮತ್ತು ನಾಳೆ ಚರ್ಚೆ ಮಾಡಬಹುದಲ್ಲವೆ?

**ಶ್ರೀ ಶರಣಪ್ಪ ಮಟ್ಟೂರ:-** ಸನ್ಮಾನ್ಯ ಸಭಾಪತಿಯವರೆ, ಸದನದ ನಿಯಮಗಳನ್ನು ಗಾಳಿಗೆ ತೂರಿ ಸದನ ನಡೆಯದಂತೆ ನೋಡಿಕೊಳ್ಳುವುದು ಅವರ ಉದ್ದೇಶವಾಗಿದೆ. ಬೆಳಿಗ್ಗೆ ಮಾನ್ಯ ಮುಖ್ಯಮಂತ್ರಿಗಳು ಬಹಳ ಚೆನ್ನಾಗಿ ಉತ್ತರವನ್ನು ಕೊಟ್ಟಿದ್ದಾರೆ.

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ:-** ಸನ್ಮಾನ್ಯ ಸಭಾಪತಿಯವರೆ, ನಾನು ಇನ್ನೂ ನನ್ನ ಮಾತುಗಳನ್ನು ಮುಕ್ತಾಯಗೊಳಿಸಿಲ್ಲ. ಸದನದ ಬಾವಿಯಲ್ಲಿ ಧರಣಿ ನಡೆಸುವಾಗ ಮಾನ್ಯ ವಿರೋಧ ಪಕ್ಷದ ನಾಯಕರು ತಮ್ಮ ಸ್ಥಾನಕ್ಕೆ ಮರಳಿ ಬಂದು ಮಾತನಾಡುವುದಕ್ಕೆ ಅವಕಾಶವಿದೆ. ಅವರನ್ನು ಹೊರತುಪಡಿಸಿದರೆ ಬೇರೆ ಸದಸ್ಯರು, ಸದನದ ಬಾವಿಯಿಂದ ತಮ್ಮ ಸ್ಥಾನಗಳಿಗೆ ಬಂದು ಹೋಗಿ ಮಾತನಾಡುವುದಕ್ಕೆ ಇದು ಧರ್ಮಶಾಲೆಯಲ್ಲ. ನಾನು ಇದರ ಬಗ್ಗೆ ಪತ್ರಿಕಾ ಹೇಳಿಕೆಯನ್ನು ಸಹ ಕೊಟ್ಟಿದ್ದೇನೆ. 'ಸದನ ನಡೆಯುವಂತಹ ಸಂದರ್ಭದಲ್ಲಿ "ಧಿಕ್ಕಾರ" ಕೂಗುವಂತಿಲ್ಲ' ಎಂದು ಹೇಳಿದ್ದೇನೆ. ನಮ್ಮನ್ನು ನೋಡಿದ ಜನರು ನಮ್ಮ ಬಗ್ಗೆ ಯಾವ ಭಾವನೆ ತಳೆಯಬಹುದು ಎನ್ನುವುದನ್ನು ಅವರು ಊಹಿಸಿಕೊಳ್ಳಬೇಕು.

ಬೆಳಗಾವಿಯಲ್ಲಿ ಅಧಿವೇಶನ ಪ್ರಾರಂಭವಾದ ಮೊದಲನೆಯ ದಿನವೇ ಇವರು ಗಲಾಟೆ ಪ್ರಾರಂಭ ಮಾಡಿದ್ದರು. ಆ ಸಂದರ್ಭದಲ್ಲಿ ನಾನು ಸಭಾಪೀಠದಲ್ಲಿ ಕುಳಿತುಕೊಂಡಿದ್ದೆ. ಇವರುಗಳು ರೈತರ ಸಮಾವೇಶಕ್ಕೆ ಹೋಗಬೇಕಾಗಿತ್ತು. ಅದಕ್ಕಾಗಿ ಸುಮ್ಮನೆ ಮಾನ್ಯ ವಾಜಪೇಯಿಯವರ ಹೆಸರನ್ನು ಹೇಳಿಕೊಂಡು ಆ ದಿನ ಸದನವನ್ನು ಮುಂದೂಡಿಸಿದರು. ಈ ವಿಚಾರ ನನಗೆ ಮೊದಲೇ ಗೊತ್ತಿತ್ತು. ಅದಕ್ಕೆ ನಾನು ಸದನವನ್ನು ನಡೆಸುತ್ತೇನೆಂದು ಹೇಳಿದ್ದೆ. ಆದರೆ, ಅವರುಗಳು ಬೇಡವೆಂದು ಹೇಳಿದರು. ಬೆಳಗಾವಿಯಲ್ಲಿ ಕೇವಲ 10 ದಿನಗಳ ಕಾಲ ಮಾತ್ರ ಅಧಿವೇಶನ ನಡೆಯುತ್ತದೆ. ಅಧಿವೇಶನಕ್ಕಾಗಿ ಕೋಟಿಕೋಟಿ ರೂಪಾಯಿಗಳನ್ನು ಸರ್ಕಾರ ಖರ್ಚು ಮಾಡುತ್ತಿದೆ. ಇದನ್ನು ಅರಿತುಕೊಂಡು ವಿರೋಧ ಪಕ್ಷದವರು ಸದನ ನಡೆಸುವುದಕ್ಕೆ ಅವಕಾಶವನ್ನು ಕೊಡಬೇಕು. ಅದನ್ನು ಬಿಟ್ಟು ರಾಜಕೀಯ ಮಾಡುವುದಕ್ಕೆ ಹೋದರೆ ಹೇಗೆ? ಇವರಿಗೆ ಜನರ ಬಗ್ಗೆ ಕಳಕಳಿಯಿಲ್ಲ. ಉತ್ತರ ಕರ್ನಾಟಕದ ಸಮಸ್ಯೆಯ ಬಗ್ಗೆ ಮಾಹಿತಿ ಇಲ್ಲ. ಸುಮ್ಮನೆ ಪ್ರಚಾರ ಪಡೆದುಕೊಳ್ಳುವುದಕ್ಕೆ ಈ ರೀತಿ ವರ್ತಿಸುತ್ತಿದ್ದಾರೆಂದು ಹೊರಗೆ ಜನರು ಮಾತನಾಡಿಕೊಳ್ಳುತ್ತಿದ್ದಾರೆ. ರಾಜಕೀಯ ಮಾಡುವುದಕ್ಕೆ ಈ ರೀತಿ ವರ್ತಿಸಿದರೆ ಹೇಗೆ? ನಾನು ಅವರ ಒಳ್ಳೆಯದಕ್ಕಾಗಿ ಹೇಳುತ್ತಿದ್ದೇನೆ, ಅವರೆಲ್ಲರೂ ತಮ್ಮತಮ್ಮ ಸ್ಥಾನಕ್ಕೆ ಮರಳಬೇಕೆಂದು ಕೇಳಿಕೊಳ್ಳುತ್ತಿದ್ದೇನೆ.

**ಶ್ರೀ ಬಸವರಾಜ ಪಾಟೀಲ್ ಇಟಗಿ:-** ಸನ್ಮಾನ್ಯ ಸಭಾಪತಿಯವರೆ, ಈಗಾಗಲೇ ಮಾನ್ಯ ಮುಖ್ಯಮಂತ್ರಿಗಳು ಸ್ಪಷ್ಟವಾಗಿ ಹೇಳಿದ್ದಾರೆ. ಒಂದು ಗಂಟೆಗಳ ಕಾಲ ಪ್ರಶ್ನೋತ್ತರ ಅವಧಿಯನ್ನು ಮುಗಿಸಿ, ಅನಂತರ ಈ ವಿಚಾರವನ್ನು ತೆಗೆದುಕೊಂಡು ಅದರ ಬಗ್ಗೆಯೇ ಬೆಳಗ್ಗಿನವರೆಗೆ ಚರ್ಚೆ ಮಾಡಿದರೂ, ಎಲ್ಲದಕ್ಕೂ ಉತ್ತರ ಕೊಡುವುದಕ್ಕೆ ನಾನು ಸಿದ್ಧನಿದ್ದೇನೆಂದು ಅವರು ಈಗಾಗಲೇ ಹೇಳಿದ್ದಾರೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**ಶ್ರೀ ಶರಣಪ್ಪ ಮಟ್ಟೂರ:-** ಸನ್ಮಾನ್ಯ ಸಭಾಪತಿಯವರೆ, ಮಾನ್ಯ ವೈ.ಎ.ನಾರಾಯಣಸ್ವಾಮಿ ಯವರು ಸದನದ ಬಾವಿಯೊಳಗೆ ನಿಂತು ಮಾತನಾಡಬಾರದು.

**ಡಾ:ಜಯಮಾಲ:-** ಸನ್ಮಾನ್ಯ ಸಭಾಪತಿಯವರೆ, ಮಾನ್ಯ ಭಾರತೀಯ ಜನತಾ ಪಕ್ಷದ ಸದಸ್ಯರಲ್ಲಿ ವಿನಂತಿ ಮಾಡಿಕೊಳ್ಳುವುದೇನೆಂದರೆ, ಅವರುಗಳು ಪ್ರತಿಷ್ಠೆ ಬಿಟ್ಟು ತಮ್ಮತಮ್ಮ ಸ್ಥಾನಗಳಿಗೆ ಮರಳಿದರೆ, ಒಂದು ಗಂಟೆಯೊಳಗಾಗಿ ಪ್ರಶ್ನೋತ್ತರ ಅವಧಿಯನ್ನು ಮುಕ್ತಾಯಗೊಳಿಸಲಾಗುತ್ತದೆ. ಅನಂತರ ಅವರೆಲ್ಲರ ಬೇಡಿಕೆ ಮತ್ತು ಮಾನ್ಯ ಮುಖ್ಯಮಂತ್ರಿಗಳು ಒಪ್ಪಿಕೊಂಡಿರುವಂತೆ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡೋಣ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಸನ್ಮಾನ್ಯ ಸಭಾಪತಿಯವರೆ, ಸರ್ಕಾರಕ್ಕೆ ಈ ವಿಚಾರದಲ್ಲಿ ಪ್ರತಿಷ್ಠೆ ಏಕೆ ಎನ್ನುವುದು ನನಗೆ ಗೊತ್ತಾಗುತ್ತಿಲ್ಲ.

**ಶ್ರೀ ಎಸ್.ಆರ್.ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-** ಸನ್ಮಾನ್ಯ ಸಭಾಪತಿಯವರೆ, ಇವರಿಗೆ ಉತ್ತರ ಕರ್ನಾಟಕದ ಬಗ್ಗೆ ನಿಜವಾದ ಕಾಳಜಿ ಮತ್ತು ಅಭಿಮಾನ ಇದ್ದಿದ್ದರೆ, ಈ ರೀತಿ ಸದನದ ಸಮಯವನ್ನು ವ್ಯರ್ಥಗೊಳಿಸುವುದಕ್ಕೆ ಹೋಗುತ್ತಿರಲಿಲ್ಲ. ಇವರಿಗೆ ಅವರ ಪಕ್ಷದ ವರಿಷ್ಠರಿಂದ ನಿರ್ದೇಶನ ಬಂದಿದೆ ಎನ್ನುವುದರ ಬಗ್ಗೆ ಈ ಸದನಕ್ಕೆ ಬರುವುದಕ್ಕೂ ಮೊದಲೇ ನನಗೆ ಮಾಹಿತಿ ದೊರೆತಿತ್ತು. ಉತ್ತರ ಕರ್ನಾಟಕದ ನೆಪ ಇಟ್ಟುಕೊಂಡು ಸದನ ನಡೆಸುವುದಕ್ಕೆ ಬಿಡುವುದಿಲ್ಲವೆಂದು ಹೊರಗಡೆ ಇಡೀ ಬೆಳಗಾವಿ ನಗರದ ತುಂಬಾ ಸುದ್ದಿ ಹಬ್ಬಿದೆ. ಬೆಳಿಗ್ಗೆ ಮಾನ್ಯ ಮುಖ್ಯಮಂತ್ರಿಗಳು ಮಾತನಾಡುತ್ತಿದ್ದ ಸಂದರ್ಭದಲ್ಲಿ ಬೆಳಗಾವಿಯಲ್ಲಿ ಏತಕ್ಕೋಸ್ಕರ ಸುವರ್ಣಸೌಧವನ್ನು ನಿರ್ಮಾಣ ಮಾಡಲಾಗಿದೆ ಎನ್ನುವುದರ ಬಗ್ಗೆ ಹೇಳಿದ್ದಾರೆ. ಬೆಳಗಾವಿ ಕರ್ನಾಟಕ ರಾಜ್ಯದ ಒಂದು ಅವಿಭಾಜ್ಯ ಅಂಗ ಎನ್ನುವುದನ್ನು ಸಾಬೀತುಗೊಳಿಸುವುದಕ್ಕಾಗಿ ಸುವರ್ಣಸೌಧವನ್ನು ನಿರ್ಮಾಣ ಮಾಡಲಾಗಿದೆ. ಬೆಳಗಾವಿಯಲ್ಲಿ ಮಾತ್ರ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುವುದಲ್ಲ, ಸಮಗ್ರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆಯಾಗಬೇಕು. ಬೆಂಗಳೂರಿನಲ್ಲಿ ತಿಂಗಳಾನುಗಟ್ಟಲೆ ನಡೆಯುವ ಅಧಿವೇಶನಗಳಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆಯಾಗಬೇಕು. ಬೆಳಗಾವಿ ಸುವರ್ಣ ವಿಧಾನಸೌಧ ಕರ್ನಾಟಕ ರಾಜ್ಯದ ಅವಿಭಾಜ್ಯ ಅಂಗವಾಗಿದೆ. ಉತ್ತರ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಕರ್ನಾಟಕದ ಜ್ವಲಂತ ಸಮಸ್ಯೆಗಳ ಬಗ್ಗೆ ಬೆಂಗಳೂರು ಮತ್ತು ಬೆಳಗಾವಿ ಎರಡೂ ಕಡೆಗಳಲ್ಲಿ ನಡೆಯುವ ಅಧಿವೇಶನಗಳಲ್ಲಿ ಚರ್ಚೆಯಾಗಬೇಕಾಗಿದೆ. ಉತ್ತರ ಕರ್ನಾಟಕದ ಅಭಿವೃದ್ಧಿಯ ಬಗ್ಗೆ ಇವರಿಗೆ ಕಾಳಜಿ ಇದ್ದರೆ, ಒಂದು ಪ್ರಶ್ನೆಗೆ ನಾಲ್ಕು ನಿಮಿಷಗಳ ಕಾಲಾವಕಾಶವನ್ನು ತೆಗೆದುಕೊಂಡು ಒಂದು ಗಂಟೆಗಳ ಕಾಲಾವಧಿಯಲ್ಲಿ ಪ್ರಶ್ನೋತ್ತರವನ್ನು ಮುಗಿಸಿ, ನಂತರ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆಗೆ ಮಾಡಬಹುದು. ಪ್ರತಿಪಕ್ಷದ ಎಲ್ಲಾ ಸದಸ್ಯರು ತಮ್ಮ ಸ್ಥಾನಗಳಿಗ ಹೋಗಬೇಕು ಎಂದು ನಾನು ಮನವಿ ಮಾಡಿಕೊಳ್ಳುತ್ತೇನೆ.

(ಮುಂದುವರಿದಿದೆ...)

*(601) 20.12.2018 1.00 ಪಿಕೆ:ಬಿಎನ್‌ಎಸ್*

ಶ್ರೀ ಎಸ್.ಆರ್.ಪಾಟೀಲ್(ಮುಂದುವರೆದುದು...)

ಮಾನ್ಯ ಸಭಾಪತಿಯವರೇ, ತಾವು ಈಗಾಗಲೇ ಪೀಠದಿಂದ ಒಂದು ಆದೇಶ ಮಾಡಿದ್ದೀರಿ. ಅದನ್ನು ವಾಪಸ್ಸು ತೆಗೆದುಕೊಳ್ಳುವುದಕ್ಕೆ ಆಗುವುದಿಲ್ಲ. You have got an unfettered discretionary power and you have already given a Ruling. ಮಾನ್ಯ ಕೊಂಡಯ್ಯನವರನ್ನು ತಾವು ಪ್ರಶ್ನೆ ಕೇಳಲು ಕರೆದಿರಿ. ಎಲ್ಲರೂ ತಮ್ಮ ಪೀಠಕ್ಕೆ ಗೌರವ ಕೊಡಬೇಕು. ನಾವು ತಮ್ಮ ಪೀಠಕ್ಕೆ ಗೌರವ ಕೊಡದೇ ಇದ್ದರೆ ಸದನವನ್ನು ನಡೆಸುವುದಕ್ಕೆ ಆಗುವುದಿಲ್ಲ. ನಾವೇ ಮಾಡಿಕೊಂಡಿರುವಂತಹ ನಿಯಮಗಳನ್ನು ಪಾಲನೆ ಮಾಡಬೇಕಾಗುತ್ತದೆ. ನಾವುಗಳು ಸಹಕಾರ ಕೊಡದೇ ಇದ್ದರೆ ತಾವು ಸದನ ನಡೆಸುವುದಕ್ಕೆ ಆಗುವುದೇ ಇಲ್ಲ. You cannot run this House. ನೀವು ಕೊಟ್ಟಂಥ ನಿರ್ಣಯ, it is binding on us. ತಾವು ಕೊಟ್ಟ ನಿರ್ಣಯವನ್ನು ನಾವು ಪಾಲಿಸಬೇಕು, ವಿರೋಧ ಪಕ್ಷದವರೂ ಪಾಲಿಸಬೇಕು. ಪ್ರಶ್ನೋತ್ತರ ಕಲಾಪವನ್ನು ತೆಗೆದುಕೊಳ್ಳೋಣ ಎಂದು ತಾವು ಮಾನ್ಯ ಕೊಂಡಯ್ಯನವರನ್ನು ಕರೆದಿರಿ. ಪ್ರಶ್ನೋತ್ತರ ಕಲಾಪವನ್ನು ಪ್ರಾರಂಭ ಮಾಡಲು ತೀರ್ಮಾನಿಸಿ ಮಾನ್ಯ ಸದಸ್ಯರನ್ನು ಪ್ರಶ್ನೆ ಕೇಳುವಂತೆ ತಿಳಿಸಿದ ಮೇಲೆ ವಿರೋಧ ಪಕ್ಷದವರು ತಮ್ಮ ಮಾತಿಗೆ ಗೌರವ ಕೊಡಬೇಕು. ಇಲ್ಲದಿದ್ದರೆ ಅದು ಪೀಠಕ್ಕೆ ಅಗೌರವ ತೋರಿಸಿದ ಹಾಗಾಗುತ್ತದೆ. ಇದಕ್ಕಿಂತ ಹೆಚ್ಚಾಗಿ, ಇವರಿಗೆ ನಿಜವಾಗಿಯೂ ಉತ್ತರ ಕರ್ನಾಟಕದ ಬಗ್ಗೆ ಕಾಳಜಿ ಇದೆಯೇ ಎಂಬ ಪ್ರಶ್ನೆ ಎದುರಾಗುತ್ತದೆ. ಪೀಠದ ನಿರ್ಣಯಕ್ಕೆ, ರೂಲಿಂಗ್‌ಗೆ ವ್ಯತಿರಿಕ್ತವಾಗಿ ಅವರು ಬಾವಿಯೊಳಗೆ ಇಳಿದರೆ ಅದು ಅಗೌರವವಾಗುತ್ತದೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಮಾನ್ಯ ಸಭಾಪತಿಯವರೆ, ಇವರೆಲ್ಲರೂ ನಮ್ಮ ಸ್ನೇಹಿತರು. ಅವರ ಬಗ್ಗೆ ನಮಗೂ ಕಾಳಜಿ ಇದೆ, ಗೌರವ ಇದೆ. ಆದ್ದರಿಂದ ಪ್ರತಿಪಕ್ಷದ ನಾಯಕರು ಮತ್ತು ಎಲ್ಲಾ ಸದಸ್ಯರು ತಮ್ಮತಮ್ಮ ಸ್ಥಾನಗಳಿಗೆ ತೆರಳಬೇಕು ಎಂದು ನಾನು ಸಹ ಮನವಿ ಮಾಡಿಕೊಳ್ಳುತ್ತೇನೆ. ಒಂದೇ ಒಂದು ಗಂಟೆಯೊಳಗೆ ಪ್ರಶ್ನೋತ್ತರ ಕಲಾಪವನ್ನು ಮುಗಿಸೋಣ. 15 ಪ್ರಶ್ನೆಗಳನ್ನು ಪೂರ್ತಿಗೊಳಿಸುವುದಕ್ಕೆ ಆಗದೇ ಹೋದರೂ, 1 ಗಂಟೆ ಅವದಿಯಲ್ಲಿ ಎಷ್ಟು ಪ್ರಶ್ನೆಗಳನ್ನು ಮುಗಿಸಲು ಸಾಧ್ಯವಾಗುತ್ತದೆಯೋ ಅಷ್ಟಕ್ಕೆ ನಿಲ್ಲಿಸಿಬಿಡೋಣ. 5 ಪ್ರಶ್ನೆಗಳು ಉಳಿದರೆ ಪರವಾಗಿಲ್ಲ. ಒಂದು ಗಂಟೆಯ ನಂತರ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡೋಣ. ನಾವು ಇವತ್ತು ಇಡೀ ರಾತ್ರಿ ಕುಳಿತು ಚರ್ಚೆ ಮಾಡೋಣ. ಎಲ್ಲಾ ವಿರೋಧ ಪಕ್ಷದ ಸದಸ್ಯರು ತಮ್ಮತಮ್ಮ ಸ್ಥಾನಗಳಿಗೆ ಹೋಗಬೇಕು ಮತ್ತು ಪ್ರಶ್ನೋತ್ತರ ಕಲಾಪವನ್ನು ನಡೆಸುವುದಕ್ಕೆ ಅನುವು ಮಾಡಿಕೊಡಬೇಕು ಎಂದು ನಾನು ತಮ್ಮ ಮೂಲಕ ವಿರೋಧ ಪಕ್ಷದ ಮಾನ್ಯ ಸದಸ್ಯರಲ್ಲಿ ಮನವಿ ಮಾಡಿಕೊಳ್ಳುತ್ತೇನೆ.

**ಶ್ರೀ ಶರಣಪ್ಪ ಮಟ್ಟೂರ:-** ಮಾನ್ಯ ಸಭಾಪತಿಯವರೆ, ಮಾನ್ಯ ವಿರೋಧ ಪಕ್ಷದ ನಾಯಕರು ಬೆಳಿಗ್ಗೆ ಬಂದ ತಕ್ಷಣ submission ಗೆ ಅವಕಾಶ ಕೇಳಿದರು. ಆಗ ಮಾನ್ಯ ಐವನ್ ಡಿ'ಸೋಜಾರವರು, ಅದಕ್ಕೆ ಅವಕಾಶ ಕೊಡಬಾರದು ಎಂದು ಹೇಳಿದರು. ಆಗ ತಾವು, submission ಗೆ ನಾನು ಅವಕಾಶ ಕೊಟ್ಟಿದ್ದೇನೆ, ತಾವುಗಳು ಕುಳಿತುಕೊಳ್ಳಿ ಎಂದು ಹೇಳಿದಾಗ ನಾವು ಕುಳಿತುಕೊಂಡೆವು. ಈಗ ತಾವು, ಜರೂರಾದ ವಿಷಯವನ್ನು ಪ್ರಶ್ನೋತ್ತರ ವೇಳೆಯ ನಂತರ ತೆಗೆದುಕೊಳ್ಳುತ್ತೇನೆ ಎಂದು ಹೇಳಿದಿರಿ. ನಾವೇ ರೂಪಿಸಿರುವ ನಿಯಮಗಳನ್ನು ಉಲ್ಲಂಘನೆ ಮಾಡುವುದು ಒಳ್ಳೆಯದಲ್ಲ. ಆದ್ದರಿಂದ ಮೊದಲು ಪ್ರಶ್ನೋತ್ತರ ಕಲಾಪ ಮುಗಿಯಲಿ ಎಂದು ಹೇಳಿ, ಪ್ರಶ್ನೆ ಕೇಳಲು ಮಾನ್ಯ ಕೊಂಡಯ್ಯನವರನ್ನು ಕರೆದಿರಿ. ಆ ಸಂದರ್ಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಸದನದ ಒಳಗೆ ಬಂದರು. ಆಗ ಅವರು, ಉತ್ತರ ಕರ್ನಾಟಕಕ್ಕೆ ಸಂಬಂಧಪಟ್ಟಂತೆ ಮಾತ್ರವಲ್ಲ, ಸಮಗ್ರ ಕರ್ನಾಟಕಕ್ಕೆ ಸಂಬಂಧಪಟ್ಟ ಸಮಸ್ಯೆಗಳ ಬಗ್ಗೆ ವಿಸ್ತೃತವಾಗಿ ಚರ್ಚೆ ಮಾಡಿ, ಅವೆಲ್ಲಕ್ಕೂ ನಾವು ಉತ್ತರ ಕೊಡಲು ಸಮರ್ಥರಾಗಿದ್ದೇವೆ ಎಂಬ ಹೇಳಿಕೆಯನ್ನು ಕೊಟ್ಟರು. ಪೀಠ ಕೂಡ ಪ್ರಶ್ನೋತ್ತರದ ನಂತರ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆಯನ್ನು ತೆಗೆದುಕೊಳ್ಳೋಣ ಎಂದು ಹೇಳಿದೆ. ನಮ್ಮ ಕಾರ್ಯಕಲಾಪಗಳ ಸಲಹಾ ಸಮಿತಿಯಲ್ಲಿ ತೆಗೆದುಕೊಳ್ಳುವ ನಿರ್ಣಯಗಳಿಗೆ ಬೆಲೆ ಇಲ್ಲ ಎಂದು ಹೇಳುವುದಾದರೆ ಸದನವನ್ನು ಹೇಗೆ ನಡೆಸುವುದಕ್ಕಾಗುತ್ತದೆ? ಇದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು. ಮಾನ್ಯ ಹೊರಟ್ಟಿಯವರೂ ಕೂಡ ಕಠಿಣವಾದ ಶಬ್ದಗಳಲ್ಲಿ ಸಮಜಾಯಿಷಿ ನೀಡಿದರು. ಇದಕ್ಕಿಂತ ಇನ್ನೇನು ಹೆಚ್ಚಿನದನ್ನು ಹೇಳಬೇಕು?

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ:-** ಮಾನ್ಯ ಸಭಾಪತಿಯವರೇ, ...

"ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಸಭಾಪತಿಯವರು:-** ನೀವು ಧರಣಿಗೆ ಹೋಗುವುದು, ಮತ್ತೆ ನಿಮ್ಮ ಸ್ಥಾನಕ್ಕೆ ಹೋಗಿ ಮಾತನಾಡುವುದು ಹೀಗೆಲ್ಲಾ ನಡೆಯುವುದಿಲ್ಲ. ಆ ರೀತಿ ಮಾತನಾಡುವುದಕ್ಕೆ ಅವಕಾಶ ಕೊಡುವುದು ಸಾಧ್ಯವಿಲ್ಲ.

**ಶ್ರೀ ಬಂಡೆಪ್ಪ ಖಾಶೆಂಪೂರ(ಸಹಕಾರ ಸಚಿವರು):-** ವಿರೋಧ ಪಕ್ಷದವರು ಅವರ ಸ್ಥಾನಕ್ಕೆ ಹೋದರೆ House order ಗೆ ಬರುತ್ತದೆ.

(ಗೊಂದಲ)

(ಈ ಹಂತದಲ್ಲಿ ಬಾವಿಯೊಳಗಿರುವ ಸದಸ್ಯರು ಸರ್ಕಾರದ ವಿರುದ್ಧ ಧಿಕ್ಕಾರ ಕೂಗುತ್ತಿದ್ದರು.)

**ಸಭಾಪತಿಯವರು:-** ಮೇಲ್ಮನೆಗೆ ಬರಬೇಕಾದರೆ ಪುಣ್ಯ ಮಾಡಿರಬೇಕು, ಧಿಕ್ಕಾರ ಹಾಕುವುದಲ್ಲ.

**ಶ್ರೀ ಐವನ್ ಡಿ'ಸೋಜಾ:-** ಬಿಜೆಪಿಯವರಿಗೆ ಧಿಕ್ಕಾರ.

(ಗೊಂದಲ)

**ಶ್ರೀ ಎಂ.ನಾರಾಯಣಸ್ವಾಮಿ:-** ಬಿಜೆಪಿಯವರಿಗೆ ನಾಚಿಕೆ ಆಗಬೇಕು. ಏಕೆಂದರೆ ಅವರು ಮೊದಲೇ ಪ್ಲ್ಯಾನ್ ಮಾಡಿಕೊಂಡು ಬಂದು ಹೀಗೆ ಮಾಡುತ್ತಿದ್ದಾರೆ. ಇದನ್ನು ನಾವು ಖಂಡಿಸುತ್ತೇವೆ. ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಮಾಡನಾಡಲು ಇವರಿಗೆ ನೈತಿಕತೆ ಇಲ್ಲ.

(ಗೊಂದಲ)

**ಸಭಾಪತಿಯವರು:-** ಸದನವನ್ನು ಮಧ್ಯಾಹ್ನ 2 ಗಂಟೆ 30 ನಿಮಿಷಗಳವರೆಗೆ ಮುಂದೂಡುತ್ತಿದ್ದೇನೆ.

"ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

*(602) 20.12.2018 02.50 SV-KS*

**(ಮಧ್ಯಾಹ್ನ 1 ಗಂಟೆ 6 ನಿಮಿಷದಿಂದ ಮಧ್ಯಾಹ್ನ 2 ಗಂಟೆ 30 ನಿಮಿಷಗಳವರೆಗೆ ಮುಂದೂಡಲ್ಪಟ್ಟಿದ್ದ ಸದನವು ಪುನಃ ಮಧ್ಯಾಹ್ನ 02 ಗಂಟೆ 50 ನಿಮಿಷಗಳಿಗೆ ಸಮಾವೇಶಗೊಂಡಿತು)**

**(ಮಾನ್ಯ ಸಭಾಪತಿಯವರು ಪೀಠವನ್ನು ಅಲಂಕರಿಸಿದರು)**

**(ವಿರೋಧ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೆ, ಈಗಾಗಲೇ ತಮ್ಮ ಗಮನಕ್ಕೆ ತಂದಿರುವಂತೆ ಉತ್ತರ ಕರ್ನಾಟಕದ ಹಲವಾರು ಸಮಸ್ಯೆಗಳ ಬಗ್ಗೆ ಚರ್ಚೆಯನ್ನು ಮಾಡುವುದಕ್ಕೆ ತಾವು ಅವಕಾಶವನ್ನು ಮಾಡಿಕೊಡಬೇಕು. ತಾವು ಪುನರಪಿ ಅದರ ಬಗ್ಗೆ ಯೋಚನೆ ಮಾಡಿ ನಮಗೆ ಅವಕಾಶವನ್ನು ಕೊಡಬೇಕು. ಉತ್ತರ ಕರ್ನಾಟಕ ಭಾಗದ ಅನೇಕ ಸಮಸ್ಯೆಗಳು ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಒಂದಷ್ಟು ಮುಕ್ತವಾಗಿ ಸರ್ಕಾರದ ಜೊತೆ ಚರ್ಚೆ ಮಾಡಲು ಅವಕಾಶವನ್ನು ಮಾಡಿಕೊಡಬೇಕು ಎಂದು ತಮ್ಮಲ್ಲಿ ವಿನಂತಿ ಮಾಡುತ್ತೇವೆ.

**ಶ್ರೀ ಪಿ.ಆರ್.ರಮೇಶ್ (ವಿಧಾನ ಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಇವರಿಗೆ ಯಾವ ರೀತಿಯ ಆಸಕ್ತಿಯಿದೆ ಎಂಬುದನ್ನು ನಿನ್ನೆ ತೋರಿಸಿದರು. ಉತ್ತರವನ್ನು ಕೊಡುವಂತಹ ಸಂದರ್ಭದಲ್ಲಿ ಇವರು ಯಾರೂ ಇಲ್ಲಿ ಇರಲಿಲ್ಲ. ಬರಗಾಲದ ವಿಷಯವನ್ನು ಪ್ರಸ್ತಾಪ ಮಾಡಿದವರೇ ಅವರು. ಆದರೆ ಸರ್ಕಾರ ಸದನದಲ್ಲಿ ಉತ್ತರ ಕೊಡುವ ಸಂದರ್ಭದಲ್ಲಿ ನಾವು ಯಾವ ರೀತಿ ಆ ಚರ್ಚೆಯಲ್ಲಿ ಪಾಲ್ಗೊಳ್ಳಬೇಕೆಂಬುದೇ ಅವರಿಗೆ ಗೊತ್ತಿಲ್ಲ. ವಿರೋಧ ಪಕ್ಷದವರು ಕೇವಲ ಕಣ್ಣೊರೆಸುವ ತಂತ್ರವನ್ನು ಅನುಸರಿಸುತ್ತಿದ್ದು, ಪ್ರಚಾರಕ್ಕಾಗಿ ಇದನ್ನೆಲ್ಲಾ ಮಾಡುತ್ತಿದ್ದಾರೆ. ಇದಕ್ಕಾಗಿ ಅವರು ಈ ಒಂದು ಸದನವನ್ನು ಉಪಯೋಗಿಸಿಕೊಳ್ಳುತ್ತಿದ್ದಾರೆ.

**ಸಭಾಪತಿಯವರು:-** ಧರಣಿಯಲ್ಲಿ ನಿರತರಾಗಿರುವವರು ಏನೇ ಮಾತನಾಡಿದರೂ ಅದು ಕಡತಕ್ಕೆ ಹೋಗುವುದಿಲ್ಲ.

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**ಶ್ರೀ ಟಿ.ಎ.ಶರವಣ (ವಿಧಾನ ಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಬೆಳಗಿನಿಂದಲೂ ಇದೇ ಚರ್ಚೆಯಾಗುತ್ತಿದ್ದು, ತಾವು ಪ್ರಶ್ನೋತ್ತರ ಅವಧಿಯನ್ನು ಪ್ರಾರಂಭ ಮಾಡುವಂತೆ ಪೀಠದಿಂದ ruling ಕೊಟ್ಟು, ಮಾನ್ಯ ಕೊಂಡಯ್ಯನವರಿಗೆ ಪ್ರಶ್ನೆಯನ್ನು ಕೇಳುವುದಕ್ಕೆ ತಿಳಿಸಿದಿರಿ. ನಿಮ್ಮ ruling ಗೆ ಯಾವುದೇ ಕಾರಣಕ್ಕೂ ಯಾರೂ ಅಪಸ್ವರವೆತ್ತಬಾರದು.

**ಡಾ:ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ಉತ್ತರ ಕರ್ನಾಟಕದ ಅಭಿವೃದ್ಧಿಯ ಬಗ್ಗೆ ಸಾಕಷ್ಟು ವಿವರವಾದ ಮಾಹಿತಿಯನ್ನು ಕೊಟ್ಟಿದ್ದೇವೆ. ಚರ್ಚೆಗಳು ನಡೆದಿವೆ. ತಾವು ವಿರೋಧ ಪಕ್ಷದ ಮಾನ್ಯ ಸದಸ್ಯರನ್ನು ಸದನದ ಬಾವಿಯಿಂದ ಹೊರಗೆ ಬಂದು ಪ್ರಶ್ನೋತ್ತರಕ್ಕೆ ಅವಕಾಶವನ್ನು ಮಾಡಿಕೊಡುವಂತೆ ಸೂಚಿಸಬೇಕು. ವಿರೋಧ ಪಕ್ಷದ ಮಾನ್ಯ ಸದಸ್ಯರು ವಿನಾಕಾರಣ ಸದನದ ಸಮಯವನ್ನು ಹಾಳು ಮಾಡುತ್ತಿದ್ದಾರೆ. ಇದೇ ಸಮಯದಲ್ಲಿ ಇಷ್ಟು ಹೊತ್ತಿಗಾಗಲೇ ಸದನದ ಇಡೀ ಕಲಾಪವನ್ನು ನಡೆಸಬಹುದಾಗಿತ್ತು. ವಿರೋಧ ಪಕ್ಷದ ಮಾನ್ಯ ಸದಸ್ಯರು ಬೇಕಾಗಿಯೇ ಈ ರೀತಿ ಮಾಡುತ್ತಿದ್ದಾರೆ. ದಯವಿಟ್ಟು ನಾನು ತಮ್ಮಲ್ಲಿ ವಿನಂತಿ ಮಾಡುತ್ತೇನೆ, ...

**ಶ್ರೀ ಆರ್.ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದವರು ಯಾವಾಗಲೂ ಬೆಳಗಾವಿ ಅಧಿವೇಶನದಲ್ಲಿ ಕೊನೆಯ ಮೂರು ದಿನಗಳ ಕಲಾಪಗಳನ್ನು ಸುಗಮವಾಗಿ ನಡೆಯಲು ಬಿಡುವುದಿಲ್ಲ. ಇತಿಹಾಸದ ಪುಟಗಳನ್ನು ತೆಗೆದು ನೋಡಿರಿ. ಉತ್ತರ ಕರ್ನಾಟಕವನ್ನು ಅಭಿವೃದ್ಧಿಯಾಗದಂತೆ ನೋಡಿಕೊಳ್ಳುವುದೇ ಇವರ ದೊಡ್ಡ ಕೆಲಸವಾಗಿದೆ.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ನಿಂತಿದ್ದ ವಿರೋಧ ಪಕ್ಷದ ಮಾನ್ಯ ಸದಸ್ಯರು ಬರನಿರ್ವಹಣೆ ಮಾಡದೆ ಇರುವ ಸರ್ಕಾರಕ್ಕೆ ಧಿಕ್ಕಾರ, ಕೃಷ್ಣಾ ನೀರಾವರಿ ವಿರೋಧಿ ನೀತಿಗೆ ಧಿಕ್ಕಾರ; ಪ್ರಶ್ನೆ ಬೇಡ ಉತ್ತರ ಬೇಕು, ಬೇಕೇ ಬೇಕು ನ್ಯಾಯ ಬೇಕು, ಬೋಲೋ ಭಾರತ್ ಮಾತಾ ಕಿ ಜೈ ಎಂಬ ಘೋಷಣೆಗಳನ್ನು ಕೂಗಿದರು.)**

**ಶ್ರೀ ಐವನ್ ಡಿ'ಸೋಜ (ನಾಮ ನಿರ್ದೇಶಿತರು):-** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದವರಿಗೆ ಪತ್ರಿಕೆಯಲ್ಲಿ ಯಾವಾಗ ಬರದ ವಿಚಾರ ಬಂದಿತೋ, ಅದರ ನಂತರ ಅವರಿಗೆ ಬರದ ನೆನಪಾಗಿದೆ. ಕಳೆದ 9 ದಿನಗಳಿಂದಲೂ ಮಲಗಿದ್ದರು. ಈಗ ನಾಟಕ ಮಾಡುತ್ತಿದ್ದಾರೆ. ಹೊರಗಿರುವ ಜನರಿಗೆ ಇವರು ಮಾಡುತ್ತಿರುವ ನಾಟಕ ಗೊತ್ತಿದೆ. ಎಷ್ಟು ನಾಟಕವನ್ನು ಮಾಡುವುದಕ್ಕಾಗುತ್ತದೆ? ಈ ನಾಟಕವನ್ನು ನಿಲ್ಲಿಸಬೇಕು. ವಿರೋಧ ಪಕ್ಷದವರು ಹೇಗೂ ಅಧಿಕಾರಕ್ಕೆ ಬರುವುದಿಲ್ಲ, ಮುಂದೆಯೂ ಅವರು ಅಧಿಕಾರಕ್ಕೆ ಬರುವುದಿಲ್ಲ.

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಸಭಾಪತಿಯವರು:-** ಮಾನ್ಯ ಕೊಂಡಯ್ಯನವರು ಮಾತನಾಡಬಯಸುತ್ತಿದ್ದಾರೆ, ದಯಮಾಡಿ ಸ್ವಲ್ಪ ಕೇಳಿ.

**ಶ್ರೀ ಐವನ್ ಡಿ'ಸೋಜಾ:-** ಕಣ್ಣೊರೆಸುವ ತಂತ್ರಕ್ಕೆ ಧಿಕ್ಕಾರ.

**(ಈ ಹಂತದಲ್ಲಿ ವಿರೋಧ ಪಕ್ಷದ ಮಾನ್ಯ ಸದಸ್ಯರುಗಳು '55 ವರ್ಷಗಳ ಆಶ್ವಾಸನೆ ಬೇಡ' ಎಂದು ಘೋಷಣೆಯನ್ನು ಕೂಗಿದರು.)**

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೆ, ಈ ರೀತಿಯ ಘೋಷಣೆಗಳನ್ನು ಇಲ್ಲಿ ಕೂಗುವುದಲ್ಲ. ಅದಕ್ಕಾಗಿಯೇ ಹೊರಗೆ ಟೆಂಟ್‌ಗಳನ್ನು ನಿರ್ಮಿಸಲಾಗಿದೆ, ಇವರು ಅಲ್ಲಿ ಹೋಗಿ ಕೂಗಲಿ.

**ಸಭಾಪತಿಯವರು:-** ಸದನವನ್ನು ಸಂಜೆ 04-00 ಗಂಟೆಯವರೆಗೆ ಮುಂದೂಡಲಾಗಿದೆ.

***(603) 20.12.2018 (4.00) ಕೆಜಿ.ಜಿಆರ್***

**(ಮಧ್ಯಾಹ್ನ 02 ಗಂಟೆ 56 ನಿಮಿಷದಿಂದ ಸಂಜೆ 04-00 ಗಂಟೆಯವರಗೆ ಮುಂದೂಡಲ್ಪಟ್ಟಿದ್ದ ಸದನವು ಪುನಃ ಸಂಜೆ 4 ಗಂಟೆ 06 ನಿಮಿಷಗಳಿಗೆ ಸಮಾವೇಶಗೊಂಡಿತು)**

**(ಸಭಾಪತಿಯವರು ಪೀಠವನ್ನು ಅಲಂಕರಿಸಿದರು)**

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರು ಸದನದ ಬಾವಿಯಲ್ಲಿ ಧರಣಿಯಲ್ಲಿ ನಿರತರಾಗಿದ್ದರು)**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, point of order ಇದೆ. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 303, ಪುಟ ಸಂಖ್ಯೆ 186 ರ 2ನೇ ಪ್ಯಾರದಲ್ಲಿ 'ಸದನದಲ್ಲಿ ಘೋಷಣೆಗಳನ್ನು ಕೂಗತಕ್ಕದ್ದಲ್ಲ' ಎಂದು ಇದೆ. ಇದನ್ನು ತಾವು ದಯವಿಟ್ಟು ಗಮನಿಸಬೇಕು. ಮಾನ್ಯ ಸಭಾಪತಿಯವರೆ, ಇವರಿಗೆ "ಮಾನ ಮರ್ಯಾದೆ ಇಲ್ಲವೇ"?

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ನಿಂತಿದ್ದ ವಿರೋಧ ಪಕ್ಷದ ಮಾನ್ಯ ಸದಸ್ಯರು ಬರನಿರ್ವಹಣೆ ಮಾಡದೆ ಇರುವ ಸರ್ಕಾರಕ್ಕೆ ಧಿಕ್ಕಾರ, ಕೃಷ್ಣಾ ನೀರಾವರಿ ವಿರೋಧಿ ನೀತಿಗೆ ಧಿಕ್ಕಾರ, ಪ್ರಶ್ನೆ ಬೇಡ, ಉತ್ತರ ಬೇಕು; ಬೇಕೇ ಬೇಕು ನ್ಯಾಯ ಬೇಕು, ಬೋಲೋ ಭಾರತ್ ಮಾತಾ ಕಿ ಜೈ, ಎಂಬ ಘೋಷಣೆಗಳನ್ನು ಕೂಗಿದರು.)**

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಅವರಿಗೆ ಅದು ಇದ್ದಿದ್ದರೆ ಅವರು ಬಾವಿಗೆ ಹೋಗುತ್ತಿರಲಿಲ್ಲ. ಅವರು ಈ ನಿಯಮವನ್ನು ಓದಿಲ್ಲ ಹಾಗೂ ಅದನ್ನು ತಿಳಿದುಕೊಂಡಿಲ್ಲ.

(ಗೊಂದಲ)

**ಶ್ರೀ ಯು.ಟಿ.ಖಾದರ್ (ನಗರಾಭಿವೃದ್ಧಿ ಹಾಗೂ ವಸತಿ ಸಚಿವರು):-** ಮಾನ್ಯ ಸಭಾಪತಿಯವರೆ, ಅವರಿಗೆ ಉತ್ತರ ಕರ್ನಾಟಕದ ಭಾಗದ ಬಗ್ಗೆ ಕಾಳಜಿ ಇದ್ದಿದ್ದರೆ, ಒಂದು ಗಂಟೆಯಲ್ಲಿ ಪ್ರಶ್ನೋತ್ತರ ವೇಳೆ ಮುಗಿಯುತ್ತಿತ್ತು. ಅವರು ಉತ್ತರ ಕರ್ನಾಟಕದ ಹೆಸರಿನಲ್ಲಿ ರಾಜಕೀಯ ಮಾಡುತ್ತಿದ್ದಾರೆ. ಅವರಿಗೆ ಉತ್ತರ ಕರ್ನಾಟಕದ ಭಾಗದ ಬಗ್ಗೆ ಕಾಳಜಿ ಇದ್ದರೆ, ಅವರೆಲ್ಲರೂ ತಮ್ಮ ತಮ್ಮ ಸ್ಥಾನಗಳಿಗೆ ಹೋಗಿ ಕುಳಿತುಕೊಂಡು ಸದನವನ್ನು ನಡೆಸಲು ಅವಕಾಶ ಮಾಡಿಕೊಡಬೇಕು.

(ಗೊಂದಲ)

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ:-** ಮಾನ್ಯ ಸಭಾಪತಿಯವರೆ, ನಾನು point of order ಎತ್ತಿದ್ದೇನೆ. ತಾವು ದಯಮಾಡಿ, point of order ಮೇಲೆ ruling ಕೊಡಬೇಕು.

(ಗೊಂದಲ)

**ಶ್ರೀ ಟಿ.ಎ.ಶರವಣ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, point of order ಮೇಲೆ ruling ಕೊಡಿ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(ಗೊಂದಲ)

**ಸಭಾಪತಿಯವರು:-** ಮಾನ್ಯ ಸದಸ್ಯರೆ, ರಾಜಕಾರಣಕ್ಕೂ ಒಂದು ಮೀತಿ ಇರಬೇಕು. ನಿಮ್ಮ ಸದನಕ್ಕೆ ನೀವೇ ಗೌರವ ಇಲ್ಲದಂತೆ ಮಾಡಿದರೆ, ಇಲ್ಲಿ ಬೇರೆ ಏನು ಉಳಿಯುತ್ತದೆ?

(ಗೊಂದಲ)

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರು 60 ವರ್ಷಗಳ ಆಶ್ವಾಸನೆಗಳು ಬೇಡ ಎಂದು ಘೋಷಣೆಯನ್ನು ಕೂಗಿದರು)**

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, "ವಿರೋಧ ಪಕ್ಷದ ಸದಸ್ಯರು ಅನಾಗರಿಕರಂತೆ" ವರ್ತಿಸುತ್ತಿದ್ದಾರೆ.

(ಗೊಂದಲ)

**ಶ್ರೀ ಯು.ಟಿ.ಖಾದರ್(ನಗರಾಭಿವೃದ್ಧಿ ಹಾಗೂ ವಸತಿ ಸಚಿವರು):-** ಮಾನ್ಯ ಸಭಾಪತಿಯವರೇ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ ಉತ್ತರ ಕರ್ನಾಟಕದ ಬಗ್ಗೆ ಚರ್ಚೆ ಮಾಡುವುದಕ್ಕೆ ಮನಸ್ಸು ಇಲ್ಲ, ಇಚ್ಛೆಯೂ ಇಲ್ಲ. ಅವರಿಗೆ ಏನಾದರೂ ಮನಸ್ಸು ಇದ್ದರೆ, ಪ್ರಶ್ನೋತ್ತರ ಕಲಾಪಕ್ಕೆ ಅವಕಾಶ ಮಾಡಿಕೊಡಲಿ.

(ಮುಂದುವರೆದಿದೆ...)

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

*(604) 20-12-2018 (4-10) ಎಂವಿ-ಜಿಆರ್*

**(ಗೊಂದಲ)**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ:-** ಮಾನ್ಯ ಸಭಾಪತಿಯವರೆ, ನಾನು ಪಾಯಿಂಟ್ ಆಫ್ ಆರ್ಡರ್ ಎತ್ತಿದ್ದೇನೆ. ದಯಮಾಡಿ ತಾವು ಆ ಬಗ್ಗೆ ರೂಲಿಂಗ್ ಕೊಡಬೇಕು.

**(ಗೊಂದಲ)**

**ಸಭಾಪತಿಯವರು:-** ಮಾನ್ಯ ಸದಸ್ಯರು ಒಂದು ನಿಮಿಷ ನನ್ನ ಮಾತನ್ನು ಕೇಳಿ. ರಾಜಕಾರಣಕ್ಕೂ ಒಂದು ಮಿತಿ ಇರಬೇಕು. ನಿಮ್ಮ ಸದನವನ್ನು ನೀವೇ ಗೌರವಿಸದಿದ್ದರೆ ಇಲ್ಲಿ ಏನು ಉಳಿಯುತ್ತದೆ?

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೆ, ಇದು ಅನಾಗರಿಕ ವರ್ತನೆ.

**(ಗೊಂದಲ)**

**ಶ್ರೀ ಯು.ಟಿ.ಖಾದರ್:-** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದವರಿಗೆ ಉತ್ತರ ಕರ್ನಾಟಕದ ಬಗ್ಗೆ ನಿಜವಾದ ಕಾಳಜಿ ಇಲ್ಲ. ಅವರು ತೋರುತ್ತಿರುವ ಕಾಳಜಿ ಏನಿದೆ, ಅದು ಕೇವಲ ನಾಟಕ. ಅವರಿಗೆ ಚರ್ಚೆ ಮಾಡುವುದಕ್ಕೆ ಮನಸ್ಸಿಲ್ಲ ಮತ್ತು ಇಚ್ಛೆಯೂ ಇಲ್ಲ.

**ಶ್ರೀ ಆರ್.ಧರ್ಮಸೇನ:-** ಮಾನ್ಯ ಸಭಾಪತಿಯವರೆ, ಮಾರ್ಷಲ್‌ರವರಿಗೆ ಹೇಳಿ ಇವರನ್ನು ಹೊರಗೆ ಹಾಕಿ ಸದನ ನಡೆಸಿ.

**(ಗೊಂದಲ)**

**ಶ್ರೀ ಯು.ಟಿ.ಖಾದರ್:-** ಮಾನ್ಯ ಸಭಾಪತಿಯವರೆ, ತಾವು ದಯಮಾಡಿ ಪ್ರಶ್ನೋತ್ತರ ಅವಧಿಗೆ ಅವಕಾಶ ಮಾಡಿಕೊಟ್ಟು, ಸದನದ ಕಲಾಪವನ್ನು ನಡೆಸಬೇಕೆಂದು ನಾನು ಮತ್ತೊಮ್ಮೆ ತಮ್ಮಲ್ಲಿ ವಿನಂತಿಸುತ್ತೇನೆ.

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ:-** ಮಾನ್ಯ ಸಭಾಪತಿಯವರೆ, ನಾನು ಪಾಯಿಂಟ್ ಆಫ್ ಆರ್ಡರ್ ಎತ್ತಿದ್ದೇನೆ. ಆ ವಿಚಾರದಲ್ಲಿ ತಾವು ದಯಮಾಡಿ ರೂಲಿಂಗ್ ಕೊಡಬೇಕು.

**ಶ್ರೀ ಶರಣಪ್ಪ ಮಟ್ಟೂರ:-** ಮಾನ್ಯ ಸಭಾಪತಿಯವರೆ, ಮಾನ್ಯ ಸದಸ್ಯರಾದ ಬಸವರಾಜ ಹೊರಟ್ಟಿಯವರು ರೂಲಿಂಗ್ ಕೇಳುತ್ತಿದ್ದಾರೆ.

**(ಗೊಂದಲ)**

**ಶ್ರೀ ಟಿ.ಎ.ಶರವಣ:-** ಮಾನ್ಯ ಸಭಾಪತಿಯವರೆ, ವಿರೋಧ ಪಕ್ಷದವರಿಗೆ ಕಾನೂನಿನ ಬಗ್ಗೆ ಏನಾದರೂ ಜವಾಬ್ದಾರಿ ಇದೆಯೇ?

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ:-** ಮಾನ್ಯ ಸಭಾಪತಿಯವರೆ, ಕಾನೂನಿನ ಬಗ್ಗೆ ಗೊತ್ತಿಲ್ಲವೆಂದರೆ ಏನು ಮಾಡುವುದು? ಅವರಿಗೆ ನಾಚಿಕೆ ಇಲ್ಲವೋ, ಅವರಿಗೆ ನಾಚಿಕೆ ಬೇಕು.

**(ಗೊಂದಲ)**

**ಶ್ರೀ ಟಿ.ಎ.ಶರವಣ:-** ಮಾನ್ಯ ಸಭಾಪತಿಯವರೆ, ಇದು ನಾಲಾಯಕ್, ಅವರಿಗೆ ಏನಾದರೂ ಇದೆಯೇ? ಮೂರ್ಖ ಬಿಟ್ಟವರು ಊರಿಗೆ ದೊಡ್ಡವರು.

**(ಗೊಂದಲ)**

**ಸಭಾಪತಿಯವರು:-** ತಮ್ಮನ್ನು ಸಭೆಯಿಂದ ಹೊರಹಾಕಬೇಕಾಗುತ್ತದೆ. ರಾಜಕಾರಣಕ್ಕೆ ಒಂದು ಮಿತಿ ಬೇಡವೇ? ನೀವು ಇಡೀ ಸದನವನ್ನು ಗುತ್ತಿಗೆ ತೆಗೆದುಕೊಂಡವರ ಹಾಗೆ ಮಾಡುವುದು ಸರಿಯಲ್ಲ. ನಿಮಗೆ ಏನು ಸಮಸ್ಯೆ ಇದೆ?

**“ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”**

---

**(ಗೊಂದಲ)**

**ಡಾ॥ಜಯಮಾಲ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರಗಳ ನಂತರ ಅವರಿಗೆ ಚರ್ಚೆ ಬೇಕು ಎಂದರೆ, ನಾವು ಸಿದ್ಧರಿದ್ದೇವೆ.

**ಸಭಾಪತಿಯವರು:-** ಸದನವನ್ನು ಸಂಜೆ 5 ಗಂಟೆ 15 ನಿಮಿಷದವರೆಗೆ ಮುಂದೂಡಲಾಗಿದೆ.

*(605) 20-12-2018 (05-15) ಎಲ್‌ಎಲ್-ಎಂಡಿ*

**(ಸಂಜೆ 4 ಗಂಟೆ 12 ನಿಮಿಷದಿಂದ ಸಂಜೆ 5 ಗಂಟೆ 15 ನಿಮಿಷದವರೆಗೆ ಮುಂದೂಡಲ್ಪಟ್ಟಿದ್ದ ಸದನವು ಪುನಃ ಸಂಜೆ 5 ಗಂಟೆ 18 ನಿಮಿಷಕ್ಕೆ ಪ್ರಾರಂಭವಾಯಿತು)**

**(ಮಾನ್ಯ ಸಭಾಪತಿಯವರು ಪೀಠವನ್ನು ಅಲಂಕರಿಸಿದರು)**

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರೂ ಸೇರಿದಂತೆ, ಭಾರತೀಯ ಜನತಾ ಪಕ್ಷದ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು)**

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಭಾರತೀಯ ಜನತಾ ಪಕ್ಷದ ಮಾನ್ಯ ಸದಸ್ಯರುಗಳು “ಬೇಕೇ ಬೇಕು, ನ್ಯಾಯ ಬೇಕು”, “ಶ್ರೀ ನಂಜುಂಡಪ್ಪ ವರದಿ ಜಾರಿಯಾಗಬೇಕು” ಎಂದು ಘೋಷಣೆಗಳನ್ನು ಕೂಗುತ್ತಾ ಫಲಕಗಳನ್ನು ಪ್ರದರ್ಶಿಸಿದರು.)**

**ಶ್ರೀ ಐವನ್ ಡಿ’ಸೋಜಾ:-** ಮಾನ್ಯ ಸಭಾಪತಿಯವರೆ, ಸದನ ನಡೆಸಬೇಕು.

**ಡಾ: ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ತಾವು ಮಾನ್ಯ ವಿರೋಧ ಪಕ್ಷದವರಿಗೆ ಸದನ ನಡೆಸಲು ಅನುವು ಮಾಡಿಕೊಡುವಂತೆ ತಿಳಿಸಬೇಕು.

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

**"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"**

**ಶ್ರೀ ಎಂ.ನಾರಾಯಣಸ್ವಾಮಿ:–** "ಗೋವಿಂದ, ಗೋವಿಂದ ಬಿಜೆಪಿ ಗೋವಿಂದ".

**ಡಾ: ಜಯಮಾಲ:–** ಮಾನ್ಯ ಸಭಾಪತಿಯವರೆ, ಇದು ನ್ಯಾಯವೇ?

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ:–** ಮಾನ್ಯ ಸಭಾಪತಿಯವರೆ, ಇದೊಂದು ನಾಟಕ ಕಂಪನಿ. ಎಲ್ಲರೂ ನಾಟಕ ಮಾಡುತ್ತಿದ್ದಾರೆ.

**ಡಾ: ಜಯಮಾಲ:–** ಮಾನ್ಯ ಸಭಾಪತಿಯವರೆ, ತಾವು ಸದನ ನಡೆಸಬೇಕು. ಬೆಳಿಗ್ಗೆಯಿಂದಲೂ ಸದನದ ಸಮಯ ಇದೇ ರೀತಿ ವ್ಯರ್ಥವಾಗುತ್ತಿದೆ.

**ಶ್ರೀ ಐವನ್ ಡಿ'ಸೋಜಾ:–** ಮಾನ್ಯ ಸಭಾಪತಿಯವರೆ, ತಾವು ಮಾನ್ಯ ವಿರೋಧ ಪಕ್ಷದವರ ಜೊತೆ ಮಾತನಾಡಿ ಸದನ ನಡೆಸಬೇಕು.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಭಾರತೀಯ ಜನತಾ ಪಕ್ಷದ ಮಾನ್ಯ ಸದಸ್ಯರುಗಳು "ಶ್ರೀ ನಂಜುಂಡಪ್ಪ ವರದಿ ಜಾರಿಯಾಗಬೇಕು", "ಧಿಕ್ಕಾರ, ಧಿಕ್ಕಾರ ಸರ್ಕಾರಕ್ಕೆ ಧಿಕ್ಕಾರ" ಎಂದು ಘೋಷಣೆಗಳನ್ನು ಕೂಗುತ್ತಾ, ಫಲಕಗಳನ್ನು ಪ್ರದರ್ಶಿಸಿದರು.)**

**ಶ್ರೀ ವೆಂಕಟರಾವ್ ನಾಡಗೌಡ(ಪಶುಸಂಗೋಪನೆ ಹಾಗೂ ಮೀನುಗಾರಿಕೆ ಸಚಿವರು):–** ಮಾನ್ಯ ಸಭಾಪತಿಯವರೆ, ಡಾ:ನಂಜುಂಡಪ್ಪ ವರದಿ ಜಾರಿಯಾಗಿ ಸುಮಾರು 8 ವರ್ಷಗಳು ಕಳೆದಿವೆ. ಆ ವರದಿ ಜಾರಿಗೆ ಯಾರು ತೊಂದರೆ ಮಾಡಿರುತ್ತಾರೆ?

**ಸಭಾಪತಿಯವರು:–** ಮಾನ್ಯ ವಿರೋಧ ಪಕ್ಷದ ನಾಯಕರು ಸದನದ ಬಾವಿಯಿಂದ ಹೊರಬಂದು ಸದನ ನಡೆಸುವುದಕ್ಕೆ ಅವಕಾಶ ಮಾಡಿಕೊಡುತ್ತೀರೋ ಅಥವಾ ಇಲ್ಲವೋ?

**ಶ್ರೀ ಟಿ.ಎ. ಶರವಣ:–** ಮಾನ್ಯ ಸಭಾಪತಿಯವರೆ, 'ಪಾಯಿಂಟ್ ಆಫ್ ಆರ್ಡರ್' ಬಗ್ಗೆ ಮಾತನಾಡುವುದಕ್ಕೆ ಅವಕಾಶ ಮಾಡಿಕೊಡಿ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ನಮಗೆ ಚರ್ಚೆ ಮಾಡುವುದಕ್ಕೆ ಅವಕಾಶ ಮಾಡಿಕೊಡಿ. ನಾವು ಚರ್ಚೆ ಮಾಡುವುದಕ್ಕೆ ತಯಾರಿದ್ದೇವೆ.

**(ಗೊಂದಲ)**

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಭಾರತೀಯ ಜನತಾ ಪಕ್ಷದ ಮಾನ್ಯ ಸದಸ್ಯರುಗಳು "we want justice, ರೈತ ವಿರೋಧಿ ಸರ್ಕಾರಕ್ಕೆ ಧಿಕ್ಕಾರ, ಉತ್ತರ ಕರ್ನಾಟಕ ವಿರೋಧಿ ಸರ್ಕಾರಕ್ಕೆ ಧಿಕ್ಕಾರ; ಅನುದಾನ ಕೊಡಿ, ಅನುದಾನ ಕೊಡಿ" ಎಂಬ ಘೋಷಣೆಗಳನ್ನು ಕೂಗಿದರು)**

**ಸಭಾಪತಿಯವರು:-** ಮಾನ್ಯ ಸದಸ್ಯರು ಸದನದ ಬಾವಿಯಲ್ಲಿ ನಿಂತು ಮಾತನಾಡಬಾರದು, ತಮ್ಮ ಸ್ಥಾನಕ್ಕೆ ತೆರಳಿ ಮಾತನಾಡಬೇಕು. ಈಗ ಸದನವನ್ನು ನಾಳೆ ಬೆಳಿಗ್ಗೆ 11.00 ಗಂಟೆಯವರೆಗೆ ಮುಂದೂಡುತ್ತಿದ್ದೇನೆ.

**(ಸದನವು ಸಂಜೆ 5 ಗಂಟೆ 22 ನಿಮಿಷಕ್ಕೆ ಮುಕ್ತಾಯಗೊಂಡು, ಪುನಃ ಶುಕ್ರವಾರ, 21ನೇ ಡಿಸೆಂಬರ್ ಮಾಹೆ 2018 ರಂದು ಬೆಳಿಗ್ಗೆ 11.00 ಗಂಟೆಗೆ ಸಮಾವೇಶಗೊಳ್ಳಲು ತೀರ್ಮಾನಿಸಿತು)**

~~~~~~~~~~~~

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "
~~~~~~~~~~~~